ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೦೮

**ಪಟ್ಟಿ – ೦೨**

# ಕರ್ನಾಟಕ ವಿಧಾನ ಪರಿಷತ್ತು

**ನೂರ ನಲವತ್ತಮೂರನೆಯ ಅಧಿವೇಶನ**

**ಸೋಮವಾರ, ದಿನಾಂಕ : ೦೧ನೇ ಫೆಬ್ರವರಿ, ೨೦೨೧**

---

## ಸಮೂಹ – I

೧. ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.

೨. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು.

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ವೈದ್ಯಕೀಯ ಶಿಕ್ಷಣ ಹಾಗೂ ಹಜ್ ಮತ್ತು ವಕ್ಫ್ ಸಚಿವರು.

೫. ಅರಣ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು.

೬. ಪ್ರವಾಸೋದ್ಯಮ ಮತ್ತು ಪರಿಸರ ಮತ್ತು ಜೀವಿ ಪರಿಸ್ಥಿತಿ ಸಚಿವರು.

೭. ಕಾರ್ಮಿಕ ಸಚಿವರು.

೮. ಸಮಾಜ ಕಲ್ಯಾಣ ಸಚಿವರು.

---

## ಬೀದರ್ ಜಿಲ್ಲೆಯಲ್ಲಿನ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೧ (೧೫೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೭ರಲ್ಲಿ ಮಂಜೂರಾದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಫೇಸ್ ಒಂದರ ಪ್ರಕಾರ ಕಟ್ಟಡ ನಿರ್ಮಾಣಕ್ಕೆ ಎಷ್ಟು ಹಣ ಖರ್ಚು ಮಾಡಲಾಗಿದೆ; ಫೇಸ್ ಎರಡರಲ್ಲಿ ಎಷ್ಟು ಹಣ ಖರ್ಚು ಮಾಡಲಾಗಿದೆ; ಅದರ ವಿವರ ಒದಗಿಸುವುದು ;

(ಆ) ಈ ಕಾಲೇಜಿನ ಕಟ್ಟಡ ಮುಗಿಯುವುದು ಯಾವಾಗ ಮತ್ತು ಕಾಲೇಜು ಪ್ರಾರಂಭವಾಗುವುದು ಯಾವಾಗ ?

## ಬೀದರ್ ಬ್ರಿಮ್ಸ್ ವೈದ್ಯಕೀಯ ಕಾಲೇಜಿನ ಅವ್ಯವಹಾರದ ಕುರಿತು.

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೨ (೧೫೩) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೮–೧೯ ಮತ್ತು ೨೦೧೯–೨೦ರಲ್ಲಿ ಎಷ್ಟು ಜನರನ್ನು ನೇಮಕ ಮಾಡಿಕೊಳ್ಳಲಾಗಿದೆ; ನೇಮಕಾತಿ ಮಾಡಿಕೊಳ್ಳಲು ಅಧಿಸೂಚನೆ ಹೊರಡಿಸಲಾಗಿದೆಯೇ; ಹೊರಡಿಸಿದ್ದಲ್ಲಿ, ಅಧಿಸೂಚನೆಯ ಪ್ರತಿಯನ್ನು ನೀಡುವುದು ; ಮತ್ತು ಯಾವ

ರೀತಿಯಲ್ಲಿ ನೇಮಕಾತಿ ಮಾಡಿಕೊಳ್ಳಲಾಗಿದೆ; ನೇಮಕವಾದಂತಹ ಅಭ್ಯರ್ಥಿಗಳ ವಿವರ ನೀಡುವುದು ;

(ಆ) ಬ್ರಿಮ್ಸ್ ಮಹಾವಿದ್ಯಾಲಯದಲ್ಲಿ ನಡೆದಿದೆಯೆನ್ನಲಾದ ಭ್ರಷ್ಟಚಾರವನ್ನು ಎ.ಸಿ.ಬಿ ತನಿಖೆ ನಡೆಸಿದೆಯೇ; ನಡೆದಿದ್ದಲ್ಲಿ, ತನಿಖೆಯ ವರದಿಯ ವಿವರ ಒದಗಿಸುವುದು; ಹಾಗೂ ಕ್ರಮ ಕೈಗೊಂಡ ಬಗ್ಗೆ ವಿವರ ನೀಡುವುದು ;

(ಇ) ಬ್ರಿಮ್ಸ್ ಆಸ್ಪತ್ರೆಯಲ್ಲಿ ರೋಗಿಗಳಿಗೆ ನೀಡುತ್ತಿರುವ ಆಹಾರ ಪದಾರ್ಥಗಳ ಅವ್ಯವಹಾರ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಬೀದರ್ ಜಿಲ್ಲೆಯಲ್ಲಿ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ದೌರ್ಜನ್ಯ ನಿಯಂತ್ರಣದ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೩ (೧೫೪) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೭–೧೮ ರಿಂದ ೨೦೧೯–೨೧ ರವರೆಗೆ ಜಿಲ್ಲೆಯಲ್ಲಿ ಎಷ್ಟು ದೌರ್ಜನ್ಯ (ಎಸ್.ಸಿ. ಮತ್ತು ಎಸ್.ಟಿ) ಪ್ರಕರಣಗಳು ದಾಖಲೆಯಾಗಿವೆ; ಅವುಗಳು ಯಾವುವು ; (ವಿವರವಾದ ಮಾಹಿತಿ ನೀಡುವುದು)

(ಆ) ಜಿಲ್ಲೆಯಲ್ಲಿ ಇಲ್ಲಿಯವರೆಗೆ ದೌರ್ಜನ್ಯಕ್ಕೆ ಒಳಗಾದವರಿಗೆ ಎಷ್ಟು ಪರಿಹಾರ ನೀಡಲಾಗಿದೆ; ನೀಡಿದ್ದಲ್ಲಿ, ಅದರ ವಿವರವಾದ ಮಾಹಿತಿಯನ್ನು ಒದಗಿಸುವುದು ;

(ಇ) ಜಿಲ್ಲೆಯಲ್ಲಿ ೨೦೧೭ ರಿಂದ ೨೦೨೧ರವರೆಗೆ ದೌರ್ಜನ್ಯ ನಿಯಂತ್ರಣ ಸಮಿತಿಯ ಎಷ್ಟು ಸಭೆಗಳಾಗಿವೆ ? (ವಿವರ ಒದಗಿಸುವುದು)

## ಬೀದರ್ ಜಿಲ್ಲೆಯ ಬಿ.ಎಸ್.ಎಸ್.ಕೆ. ಸಕ್ಕರೆ ಕಾರ್ಖಾನೆಯನ್ನು ಪ್ರಾರಂಭಿಸುವ ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೪ (೧೫೧) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೈತರ ಜೀವನಾಡಿಯಾಗಿರುವ ಬಿ.ಎಸ್.ಎಸ್.ಕೆ. ಸಕ್ಕರೆ ಕಾರ್ಖಾನೆಯನ್ನು ಕಳೆದ ಎರಡು ಹಂಗಾಮಿನಿಂದ ಪ್ರಾರಂಭ ಮಾಡದೆ ಬಂದ್ ಮಾಡಲಾಗಿದ್ದು, ಅಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರಿಗೆ ಎರಡು ವರ್ಷದಿಂದ ಸಂಬಳ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅವರಿಗೆ ಪರಿಹಾರ ನೀಡುವ ಯೋಚನೆ ಸರ್ಕಾರಕ್ಕೆ ಇದೆಯೇ; ಇದ್ದಲ್ಲಿ, ಯಾವಾಗ ಪರಿಹಾರ ನೀಡಲಾಗುವುದು ;

(ಆ) ಈ ಕಾರ್ಖಾನೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರಿಗೆ ಪರ್ಯಾಯ ಪರಿಹಾರ ನೀಡುವ ಯೋಜನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಹಮ್ಮಿಕೊಂಡಿರುವ ಯೋಜನೆಗಳಾವುವು ;

(ಇ) ಸದರಿ ಕಾರ್ಖಾನೆಯನ್ನು ಪುನಃಶ್ಚೇತನ ಮಾಡುವ ಯೋಜನೆ ಸರ್ಕಾರಕ್ಕಿದೆಯೇ; ಇದ್ದರೆ, ಯಾವಾಗ ಪ್ರಾರಂಭಿಸಲಾಗುವುದು; ಇಲ್ಲದಿದ್ದರೆ ಅದಕ್ಕೆ ಕಾರಣವೇನು ?

# ಬೀದರ್ ಜಿಲ್ಲೆಯಲ್ಲಿ ಎನ್.ಹೆಚ್.ಎಮ್. ಯೋಜನೆಯಡಿಯಲ್ಲಿ ನೇಮಕಾತಿ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೫ (೧೫೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭–೧೮ ರಿಂದ ೨೦೧೯–೨೦ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಎನ್.ಹೆಚ್.ಎಮ್. ಯೋಜನೆಯಡಿಯಲ್ಲಿ ಮಂಜೂರಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು; ಹಾಗೂ ಈ ಯೋಜನೆಯಡಿಯಲ್ಲಿ ಎಷ್ಟು ಹುದ್ದೆಗಳನ್ನು ನೇಮಕ ಮಾಡಿಕೊಳ್ಳಲಾಗಿದೆ ; (ಅಧಿಸೂಚನೆಯ ಪ್ರತಿಯೊಂದಿಗೆ ಸಂಪೂರ್ಣವಾದ ಮಾಹಿತಿ ನೀಡುವುದು)

(ಆ) ೨೦೧೭–೧೮ ರಿಂದ ೨೦೧೯–೨೦ನೇ ಸಾಲಿನಲ್ಲಿ ಜಿಲ್ಲೆಯಲ್ಲಿ ಹೊರ ಗುತ್ತಿಗೆ ಆಧಾರದ ಮೇಲೆ 'ಡಿ' ಗ್ರೂಪ್ ನೌಕರರ ನೇಮಕಾತಿ ಮಾಡಲಾಗಿದೆಯೇ; ಮಾಡಿದ್ದಲ್ಲಿ, ಯಾವ ನಿಯಮದ ಪ್ರಕಾರ ಮತ್ತು ಯಾವ ಆಧಾರದ ಮೇಲೆ ಯಾರ ಅಧ್ಯಕ್ಷತೆಯಲ್ಲಿ ನೇಮಕಾತಿ ಮಾಡಲಾಗಿದೆ; ಆ ನೇಮಕಾತಿಗೆ ಪತ್ರಿಕಾ ಪ್ರಕಟಣೆ ಹೊರಡಿಸಲಾಗಿದೆಯೇ ; ಹೊರಡಿಸಿದ್ದಲ್ಲಿ, ಅದರ ಸಂಪೂರ್ಣವಾದ ಮಾಹಿತಿ ಒದಗಿಸುವುದು ;

(ಇ) ನಗರದಲ್ಲಿ ನಿಯಮಾನುಸಾರ ವಿಶೇಷ ನೇಮಕಾತಿ ಸಮಿತಿ ಮೂಲಕ ಅಧಿಸೂಚನೆ ಹೊರಡಿಸಿ ಸದರಿ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿ ಮೆರಿಟ್ ಮತ್ತು ಮೀಸಲಾತಿ ಆಧಾರದ ಮೇಲೆ ನೇಮಕಾತಿ ಮಾಡಲಾಗಿದೆಯೇ ? (ಮೆರಿಟ್ ಲಿಸ್ಟ್‌ನ ಸಂಪೂರ್ಣವಾದ ಮಾಹಿತಿ ನೀಡುವುದು)

## ಭಾಷಾ ಅಲ್ಪಸಂಖ್ಯಾತ ಶಾಲೆಗಳಲ್ಲಿ ರೋಷ್ಟರ್ ವಿನಾಯಿತಿ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೫೬ (೧೬೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಭಾಷಾ ಅಲ್ಪ ಸಂಖ್ಯಾತ ಅನುದಾನಿತ ಶಾಲಾ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಇರುವ ನಿಯಮಾವಳಿಗಳೇನು; ರೋಷ್ಟರ್ ಅನ್ವಯವಾಗುತ್ತದೆಯೇ; ಪ್ರಸ್ತುತ ಭಾಷಾ ಅಲ್ಪಸಂಖ್ಯಾತ ಶಾಲಾ ಕಾಲೇಜುಗಳಲ್ಲಿ ಎಷ್ಟು ಹುದ್ದೆಗಳು ಖಾಲಿ ಇವೆ; (ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳ ವಿವರ ನೀಡುವುದು)

(ಆ) ಈ ರೋಷ್ಟರ್ ನಿಯಮಾವಳಿಗಳಿಂದಲೇ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸಾಧ್ಯವಾಗದೇ ರೋಷ್ಟರ್ ನಿಯಮಾವಳಿಗಳಲ್ಲಿ ವಿನಾಯಿತಿಯನ್ನು ನೀಡುವಂತೆ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಯಾವ ಯಾವ ವಿನಾಯಿತಿಗಳನ್ನು ನೀಡಲು ಸರ್ಕಾರ ಮುಂದಾಗಿದೆ; (ವಿವರವನ್ನು ಒದಗಿಸುವುದು)

(ಇ) ಈ ನಿಯಮಾವಳಿಗಳಿಗೆ ವಿನಾಯಿತಿ ನೀಡುವ ಬಗ್ಗೆ ಈ ಹಿಂದೆ ಸದನದಲ್ಲಿ ಭರವಸೆ ನೀಡಲಾಗಿತ್ತೇ; ನೀಡಿದ್ದರೆ, ಈವರೆವಿಗೂ ಯಾವ ಕಾರಣಕ್ಕಾಗಿ ವಿನಾಯಿತಿ ನೀಡಿ ಆದೇಶ ಹೊರಡಿಸಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಂಡಿರುವುದಿಲ್ಲ ; (ಪ್ರಸ್ತಾವನೆಯ ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಈ ಪ್ರಾಥಮಿಕ, ಪ್ರೌಢ ಶಾಲೆಗಳಲ್ಲಿ ಶಿಕ್ಷಕರ ಮಕ್ಕಳ ಸಂಖ್ಯೆಯ ಅನುಪಾತ ಎಷ್ಟು; ಈ ನಿಯಮಾವಳಿಗಳಿಂದ ಈ ಶಿಕ್ಷಣ ಸಂಸ್ಥೆಗಳಿಗೆ ಅನ್ಯಾಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಭಾಷಿಕ/ಧಾರ್ಮಿಕ ಅಲ್ಪಸಂಖ್ಯಾತ ಶಾಲೆಗಳಲ್ಲಿ ತಾರತಮ್ಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಅನುದಾನಿತ ಶಾಲಾ ಕಾಲೇಜುಗಳಲ್ಲಿ ಖಾಲಿ ಹುದ್ದೆ ಭರ್ತಿ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೫೭ (೧೬೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಅನುದಾನಿತ ಪ್ರಾಥಮಿಕ ಪ್ರೌಢ ಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಿವೆ; ಯಾವ ವರ್ಷದವರೆಗೆ ಎಷ್ಟು ಅನುದಾನಿತ ಹುದ್ದೆಗಳನ್ನು ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆ ; ಹುದ್ದೆಗಳ ಭರ್ತಿಗೆ ಇರುವ ನಿಯಮಾವಳಿಗಳೇನು ; (ನಿಯಮಾವಳಿಗಳ ಪ್ರತಿ ನೀಡುವುದು)

(ಆ) ೨೦೧೫ ರಿಂದ ಇಲ್ಲಿಯವರೆಗೆ ಅನುದಾನಿತ ಹುದ್ದೆಗಳನ್ನು ಭರ್ತಿ ಮಾಡಿದಲ್ಲಿ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲು ಅವಕಾಶ ಕಲ್ಪಿಸಬಹುದಾಗಿದೆ; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲು ಅನುಮತಿ ನೀಡಲಾಗುವುದು ?

## ಆರ್ಥಿಕ ಮಿತವ್ಯಯ ಸಡಿಲಿಕೆ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೫೮ (೧೬೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನುದಾನಿತ ಪ್ರಾಥಮಿಕ, ಪ್ರೌಢ ಶಾಲೆ ಹಾಗೂ ಪದವಿ ಪೂರ್ವ ಹಾಗೂ ಪದವಿ ಕಾಲೇಜುಗಳಲ್ಲಿ ಖಾಲಿ ಹುದ್ದೆ ಭರ್ತಿ ಮಾಡುವ ಕುರಿತಂತೆ ಆರ್ಥಿಕ ಇಲಾಖೆಯ ಆರ್ಥಿಕ ಮಿತವ್ಯಯದ ಆದೇಶ ಹೊರಡಿಸಿ ಹುದ್ದೆ ಭರ್ತಿ ಮಾಡುವುದನ್ನು ತಡೆಹಿಡಿಯಲಾಗಿದೆಯೇ ; ಯಾವಾಗ ತಡೆಹಿಡಿಯಲಾಗಿದೆ ; (ಆದೇಶವನ್ನು ಒದಗಿಸುವುದು)

(ಆ) ಈಗಾಗಲೇ ಆರ್ಥಿಕ ಇಲಾಖೆಯ ಅನುಮತಿ ನೀಡಿರುವ ಹುದ್ದೆಗಳಿಗೆ ಅನುದಾನ ಒದಗಿಸಲು ಇರುವ ತೊಂದರೆ ಏನು ;

(ಇ) ಈ ಆದೇಶದಿಂದ ಅನುದಾನಿತ ವ್ಯವಸ್ಥೆಯ ಈ ಎಲ್ಲ ನೌಕರರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ಆರ್ಥಿಕ ಮಿತವ್ಯಯದ ಆದೇಶವನ್ನು ಹಿಂಪಡೆಯುವಂತೆ ಮುಖ್ಯಮಂತ್ರಿಗಳಿಗೆ ಶಾಸಕರ ಒತ್ತಡಗಳು ಬಂದಿದೆಯೇ; ಪ್ರತಿಯೊಂದು ಪತ್ರದ ವಿವರ ಹಾಗೂ ಪ್ರಸ್ತಾವನೆಗಳ ವಿವರವನ್ನು ಒದಗಿಸುವುದು; ಮುಖ್ಯಮಂತ್ರಿಗಳ ಷರಾ ಸಹಿತ ಕಡತವು ಯಾವ ಹಂತದಲ್ಲಿದೆ ;

(ಉ) ಈಗಾಗಲೇ ಆರ್ಥಿಕ ಇಲಾಖೆಯು ಅನುಮತಿ ನೀಡಿ ಹುದ್ದೆ ಭರ್ತಿ ಮಾಡಲು ಸಹ ಅನುಮತಿ ನೀಡಿರುವ ಕಡತಗಳಿಗೆ ವೇತನ ಒದಗಿಸಲು ಸರ್ಕಾರ ಮುಂದಾಗುವುದೇ ; ಆರ್ಥಿಕ ಮಿತವ್ಯಯದ ಆದೇಶವನ್ನು ಯಾವಾಗ ಹಿಂಪಡೆಯಲಾಗುವುದು ?

## ಪ್ರಾಚಾರ್ಯರ ಹುದ್ದೆಗಳ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೫೯ (೧೬೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಪ್ರಾಚಾರ್ಯರ ಹುದ್ದೆಗಳ ಸಂಖ್ಯೆ ಎಷ್ಟು; ನೇರ ನೇಮಕಾತಿ ಮತ್ತು ಅರ್ಹ ಉಪನ್ಯಾಸಕರಿಂದ ಬಡ್ತಿ ನೀಡಲು ಸರ್ಕಾರ ಕ್ರಮ ಕೈಗೊಂಡಿದೆಯೇ ; ಕ್ರಮ ಕೈಗೊಂಡಿದ್ದಲ್ಲಿ ಬಡ್ತಿಗೆ ಮೀಸಲಿರುವ ಎಷ್ಟು ಪ್ರಾಚಾರ್ಯರ ಹುದ್ದೆಗಳಿಗೆ ಬಡ್ತಿ ನೀಡಲಾಗಿದೆ; ನೀಡದಿದ್ದಲ್ಲಿ, ಸದರಿ ಪ್ರಕ್ರಿಯೆಯನ್ನು ಯಾವಾಗಿನಿಂದ ಪ್ರಾರಂಭಿಸಲಾಗುವುದು ;

(ಆ) ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ಈಗಿರುವ ವೃಂದ ಮತ್ತು ನೇಮಕಾತಿ ನಿಯಮಾವಳಿಗಳೇನು; ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಲ್ಲಿ ನೇರ ನೇಮಕಾತಿ ಮೂಲಕ ಎಷ್ಟು ಪ್ರಾಚಾರ್ಯರ ಹುದ್ದೆಗಳನ್ನು ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆ ? (ಆದೇಶದ ಪ್ರತಿ ನೀಡುವುದು)

## ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿ ಬರುವ ವಿವಿಧ ನಿಗಮಗಳಿಂದ ಕೊರೆದ ಕೊಳವೆ ಬಾವಿಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿ ಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೦ (೯೯) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೫ ವರ್ಷಗಳಲ್ಲಿ ಮಂಡ್ಯ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿ ಬರುವ ವಿವಿಧ ನಿಗಮಗಳಿಂದ ಕೊರೆದ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; ನಿಗಮವಾರು/ವರ್ಷವಾರು/ ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು ;

(ಆ) ಗಂಗಾ ಕಲ್ಯಾಣ ಯೋಜನೆಯನ್ನು ಅನುಷ್ಠಾನಗೊಳಿಸುವಲ್ಲಿ ಅನುಸರಿಸುವ ಮಾನದಂಡಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಗಂಗಾ ಕಲ್ಯಾಣ ಯೋಜನೆಯಡಿ ಕೊಳವೆಬಾವಿ ಕೊರೆಯುವುದರಲ್ಲಿ ನಡೆದಿರುವ ಅವ್ಯವಹಾರದ ಬಗ್ಗೆ ರಚಿಸಲಾದ ತನಿಖಾ ತಂಡ ವರದಿಯನ್ನು ನೀಡಲಾಗಿದೆಯೇ ; ನೀಡಿದ್ದಲ್ಲಿ, ವರದಿಯ ಪ್ರತಿಯನ್ನು ಒದಗಿಸುವುದು ;

(ಈ) ಅವ್ಯವಹಾರದಲ್ಲಿ ಭಾಗಿಯಾದ ತಪ್ಪಿತಸ್ಥರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನಡೆಯುತ್ತಿರುವ ವಸತಿ ಶಾಲೆಗಳಿಗೆ ಹೊಸದಾಗಿ ೬ ನೇ ತರಗತಿ ದಾಖಲಾತಿಗೆ ಸಂಬಂಧಿಸಿದಂತೆ ಆನ್‌ಲೈನ್ ಮುಖಾಂತರ ಅರ್ಜಿ ಆಹ್ವಾನಿಸಿರುವ ಬಗ್ಗೆ

**ಶ್ರೀ ಎನ್. ಅಪ್ಪಾಜಿ ಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೧ (೬೮) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೦–೨೧ ನೇ ಸಾಲಿನಲ್ಲಿ ಕೋವಿಡ್–೧೯ ರ ಹಿನ್ನಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನಡೆಯುತ್ತಿರುವ ವಸತಿ ಶಾಲೆಗಳಿಗೆ ಹೊಸದಾಗಿ ೬ನೇ ತರಗತಿ ದಾಖಲಾತಿ

ಸಂಬಂಧಿಸಿದಂತೆ ಆನ್‌ಲೈನ್ ಮುಖಾಂತರ ಅರ್ಜಿ ಆಹ್ವಾನಿಸಲಾಗಿದೆಯೇ; ಆಹ್ವಾನಿಸಿದ್ದಲ್ಲಿ, ಮಂಡ್ಯ ಜಿಲ್ಲೆಯಲ್ಲಿ ಎಷ್ಟು ಮಕ್ಕಳು ಅರ್ಜಿ ಸಲ್ಲಿಸಿದ್ದಾರೆ; ಹಾಗೂ ಅಂತಿಮವಾಗಿ ವಸತಿ ಶಾಲೆಗೆ ಆಯ್ಕೆಯಾದ ಮಕ್ಕಳ ವಿವರ ನೀಡುವುದು ;

(ಆ) ೬ ರಿಂದ ೧೨ ನೇ ತರಗತಿವರೆಗೆ ೨೦೨೦-೨೧ ನೇ ಸಾಲಿನಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ಆನ್‌ಲೈನ್ ಅಥವಾ ಆಪ್‌ಲೈನ್ ತರಗತಿಗಳನ್ನು ಅಥವಾ ವಿದ್ಯಾಗಮದಂತಹ ಯೋಜನೆಯನ್ನು ಪ್ರಾರಂಭ ಮಾಡಿದೆಯೇ ; (ವಿವರ ನೀಡುವುದು)

(ಇ) ಸದರಿ ವಸತಿ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಖಾಯಂ ಮತ್ತು ತಾತ್ಕಾಲಿಕ ನೌಕರರಿಗೆ ಇಲಾಖೆ ಯಾವ ಕಾರ್ಯ ಚಟುವಟಿಕೆಗಳನ್ನು ಹಂಚಿಕೆ ಮಾಡಿದೆ ; (ವಿವರ ನೀಡುವುದು)

(ಈ) ತಾತ್ಕಾಲಿಕ ನೌಕರರಿಗೆ ಕೋವಿಡ್-೧೯ರ ಸಂದರ್ಭದಲ್ಲಿ ವೇತನ ಪಾವತಿ ಮಾಡಲಾಗುತ್ತಿದೆಯೇ; ಪಾವತಿ ಮಾಡದಿದ್ದಲ್ಲಿ ಅವರ ಕುಟುಂಬ ನಿರ್ವಹಣೆಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲು ಮುಂದಾಗಿದೆ ; (ವಿವರ ನೀಡುವುದು)

(ಉ) ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನಿರ್ವಹಣೆಯಲ್ಲಿರುವ ಮೆಟ್ರಿಕ್ ನಂತರದ ವಸತಿ ನಿಲಯಗಳಲ್ಲಿ ೨೦೨೦-೨೧ನೇ ಸಾಲಿನಲ್ಲಿ ಪದವಿ ಶಿಕ್ಷಣ ಪ್ರಾರಂಭವಾದ ನಂತರ ಮಕ್ಕಳನ್ನು ವಸತಿ ನಿಲಯಕ್ಕೆ ದಾಖಲು ಮಾಡಿಕೊಳ್ಳಲಾಗಿದೆಯೇ; ಆಗಿದ್ದಲ್ಲಿ, ಎಷ್ಟು ಮಕ್ಕಳು ದಾಖಲಾಗಿದ್ದಾರೆ; ಪ್ರಸ್ತುತ ಕೋವಿಡ್ ಪರಿಸ್ಥಿತಿಯಲ್ಲಿ ಯಾವ ಮುಂಜಾಗ್ರತೆ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

# ರಾಜ್ಯದಲ್ಲಿ ಉನ್ನತ ಶಿಕ್ಷಣ ಕಾಲೇಜುಗಳು ಮರು ಆರಂಭ ಮಾಡುವ ಬಗ್ಗೆ

**ಶ್ರೀ ಎನ್. ಅಪ್ಪಾಜಿ ಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೨ (೭೦) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಉನ್ನತ ಶಿಕ್ಷಣದ ಕಾಲೇಜುಗಳು ಮರು ಆರಂಭವಾದ ಹಿನ್ನಲೆಯಲ್ಲಿ ರಾಜ್ಯದ ಎಷ್ಟು ಕಾಲೇಜುಗಳು ಕಾರ್ಯಾರಂಭ ಮಾಡಿವೆ; ಎಷ್ಟು ವಿದ್ಯಾರ್ಥಿಗಳ ದಾಖಲಾತಿ ಆಗಿದೆ ; (ವಿವರ ನೀಡುವುದು)

(ಆ) ಸರ್ಕಾರದ ಆದೇಶಕ್ಕೂ ಮೊದಲೇ ರಾಜ್ಯದ ಹಲವು ಕಾಲೇಜುಗಳು ಕಾರ್ಯಾಚರಣೆ ಆರಂಭಿಸಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಆ ಕಾಲೇಜುಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಇ) ತಾಲ್ಲೂಕು ಕೇಂದ್ರಗಳ ಕಾಲೇಜಿನಲ್ಲಿ ಸ್ಯಾನಿಟೈಸೇಷನ್, ಥರ್ಮಲ್ ಸ್ಕ್ರೀನಿಂಗ್, ರ್‍ಯಾಪಿಡ್ ಆಂಟಿಜನ್ ಮತ್ತು ಆರ್.ಟಿ.ಪಿ.ಸಿ.ಆರ್ ಪರೀಕ್ಷೆ ಸರಿಯಾದ ರೀತಿಯಲ್ಲಿ ನಡೆಸಲಾಗಿದೆಯೇ; ಈ ಸಂಬಂಧ ಆಗಿರುವ ವೆಚ್ಚದ ಮೊತ್ತವೆಷ್ಟು ? (ಸಂಪೂರ್ಣ ವಿವರ ನೀಡುವುದು)

## ಆರೋಗ್ಯ ಕೇಂದ್ರಗಳಲ್ಲಿ ವೈದ್ಯರು ಮತ್ತು ಅಗತ್ಯ ಸಿಬ್ಬಂದಿಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿ ಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೩ (೬೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಸ್ಥಾಪನೆ ಮಾಡಲಾಗಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಎಷ್ಟು; ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರು ಮತ್ತು ಅಗತ್ಯ ಸಿಬ್ಬಂದಿಗಳು ಇದ್ದಾರೆಯೇ; ಇಲ್ಲದಿದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಂಡಿದೆ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ನಾಗಮಂಗಲ ತಾಲ್ಲೂಕಿನ ಹೋಬಳಿ ಕೇಂದ್ರ ಸ್ಥಾನಗಳಾದ ದೇವಲಾಪುರ, ಹೊನಕೆರೆ/ಚೀಣ್ಯಗಳಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಇ) ಹಾಗಿದ್ದಲ್ಲಿ, ಈ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಲು ಸರ್ಕಾರ ಅನುದಾನವನ್ನು ಮೀಸಲಿರಿಸಿದೆಯೇ; ಹೌದಾದಲ್ಲಿ, ಯಾವ ಕಾಲಿಮಿತಿಯಲ್ಲಿ ಈ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಲಾಗುವುದು; ಇಲ್ಲದಿದ್ದಲ್ಲಿ, ಅದಕ್ಕೆ ಕಾರಣಗಳೇನು ?

## ಕರ್ನಾಟಕ ಪಬ್ಲಿಕ್ ಶಾಲೆ ಪ್ರಾರಂಭಿಸುವ ಕುರಿತು

**ಶ್ರೀ ಎನ್. ಅಪ್ಪಾಜಿ ಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೪ (೬೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೦ ರ ಆಯವ್ಯಯದಲ್ಲಿ ಘೋಷಿಸಿರುವಂತೆ ಈಗಾಗಲೇ ಪೂರ್ವ ಪ್ರಾಥಮಿಕ ತರಗತಿಯಿಂದ ೧೨ನೇ ತರಗತಿವರೆಗೆ ಒಂದೇ ಸೂರಿನಡಿ ಶಿಕ್ಷಣ ನೀಡುವ ಸಲುವಾಗಿ ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭ ಮಾಡಿ ಸದರಿ ಶಾಲೆಗಳಿಗೆ ಅಗತ್ಯ ಮೂಲ ಸೌಲಭ್ಯ ಒದಗಿಸಲು ೧೦೦ ಕೋಟಿ ಅನುದಾನ ಒದಗಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಪ್ರಗತಿಯ ಕಾರ್ಯ ಯಾವ ಹಂತದಲ್ಲಿದೆ; ಯಾವ ಯಾವ ಶಾಲೆಗಳಿಗೆ ಮೂಲ ಸೌಲಭ್ಯ ಒದಗಿಸಲಾಗಿದೆ; ಒದಗಿಸದಿದ್ದಲ್ಲಿ, ಕಾರಣಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಮಂಡ್ಯ ಜಿಲ್ಲೆ, ನಾಗಮಂಗಲ ತಾಲ್ಲೂಕು ವ್ಯಾಪ್ತಿಯಲ್ಲಿ ಎಷ್ಟು ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸಲಾಗಿದೆ; ಸದರಿ ಶಾಲೆಗಳಲ್ಲಿ ಮೂಲ ಸೌಲಭ್ಯ ಒದಗಿಸಲು ಈವರೆಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು ? (ತಾಲ್ಲೂಕುವಾರು ಪ್ರಗತಿ ವಿವರವನ್ನು ನೀಡುವುದು)

## ವೈದ್ಯಾಧಿಕಾರಿಗಳ ಕೊರತೆ ಬಗ್ಗೆ

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೫ (೭೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯ ಜಿಲ್ಲಾ ಆಸ್ಪತ್ರೆಗಳಲ್ಲಿ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ ವೈದ್ಯಾಧಿಕಾರಿಗಳ ಕೊರತೆಯಿಂದ ಸಾರ್ವಜನಿಕರಿಗೆ ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡ ಕ್ರಮಗಳೇನು;

(ಆ) ರಾಯಚೂರು ಜಿಲ್ಲಾ ಆಸ್ಪತ್ರೆಯಲ್ಲಿ ಯಾವ ಯಾವ ತಜ್ಞ ವೈದ್ಯರ ಹುದ್ದೆ ಖಾಲಿ ಇದೆ ? (ವಿವರ ಒದಗಿಸುವುದು)

## ಶಾಲಾ ಮಕ್ಕಳ ಸಮವಸ್ತ್ರಗಳ ಬಗ್ಗೆ

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) :–**

೬೬ (೧೮೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಶಾಲಾ ಮಕ್ಕಳಿಗೆ ಇಲ್ಲಿಯವರೆಗೆ ವಿತರಿಸಲಾಗುತ್ತಿರುವ ಸಮವಸ್ತ್ರಗಳ ಪ್ರಮಾಣವೆಷ್ಟು ; (ವಾರ್ಷಿಕವಾರು ಕಳೆದ ಮೂರು ವರ್ಷಗಳ ಮಾಹಿತಿ ಒದಗಿಸುವುದು)

(ಆ) ಇದಕ್ಕೆ ವಾರ್ಷಿಕವಾಗಿ ತಗಲುತ್ತಿದ್ದ ವೆಚ್ಚ ಎಷ್ಟು ; (ಕಳೆದ ೩ ವರ್ಷಗಳ ಮಾಹಿತಿ ಒದಗಿಸುವುದು)

(ಇ) ಸದರಿ ಸಮವಸ್ತ್ರಗಳನ್ನು ಎಲ್ಲಿಂದ ಖರೀದಿಸಲಾಗುತ್ತಿತ್ತು ;

(ಈ) ಜವಳಿ ಅಭಿವೃದ್ಧಿ ನಿಗಮದಿಂದ ಖರೀದಿಸುವ ಬಗ್ಗೆ ಸರ್ಕಾರದ ಅಭಿಪ್ರಾಯಗಳೇನು ?

## ಖಾಲಿ ಶಿಕ್ಷಕರ ಹುದ್ದೆಗಳ ಮಾಹಿತಿ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೬೭ (೧೪೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ (ಪ್ರಾಥಮಿಕ, ಪ್ರೌಢ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ) ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಹಲವಾರು ವರ್ಷಗಳಿಂದಲೂ ನಿವೃತ್ತಿ, ಅಕಾಲಿಕ ಮರಣದಿಂದಾಗಿ ಖಾಲಿ ಇರುವ ಹುದ್ದೆಗಳನ್ನು ತುಂಬಿಕೊಳ್ಳಲು ಸರ್ಕಾರ ಅನುಮತಿ ನೀಡದೆ ಇರುವುದರಿಂದ ಶೈಕ್ಷಣಿಕ ಚಟುವಟಿಕೆಗಳು ಕುಂಟಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಸಮಸ್ಯೆಯ ಪರಿಹಾರಕ್ಕೆ ಸರ್ಕಾರ ಯಾವುದಾದರೂ ತಾತ್ಕಾಲಿಕ ಅಥವಾ ಶಾಶ್ವತ ಪರಿಹಾರಗಳನ್ನು ಕೈಗೊಂಡಿದೆಯೇ ? (ಮಾಹಿತಿ ನೀಡುವುದು)

## ಪ್ರಾಥಮಿಕ ಶಾಲೆಗಳ ಶಿಕ್ಷಕರ ಮಾಹಿತಿ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೬೮ (೧೪೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪ್ರಾಥಮಿಕ ಶಾಲಾ ಸಹ ಶಿಕ್ಷಕರ (೧ ರಿಂದ ೫ನೇ ತರಗತಿಗೆ ಬೋಧಿಸುವವರು) ಸಂಖ್ಯೆ ಎಷ್ಟು ;

(ಆ) ಮೇಲ್ಕಂಡ ಶಿಕ್ಷಕರಲ್ಲಿ ಪದವೀಧರ ಶಿಕ್ಷಕರ ಸಂಖ್ಯೆ ಎಷ್ಟು ;

(ಇ) ಪದವೀಧರ ಪ್ರಾಥಮಿಕ ಪದವಿ ಶಿಕ್ಷಕರನ್ನು ೬ ಮತ್ತು ೭ನೇ ತರಗತಿಗೆ ಬೋಧಿಸಲು ಖಾಲಿ ಇರುವ ಹುದ್ದೆಗಳಿಗೆ ವಿಲೀನ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ? (ಮಾಹಿತಿ ನೀಡುವುದು)

## ಸರ್ಕಾರಿ ಕಾಲೇಜುಗಳಲ್ಲಿ ಖಾಲಿ ಉಪನ್ಯಾಸಕರ ಹುದ್ದೆಗಳ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :-**

೬೯ (೧೪೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿಯಿರುವ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳು ಎಷ್ಟು ;

(ಆ) ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕಾರ್ಯ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು ;

(ಇ) ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕಾರ್ಯ ನಿರ್ವಹಿಸುತ್ತಿರುವವರ ಯು.ಜಿ.ಸಿ., ನಿಯಮಾವಳಿಯಂತೆ ವಿದ್ಯಾರ್ಹತೆ ಪಡೆದಿರುವವರನ್ನು ಖಾಯಂಗೊಳಿಸಲು ಸರ್ಕಾರಕ್ಕಿರುವ ಅಡೆ-ತಡೆಗಳೇನು ?

## ಕರ್ನಾಟಕ ರಾಜ್ಯದಲ್ಲಿ ಅನುದಾನ ರಹಿತ ಶಿಕ್ಷಕರ ಮಾಹಿತಿ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :-**

೭೦ (೧೪೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪದವಿ ಉಪನ್ಯಾಸಕರು ಮತ್ತು ಭೋದಕೇತರ ನೌಕರರ ಸಂಖ್ಯೆ ಎಷ್ಟು ;

(ಆ) ಕೋವಿಡ್–೧೯ರ ಸಂದರ್ಭದಲ್ಲಿ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳ ಶಿಕ್ಷಕರು, ನೌಕರರು ಬಹಳಷ್ಟು ಸಂಕಷ್ಟಕ್ಕೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಅನುದಾನ ರಹಿತ ಶಿಕ್ಷಣ ಸಂಸ್ಥೆಗಳ ಶಿಕ್ಷಕರು ಮತ್ತು ಸರ್ಕಾರ ಸಂಕಷ್ಟದಿಂದ ಶೈಕ್ಷಣಿಕ ಚಟುವಟಿಕೆಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಅನುದಾನ ರಹಿತ ಶಿಕ್ಷಣ ಸಂಸ್ಥೆಗಳ ಶಿಕ್ಷಕರು ಮತ್ತು ನೌಕರರಿಗೆ ಸರ್ಕಾರ ಯಾವುದಾದರೂ ವಿಶೇಷ ಪ್ಯಾಕೇಜ್ ನೀಡುವ ಚಿಂತನೆ ಇದೆಯೇ ? (ಮಾಹಿತಿ ನೀಡುವುದು)

## "ಸಕಾಲ" ಇಲಾಖೆಯ ಕಾರ್ಯವ್ಯಾಪ್ತಿ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೧ (೧೯೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸಕಾಲ ಇಲಾಖೆಯ ಕೆಲಸ ಕಾರ್ಯಗಳೇನು ;

(ಆ) ಸಾರ್ವಜನಿಕರಿಗೆ ಸಕಾಲ ಇಲಾಖೆಯಿಂದ ಯಾವ ರೀತಿ ಉಪಯೋಗವಾಗುತ್ತಿದೆ ; (ವಿವರಗಳನ್ನು ನೀಡುವುದು)

(ಇ) ಆಡಳಿತದಲ್ಲಿ ಚುರುಕು ಉಂಟಾಗುವಂತೆ ಮಾಡಲು ಈ ಇಲಾಖೆಯಿಂದ ಯಾವ ರೀತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ? (ಕಳೆದ ಎರಡು ವರ್ಷಗಳಲ್ಲಿ ಆಗಿರುವ ಪ್ರಗತಿಯ ವಿವರ ನೀಡುವುದು)

## ಬೆಂಗಳೂರು ನಗರ ವಿಶ್ವವಿದ್ಯಾನಿಲಯದ SC/ ST ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ಸೌಲಭ್ಯ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೨ (೧೯೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ವಿಶ್ವವಿದ್ಯಾನಿಲಯವನ್ನು ವಿಭಜನೆ ಮಾಡಿ ಬೆಂಗಳೂರು ನಗರ ವಿಶ್ವವಿದ್ಯಾನಿಲಯ ಸೆಂಟ್ರಲ್ ಕಾಲೇಜ್ ಕ್ಯಾಂಪಸ್‌ನಲ್ಲಿ ಕಳೆದ ೩ ವರ್ಷಗಳಿಂದ ಕಾರ್ಯ ನಿರ್ವಹಿಸುತ್ತಿರುವುದು ನಿಜವೇ ;

(ಆ) ಈ ವಿಶ್ವವಿದ್ಯಾನಿಲಯದಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಲಯ ಸೌಲಭ್ಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ವಿದ್ಯಾರ್ಥಿಗಳಿಗಾಗಿ ಮೆಟ್ರಿಕ್ ನಂತರ ವಿದ್ಯಾರ್ಥಿ ನಿಲಯವನ್ನು ಸೆಂಟ್ರಲ್ ಕಾಲೇಜ್ ಕ್ಯಾಂಪಸ್‌ನಲ್ಲಿ ೨೦೨೧-೨೦೨೨ ನೇ ಸಾಲಿನಿಂದ ಪ್ರಾರಂಭ ಮಾಡಲಾಗುವುದೇ ?

## ಕೋವಿಡ್ ಲಸಿಕೆ ಸುರಕ್ಷತೆ ಬಗ್ಗೆ ಕ್ರಮ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೩ (೧೯೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋವಿಡ್ ನಿವಾರಣೆಗಾಗಿ ಕೇಂದ್ರ ಸರ್ಕಾರದ ಸೂಚನೆಯಂತೆ ರಾಜ್ಯದಲ್ಲಿ ಸಾರ್ವಜನಿಕರಿಗೆ ನೀಡುತ್ತಿರುವ ಲಸಿಕೆ ತೆಗೆದುಕೊಳ್ಳಲು ಜನ ಹಿಂದೇಟು ಹಾಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಲಸಿಕೆ ಸುರಕ್ಷಿತವಲ್ಲ, ಇದರಿಂದ ಅಡ್ಡ ಪರಿಣಾಮಗಳು ಉಂಟಾಗುತ್ತಿದೆ ಎಂಬ ಸುದ್ದಿ ಮಾಧ್ಯಮಗಳಲ್ಲಿ ವರದಿಯಾಗುತ್ತಿದ್ದು, ಈ ಬಗ್ಗೆ ಸರ್ಕಾರದ ಅಭಿಪ್ರಾಯವೇನು ;

(ಇ) ಲಸಿಕೆಯ ಬಗ್ಗೆ ಜನರಲ್ಲಿ ಭಯ ಉಂಟಾಗಿದ್ದು, ಈ ಭಯ ನಿವಾರಣೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳುತ್ತದೆ ?

## ನರರೋಗ ಚಿಕಿತ್ಸಾ ಘಟಕಗಳನ್ನು ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಪ್ರಾರಂಭಿಸುವ ಬಗ್ಗೆ

**ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) :–**

೭೪ (೧೪೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆರು (೬) ಕೋಟಿಗೂ ಮಿಗಿಲಾದ ಜನಸಂಖ್ಯೆಯುಳ್ಳ ರಾಜ್ಯದಲ್ಲಿ ನರರೋಗ ಕಾಯಿಲೆಯಿಂದ ನರಳುತ್ತಿರುವ ರೋಗಿಗಳು ರಾಜ್ಯದ

ಏಕೈಕ NIMHANS ಆಸ್ಪತ್ರೆಯಲ್ಲಿ ಚಿಕಿತ್ಸೆಗಾಗಿ ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ನರರೋಗಕ್ಕೆ ಸಂಬಂಧಿಸಿದ ವಿವಿಧ ಕಾಯಿಲೆಗಳಿಗೆ ಉತ್ತಮ ಚಿಕಿತ್ಸೆ ನೀಡಲು ಶ್ರಮಿಸುತ್ತಿರುವ ಕೇಂದ್ರ ಸರ್ಕಾರದ NIMHANS ಆಸ್ಪತ್ರೆಯ ಶಾಖೆಗಳನ್ನು ರಾಜ್ಯದ ವಿವಿಧ ಕಡೆ ತೆರೆಯುವ ಅವಶ್ಯಕತೆ ಬಗ್ಗೆ ಸರ್ಕಾರ ಪರಿಶೀಲಿಸಿ ಕೇಂದ್ರ ಸರ್ಕಾರದ ಸಹಯೋಗದೊಂದಿಗೆ ಕ್ರಮ ಕೈಗೊಳ್ಳುವುದೇ ?

## ಹೃದ್ರೋಗ ಆಸ್ಪತ್ರೆಗಳನ್ನು ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಪ್ರಾರಂಭಿಸುವ ಬಗ್ಗೆ

**ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) :-**

೭೫ (೧೪೭) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಆರು (೬) ಕೋಟಿಗೂ ಮಿಗಿಲಾದ ಜನಸಂಖ್ಯೆಯುಳ್ಳ ರಾಜ್ಯದಲ್ಲಿ ಹೃದ್ರೋಗದಿಂದ ನರಳುತ್ತಿರುವ ರೋಗಿಗಳು ಚಿಕಿತ್ಸೆಗಾಗಿ ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹೃದ್ರೋಗ ಕಾಯಿಲೆಗಳಿಗೆ ಉತ್ತಮ ಚಿಕಿತ್ಸೆ ನೀಡಲು ಶ್ರಮಿಸುತ್ತಿರುವ ಬೆಂಗಳೂರಿನ ಜಯದೇವ ಆಸ್ಪತ್ರೆಯ ಶಾಖೆಗಳನ್ನು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಒಂದೊಂದರಂತೆ ಮತ್ತು ಬೆಂಗಳೂರಿನ ವಿವಿಧ ಕಡೆ ತೆರೆಯುವ ಅವಶ್ಯಕತೆ ಬಗ್ಗೆ ಸರ್ಕಾರ ಪರಿಶೀಲಿಸಿ ಕ್ರಮ ಕೈಗೊಳ್ಳುವುದೆ ?

# ವಿಶ್ವವಿದ್ಯಾಲಯಗಳಲ್ಲಿ ವಿದ್ಯಾರ್ಥಿಗಳ ಉತ್ತರ ಪತ್ರಿಕೆಗಳ ಮೇಲಿನ ಅಂಕಗಳನ್ನು ತಿದ್ದಿರುವ ಹಗರಣದ ಬಗ್ಗೆ

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೬ (೧೯೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿಶ್ವವಿದ್ಯಾಲಯಗಳು ವಿದ್ಯಾರ್ಥಿಗಳ ಉತ್ತರ ಪತ್ರಿಕೆಗಳನ್ನು ಸ್ಕ್ಯಾನ್ ಮಾಡಿಕೊಡಲು ಖಾಸಗಿ ಕಂಪನಿಗಳಿಗೆ ಹೊರ ಗುತ್ತಿಗೆ ನೀಡುತ್ತಿರುವುದು ನಿಜವೇ ; (ವಿಶ್ವವಿದ್ಯಾಲಯಗಳ ೩ ವರ್ಷಗಳವಾರು ಪ್ರತ್ಯೇಕವಾದ ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಬೆಂಗಳೂರು ವಿಶ್ವವಿದ್ಯಾಲಯ ಪರೀಕ್ಷಾ ಉತ್ತರ ಪತ್ರಿಕೆಗಳ ಸ್ಕ್ಯಾನಿಂಗ್‌ಗಾಗಿ ಖಾಸಗಿ ಕಂಪನಿಗೆ ಹೊರಗುತ್ತಿಗೆ ನೀಡಿದ್ದು ನಿಜವೇ; ಹಾಗಿದ್ದಲ್ಲಿ, ಸಂಸ್ಥೆಯ ಹೆಸರು, ಸ್ಕ್ಯಾನಿಂಗ್ ಮಾಡಲಾದ ಪುಟಗಳ ಸಂಖ್ಯೆ, ಪಾವತಿಸಲಾದ ಹಣ ಕುರಿತಾದ ಸಂಪೂರ್ಣ ಮಾಹಿತಿಯನ್ನು ಪ್ರತ್ಯೇಕವಾಗಿ ಒದಗಿಸುವುದು ;

(ಇ) ಸ್ಕ್ಯಾನಿಂಗ್‌ಗಾಗಿ ಹೊರಗುತ್ತಿಗೆ ಪಡೆಯಲಾದ ಸಂಸ್ಥೆಯು ಅಕ್ರಮದಲ್ಲಿ ಭಾಗಿಯಾಗಿ ವಿದ್ಯಾರ್ಥಿಗಳ ಅಂಕಪಟ್ಟಿಯಲ್ಲಿ ತಿದ್ದುಪಡಿ ಮಾಡಿರುವ ಅಂಶವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ; ಹಾಗಿದ್ದಲ್ಲಿ, ಈ ಅಕ್ರಮದಲ್ಲಿ ಭಾಗಿಯಾದ ವ್ಯಕ್ತಿಗಳು, ಅಧಿಕಾರಿಗಳು/ ಸಿಬ್ಬಂದಿ ಮತ್ತು ಸಂಸ್ಥೆಯ ವಿರುದ್ಧ ಕೈಗೊಂಡ ಕ್ರಮಗಳೇನು ; (ಪ್ರತ್ಯೇಕವಾಗಿ ವಿವರ ಒದಗಿಸುವುದು)

(ಈ) ಮುಂದಿನ ದಿನಗಳಲ್ಲಿ ಈ ರೀತಿಯಾಗಿ ಅಕ್ರಮ ತಡೆಯಲು ಕೈಗೊಂಡ ದೀರ್ಘಾವಧಿ ಕ್ರಮ ಮತ್ತು ಸರ್ಕಾರದ ಆಲೋಚನೆ ಏನು ? (ವಿವರ ಒದಗಿಸುವುದು)

## ಸರ್ಕಾರಿ ಶಾಲೆಗಳಲ್ಲಿ ಕುಡಿಯುವ ನೀರು ಹಾಗೂ ಶೌಚಾಲಯ ಕೊರತೆ ಕುರಿತು

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೭ (೧೯೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಕುಡಿಯುವ ನೀರು ಹಾಗೂ ಶೌಚಾಲಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಜಿಲ್ಲಾವಾರು ಪ್ರತ್ಯೇಕ ಅಂಕಿ–ಅಂಶಗಳ ಮಾಹಿತಿ ಒದಗಿಸುವುದು)

(ಆ) ಈ ಸರ್ಕಾರಿ ಶಾಲೆಗಳಲ್ಲಿ ಶೌಚಾಲಯ ನಿರ್ಮಾಣಕ್ಕಾಗಿ ಕಳೆದ ೩ ವರ್ಷಗಳ ಅವಧಿಯಲ್ಲಿ ರಾಜ್ಯ ಮತ್ತು ಕೇಂದ್ರ ಸರ್ಕಾರದಿಂದ ದೊರೆತಿರುವ ಅನುದಾನ ಎಷ್ಟು ; (ವರ್ಷವಾರು, ರಾಜ್ಯ–ಕೇಂದ್ರ ಸರ್ಕಾರಗಳ ಅನುದಾನದ ಪ್ರತ್ಯೇಕ ಮಾಹಿತಿ ಒದಗಿಸುವುದು)

(ಇ) ಒದಗಿಸಲಾದ ಅನುದಾನದಲ್ಲಿ ನಿರ್ಮಿಸಲಾದ ಶೌಚಾಲಯಗಳು ಎಷ್ಟು ; (ಜಿಲ್ಲಾವಾರು ಬಳಕೆಯಾದ ಅನುದಾನದ ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಶೌಚಾಲಯಗಳ ನಿರ್ಮಾಣ ಮತ್ತು ಶೌಚಾಲಯಗಳಿಗೆ ನಿರಂತರ ನೀರು ಪೂರೈಸುವಲ್ಲಿ ಸರ್ಕಾರ ನಿರ್ಲಕ್ಷ್ಯ ವಹಿಸಿರುವುದು ನಿಜವೇ; ಹಾಗಿದ್ದಲ್ಲಿ, ಈ ಸಮಸ್ಯೆ ನಿವಾರಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ರಸ್ತೆ ಅಭಿವೃದ್ಧಿ ಕಾಮಗಾರಿಗೆ ಅರಣ್ಯ ಇಲಾಖೆಯಿಂದ ತೊಂದರೆಯಾಗುತ್ತಿರುವ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೮ (೭೮) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯ ಜೋಯಿಡಾ ತಾಲ್ಲೂಕಿನ ಉಳವಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಶಿವಪೂರ, ಹೆಬ್ಬಾಳ, ನೇತುರ್ಗಾ ರಸ್ತೆಯು ತೀರಾ ಹದಗೆಟ್ಟಿದ್ದು, ಈ ರಸ್ತೆಯ ಅಭಿವೃದ್ಧಿಗೆ ಅರಣ್ಯ ಇಲಾಖೆಯಿಂದ ತೊಂದರೆಯಾಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಕೋಟ್ಯಾಂತರ ರೂಪಾಯಿ ವೆಚ್ಚ ಮಾಡಿ ಈ ರಸ್ತೆಯಲ್ಲಿ ತೂಗು ಸೇತುವೆ ನಿರ್ಮಾಣವಾಗಿದ್ದರೂ ಸದರಿ ತೂಗು ಸೇತುವೆಗೆ ಹೋಗುವ ರಸ್ತೆ ತೀರಾ ಹದಗೆಟ್ಟಿದ್ದು, ಇದನ್ನು ರಿಪೇರಿ ಮಾಡಲು ಅರಣ್ಯ ಇಲಾಖೆಯವರು ತೊಂದರೆ ಮಾಡುತ್ತಿರುವುದರಿಂದ ಸದರಿ ಪ್ರವಾಸಿ ಸ್ಥಳವಾದ ಶಿವಪೂರ ತೂಗು ಸೇತುವೆಗೆ ಪ್ರವಾಸಿಗರ ಕೊರತೆ ಆಗಿರುವುದರಿಂದ ಕೂಡಲೇ ಸರ್ಕಾರ ಇದಕ್ಕೆ ಪರಿಹಾರ ಮಾಡಿಕೊಡುವುದೇ ? (ವಿವರ ನೀಡುವುದು)

## ಶಿಕ್ಷಣ ಇಲಾಖೆಯ ಕ್ಷೇತ್ರ ಸಮನ್ವಯಾಧಿಕಾರಿಯ ದುರ್ನಡತೆ ಕುರಿತು

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೯ (೭೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯ ಜೋಯಿಡಾ ತಾಲ್ಲೂಕಿನ ಕ್ಷೇತ್ರ ಸಮನ್ವಯಾಧಿಕಾರಿ ಇವರು ತಮ್ಮ ಕರ್ತವ್ಯ ಸಂದರ್ಭದಲ್ಲಿ ಸಾರ್ವಜನಿಕರಿಗೆ ತೀರಾ ಅನುಚಿತ ವರ್ತನೆ ತೋರುತ್ತಿರುವ ಬಗ್ಗೆ ಜೋಯಿಡಾ ತಾಲ್ಲೂಕಿನ ಎಲ್ಲಾ ಇಲಾಖೆಯ ಸರ್ಕಾರಿ ನೌಕರರು ಹಾಗೂ ಪತ್ರಿಕಾ ವರದಿಗಾರರು ಮತ್ತು ಸಾರ್ವಜನಿಕರು ಆಕ್ರೋಶ ವ್ಯಕ್ತ ಪಡಿಸಿ ಪ್ರತಿಭಟಿಸಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಸದರಿ ಸಿಬ್ಬಂದಿ ಜೋಯಿಡಾ ತಾಲ್ಲೂಕಿನ ಶಿಕ್ಷಕರ ಸಿ.ಆರ್.ಪಿ/ ಬಿ.ಆರ್.ಪಿಗಳ ಸಭೆಗಳಲ್ಲಿ ತೀರಾ ಕ್ಷುಲ್ಲಕವಾಗಿ ಅವಹೇಳನಕಾರಿಯಾಗಿ ಮಾತನಾಡುವುದು ಹಾಗೂ ಯಾವುದೇ ಅಧಿಕಾರಿ ವರ್ಗದವರಿಗೆ ಗೌರವ ನೀಡದೆ ಬೇಜವಾಬ್ದಾರಿತನದಿಂದ ವರ್ತಿಸುವುದು, ಶಿಕ್ಷಕ ವೃಂದದವರಿಗೆ ಹಾಗೂ ಸಂಬಂಧಿಸಿದ ಸಿಬ್ಬಂದಿಗಳಿಗೆ ಅಸಂವಿಧಾನಿಕ ಪದಗಳನ್ನು ಬಳಸಿ ನಿಂದಿಸುವುದನ್ನು ತನಿಖೆ ಮಾಡಿ ಶಿಕ್ಷಕರ/ಸಾರ್ವಜನಿಕರ ಹಿತ ದೃಷ್ಟಿಯಿಂದ ಇವರನ್ನು ಕೂಡಲೇ ಜಿಲ್ಲೆಯಿಂದ ಬೇರೆಡೆಗೆ ವರ್ಗಾವಣೆ ಮಾಡುವುದಲ್ಲದೆ ಅವರ ಅವಧಿಯಲ್ಲಿನ ಲಕ್ಷಾಂತರ ರೂಪಾಯಿಯ ಅವ್ಯವಹಾರದ ತನಿಖೆ ಮಾಡಲಾಗುವುದೇ ? (ವಿವರ ನೀಡುವುದು)

## ೮೦೦ ಎಕರೆ ಅರಣ್ಯ ಪ್ರದೇಶ ಅರಣ್ಯಾಧಿಕಾರಿಗಳ ಕುಮ್ಮಕ್ಕಿನಿಂದ ಅತಿಕ್ರಮಣ ಮಾಡಿರುವ ಕುರಿತು

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೦ (೭೯) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯ ಕೆನರಾ ವೃತ್ತದ ಹಳಿಯಾಳ ವಿಭಾಗದ ಭಾಗವತಿ ವಲಯದ ತಟ್ಟಿಗೇರಾ ಶಾಖೆಯ ವ್ಯಾಪ್ತಿಯಲ್ಲಿ ಸುಮಾರು ೮೦೦ ಎಕರೆಯಷ್ಟು ಕಾಯ್ದಿಟ್ಟ ಅರಣ್ಯ ಪ್ರದೇಶವನ್ನು ಅತಿಕ್ರಮಣ ಮಾಡಿಕೊಳ್ಳಲಾಗಿದ್ದು, ಇದು ಅರಣ್ಯ ಅಧಿಕಾರಿಗಳ ಸಹಕಾರದಿಂದಲೇ ಪಡೆದಿದೆ ಎಂದು ಆರೋಪ ಕೇಳಿ ಬಂದು ಬಹಳಷ್ಟು ದಿನಗಳಾದರೂ ಇಲ್ಲಿಯವರೆಗೆ ಇಲಾಖೆ ಸಂಬಂಧಿಸಿದ ಅಧಿಕಾರಿಗಳ ಮೇಲೆ ಯಾವುದೇ ಕ್ರಮ ಕೈಗೊಳ್ಳದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಈ ರೀತಿ ಅತೀ ದೊಡ್ಡ ಪ್ರಮಾಣದಲ್ಲಿ ಅತಿಕ್ರಮಣ ಮಾಡಿರುವ ಬಗ್ಗೆ ಇಲ್ಲಿಯವರೆಗೆ ಇಲಾಖೆಯವರು ಯಾವ ರೀತಿ ತನಿಖೆ ಮಾಡಿರುತ್ತಾರೆ; ಯಾವ ಅಧಿಕಾರಿಗೆ ತನಿಖೆ ಮಾಡಲು ನೇಮಿಸಿರುತ್ತಾರೆ. ಯಾರ ಯಾರ ಮೇಲೆ ಕ್ರಮ ಕೈಗೊಳ್ಳಲಾಗಿದೆ ? (ಸವಿಸ್ತಾರ ವರದಿ ನೀಡುವುದು)

## ಸಾಮಾಜಿಕ ಅರಣ್ಯ ಪ್ರದೇಶದ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೧ (೮೬) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆಯಲ್ಲಿರುವ ಸಾಮಾಜಿಕ ಅರಣ್ಯ ಪ್ರದೇಶದ ವಿಸ್ತೀರ್ಣವೆಷ್ಟು; ಕಳೆದ ೩ ವರ್ಷಗಳಲ್ಲಿ ಈ ಪ್ರದೇಶದಲ್ಲಿ ನೆಡಲಾದ ಸಸಿಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಬದುಕುಳಿದಿರುವ ಸಸಿಗಳೆಷ್ಟು; ಈ ಸಸಿಗಳನ್ನು ನೆಡಲು ಮತ್ತು ಇವುಗಳನ್ನು ಸಂರಕ್ಷಿಸಲು ತಗುಲಿರುವ ವೆಚ್ಚವೆಷ್ಟು; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಸಾಮಾಜಿಕ ಅರಣ್ಯ ವಿಭಾಗದಿಂದ ನೆಡಲಾದ ಸಸಿಗಳನ್ನು ಪೋಷಿಸಲು ಮತ್ತು ಸಂರಕ್ಷಿಸಿ ಮರಗಳನ್ನಾಗಿ ಬೆಳೆಸಲು ಇಲಾಖೆಯು ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸಾಮಾಜಿಕ ಅರಣ್ಯ ವಿಭಾಗದಿಂದ ನೆಡಲಾದ ಸಸಿಗಳನ್ನು ಪೋಷಿಸಲು ಮತ್ತು ಸಂರಕ್ಷಿಸಲು ಇಲಾಖೆಯು ಯಾವ ರೀತಿ ಕ್ರಮ ವಹಿಸಲಾಗುತ್ತಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಹಾಸನ ಜಿಲ್ಲೆಯಲ್ಲಿ ಸಾಮಾಜಿಕ ಅರಣ್ಯ ಪ್ರದೇಶದಲ್ಲಿ ಸಸಿಗಳನ್ನು ಬೆಳೆಸಲು ಸ್ಥಾಪಿಸಲಾಗಿರುವ ನರ್ಸರಿಗಳ ಸಂಖ್ಯೆ ಎಷ್ಟು; ಕಳೆದ ೫ ವರ್ಷಗಳಲ್ಲಿ ಈ ನರ್ಸರಿಗಳಲ್ಲಿ ಬೆಳೆಸಿದ ಸಸಿಗಳೆಷ್ಟು; ಇದಕ್ಕಾಗಿ ತಗುಲಿರುವ ವೆಚ್ಚವೆಷ್ಟು ? (ನರ್ಸರಿವಾರು ಮಾಹಿತಿ ನೀಡುವುದು)

## ಕೋವಿಡ್ –೧೯ ಕಾಯಿಲೆಗೆ ತುತ್ತಾದವರಿಗೆ ಪರಿಹಾರ ನೀಡುವ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೨ (೮೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆಯಲ್ಲಿ ಇಲ್ಲಿಯವರೆಗೆ ಮಹಾಮಾರಿ ಕೋವಿಡ್–೧೯ ಕಾಯಿಲೆಗೆ ತುತ್ತಾಗಿ ಚಿಕಿತ್ಸೆ ಪಡೆದಿರುವ ರೋಗಿಗಳ ಸಂಖ್ಯೆ ಎಷ್ಟು; ಇವರ ಚಿಕಿತ್ಸೆಗಾಗಿ ಸರ್ಕಾರವು ಭರಿಸಿರುವ ವೆಚ್ಚವೆಷ್ಟು; (ಫಲಾನುಭವಿವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಹಾಸನ ಜಿಲ್ಲೆಯಲ್ಲಿ ಮಹಾಮಾರಿ ಕೋವಿಡ್ –೧೯ ಕಾಯಿಲೆಗೆ ತುತ್ತಾಗಿ ಮೃತರಾದವರ ಸಂಖ್ಯೆ ಎಷ್ಟು; ಮೃತರ ಕುಟುಂಬಗಳಿಗೆ ರಾಜ್ಯ ಸರ್ಕಾರದಿಂದ ಪರಿಹಾರವನ್ನು ವಿತರಿಸಲಾಗಿದೆಯೇ; ಹಾಗಿದ್ದಲ್ಲಿ, ಎಷ್ಟು ಕುಟುಂಬಗಳಿಗೆ ಪರಿಹಾರ ನೀಡಲಾಗಿದೆ; (ಫಲಾನುಭವಿವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯ ಸರ್ಕಾರವು ಮಹಾಮಾರಿ ಕೋವಿಡ್–೧೯ ಕಾಯಿಲೆಗೆ ತುತ್ತಾದ ಸಂತ್ರಸ್ತರಿಗೆ ಪರಿಹಾರ ನೀಡುತ್ತಿದೆಯೇ; ನೀಡುತ್ತಿದ್ದಲ್ಲಿ, ಪರಿಹಾರವನ್ನು ನೀಡಲು ಅನುಸರಿಸುತ್ತಿರುವ ಮಾರ್ಗಸೂಚಿಗಳೇನು ? (ಸಂಪೂರ್ಣ ವಿವರ ನೀಡುವುದು)

## ಜ್ಞಾನಭಾರತಿ ಆವರಣದಲ್ಲಿನ ಜಾಗವನ್ನು ಒತ್ತುವರಿ ಮಾಡಿರುವ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೩ (೮೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ವಿಶ್ವವಿದ್ಯಾನಿಲಯದ ಜ್ಞಾನಭಾರತಿ ಆವರಣರದಲ್ಲಿ ವಿಶ್ವವಿದ್ಯಾನಿಲಯದ ಉಪಯೋಗಕ್ಕಾಗಿ ಸರ್ಕಾರವು ಮಂಜೂರು ಮಾಡಿರುವ ಭೂಮಿ ಎಷ್ಟು; ಈ ಭೂಮಿಯನ್ನು ಯಾವಾಗ ಮಂಜೂರು ಮಾಡಲಾಗಿದೆ ; (ಆದೇಶಗಳ ಸಹಿತ ಸಂಪೂರ್ಣ ವಿವರ ನೀಡುವುದು)

(ಆ) ೨೦೧೧ರಲ್ಲಿ ಜ್ಞಾನಭಾರತಿ ಆವಣರದಲ್ಲಿರುವ ಭೂಮಿಯ ಸರ್ವೇ ಕಾರ್ಯ ನಡೆದಿದ್ದು ಈ ಸರ್ವೇಯ ಪ್ರಕಾರ ಎಷ್ಟು ವಿಸ್ತೀರ್ಣದ ಭೂಮಿ ಒತ್ತುವರಿಯಾಗಿದೆ ; (ಆದೇಶಗಳ ಸಹಿತ ಸಂಪೂರ್ಣ ವಿವರ ನೀಡುವುದು)

(ಇ) ಇಲ್ಲಿಯವರೆಗೆ ಜ್ಞಾನಭಾರತಿ ಆವರಣರದಲ್ಲಿ ಒತ್ತುವರಿಯಾಗಿರುವ ಎಷ್ಟು ಭೂಮಿಯನ್ನು ಹಿಂಪಡೆಯಲಾಗಿದೆ; ಹಾಗೂ ಬಾಕಿ ಒತ್ತುವರಿ ಭೂಮಿಯನ್ನು ಹಿಂಪಡೆಯುವ ಕಾರ್ಯವು ಯಾವ ಹಂತದಲ್ಲಿದೆ; ಈ ಭೂಮಿಯನ್ನು ಅಕ್ರಮವಾಗಿ ಒತ್ತುವರಿ ಮಾಡಿಕೊಂಡಿರುವವರ ವಿರುದ್ದ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ?(ಆದೇಶಗಳ ಸಹಿತ ಸಂಪೂರ್ಣ ವಿವರ ನೀಡುವುದು)

## ಕಾರ್ಮಿಕರಿಂದ ಸಂಗ್ರಹಿಸುತ್ತಿರುವ ವಂತಿಗೆ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೪ (೮೪) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇಲ್ಲಿಯುವರೆಗೆ ಕಾರ್ಮಿಕರ ವಂತಿಗೆಯಿಂದ ಸಂಗ್ರಹವಾಗಿರುವ ನಿಧಿಯ ಮೊತ್ತವೆಷ್ಟು; ಈ ನಿಧಿಯನ್ನು ಯಾವ ಸಂಸ್ಥೆ ನಿರ್ವಹಣೆ ಮಾಡುತ್ತಿದೆ ; (ವಿವರ ನೀಡುವುದು)

(ಆ) ಈ ನಿಧಿಯಿಂದ ಕಾರ್ಮಿಕ ವರ್ಗಕ್ಕೆ ಕಲ್ಪಿಸುತ್ತಿರುವ ಅಭಿವೃದ್ದಿ ಯೋಜನೆಗಳು ಯಾವುವು; ಈ ಯೋಜನೆಗಳಿಗಾಗಿ ಇಲ್ಲಿಯವರೆಗೆ ಖರ್ಚಾಗಿರುವ ಮೊತ್ತವೆಷ್ಟು ; (ಸಂಪೂರ್ಣ ವಿವರ ನೀಡುವುದು)

(ಇ) ಈ ಯೋಜನೆಗಳಲ್ಲಿ ಸಾಕಷ್ಟು ದುರುಪಯೋಗಗಳು ಆಗುತ್ತಿದ್ದು, ಸೌಲಭ್ಯಗಳು ಕಾರ್ಮಿಕರಿಗೆ ಸಕಾಲದಲ್ಲಿ ತಲುಪುತ್ತಿಲ್ಲವೆಂಬ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ?

## ಭೂರಹಿತ ಮಹಿಳೆಯರಿಗೆ ಭೂ ಒಡೆತನ ನೀಡುವ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೫ (೮೩) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಿಂದ ಪರಿಶಿಷ್ಟ ಪಂಗಡಗಳ ಭೂ ರಹಿತ ಮಹಿಳೆಯರಿಗೆ ಭೂ ಒಡೆತನ ನೀಡುವ ಯೋಜನೆಯನ್ನು ಜಾರಿಗೊಳಿಸಲಾಗಿದೆಯೇ; ಹಾಗಿದ್ದಲ್ಲಿ, ಯಾವಾಗಿನಿಂದ ಈ ಯೋಜನೆ ಜಾರಿಯಲ್ಲಿದೆ; ಹಾಗೂ ಈ ಯೋಜನೆಯ ಮಾರ್ಗಸೂಚಿಗಳೇನು ; (ಸಂಪೂರ್ಣ ವಿವರ ನೀಡುವುದು)

(ಆ) ಈ ಯೋಜನೆಯಡಿ ಹಾಸನ ಜಿಲ್ಲೆಯಲ್ಲಿ ಎಷ್ಟು ಜನರಿಗೆ ಎಷ್ಟು ವಿಸ್ತೀರ್ಣದ ಭೂಮಿಯನ್ನು ವಿತರಣೆ ಮಾಡಲಾಗಿದೆ ; (ಫಲಾನುಭವಿವಾರು ವಿವರ ನೀಡುವುದು)

(ಇ) ಈ ಯೋಜನೆಯಡಿ ಸಾಕಷ್ಟು ಭ್ರಷ್ಟಾಚಾರಗಳು ನಡೆಯುತ್ತಿವೆ ಎಂಬ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಸಂಬಂಧ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ?

## ಬೀಡಿ ಕಾರ್ಮಿಕರ ಕನಿಷ್ಠ ವೇತನದ ಕುರಿತು ಮಾಹಿತಿ

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೮೬ (೧೧೭) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸುಮಾರು ೩ ಲಕ್ಷಕ್ಕೂ ಅಧಿಕ ಬೀಡಿ ಕಾರ್ಮಿಕರಿದ್ದು, ತಮ್ಮ ಜೀವನೋಪಾಯಕ್ಕೆ ಬೀಡಿ ಕಟ್ಟುವ ಕಾರ್ಯವನ್ನು ನಂಬಿಕೊಂಡಿರುತ್ತಾರೆ ; ಇವರಿಗೆ ಸರ್ಕಾರ ನಿಗದಿಪಡಿಸಿದ ಕನಿಷ್ಠ ಕೂಲಿ (Minimum wages act) ಯು ಕಾರ್ಮಿಕ ಕಾಯ್ದೆಗೆ ಅನುಗುಣವಾಗಿ ನಿಗದಿಗೊಳಿಸಲಾಗಿದೆಯೇ ; ಮತ್ತು ಕಾರ್ಯಗತಗೊಳಿಸಲಾಗಿದೆಯೇ ; ಈ ಕುರಿತಂತೆ ಸರ್ಕಾರ ಕೈಗೊಂಡ ಕ್ರಮಗಳ ಕುರಿತು ಅಂಕಿ-ಅಂಶಗಳೊಂದಿಗೆ ವಿಸ್ತುತ ಮಾಹಿತಿ ಒದಗಿಸುವುದು ;

(ಆ) ಬೀಡಿ ಕಾರ್ಮಿಕ ಕಂಪನಿಗಳು ಬೀಡಿ ಕಾರ್ಮಿಕರಿಗೆ ಕಾನೂನು ರೀತಿ ಸಿಗಬೇಕಾದ ಗ್ರಾಚ್ಯುಟಿ ಮತ್ತು ಇತರೆ ಮೊತ್ತವನ್ನು ಸಂದಾಯ ಮಾಡದೇ ವಿಳಂಬ ಧೋರಣೆ ಅನುಸರಿಸುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ ; ಈ ಕುರಿತಂತೆ ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ನೇಮಕಾತಿ ಕುರಿತು ಮಾಹಿತಿ

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೮೭ (೧೧೮) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ (ACF) ನೇಮಕಾತಿಗೆ ಸಂಬಂಧಿಸಿದಂತೆ ಅಧಿಸೂಚನೆ ಸಂಖ್ಯೆ : ಇ(೧)೧೪೮೫/ ೨೦೧೫-೧೬/ಪಿ.,ಎಸ್.ಸಿ. ದಿನಾಂಕ : ೦೮-೦೬-೨೦೧೬ರಲ್ಲಿ ಆಯ್ಕೆಯಾಗಿರುವ ಅಭ್ಯರ್ಥಿಗಳ ಕುರಿತಂತೆ

(i) ಮಾಜಿ ಸೈನಿಕ (Ex MP) ಕೋಟಾದಡಿ ೧:೫ ಅನುಪಾತದಲ್ಲಿ ದಾಖಲಾತಿ ಪರಿಶೀಲನೆಗೆ ಆಯ್ಕೆಯಾದ ಅಭ್ಯರ್ಥಿಗಳ ಸಂಖ್ಯೆ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಆ) Ex-MP ಕೋಟಾದಡಿ ವೈದ್ಯಕೀಯ ಪರೀಕ್ಷೆಗೆ ಆಯ್ಕೆಯಾದ ಅಭ್ಯರ್ಥಿಗಳಿಗೆ ಸಕ್ಷಮ ಪ್ರಾಧಿಕಾರವು ವೈದ್ಯಕೀಯ ಪ್ರಮಾಣ ಪತ್ರ ದೃಢೀಕರಿಸಿ ನೀಡಿದೆಯೇ ? (ಪ್ರತಿ ನೀಡುವುದು)

## ಕನ್ನಡ ಶೀಘ್ರಲಿಪಿ ಪುಸ್ತಕಗಳ ಕೊರತೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೮೮ (೧೮೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕನ್ನಡ ಶೀಘ್ರಲಿಪಿ ಕಲಿಬಯಸುವ ವಿದ್ಯಾರ್ಥಿಗಳಿಗೆ ಕನ್ನಡ ಶೀಘ್ರಲಿಪಿ ಪಠ್ಯಪುಸ್ತಕಗಳು ದೊರೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಪಠ್ಯಪುಸ್ತಕಗಳ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ?

## ಕೊರೋನಾ ಲಸಿಕೆಗಳ ಕುರಿತು

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೮೯ (೧೯೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೇಂದ್ರದಿಂದ ರಾಜ್ಯಕ್ಕೆ ಆಗಮಿಸಿರುವ ಕೊರೋನಾ ನಿರೋಧಕ ಲಸಿಕೆಗಳ ಸಂಖ್ಯೆ ಎಷ್ಟು; ಕೋವಿಡ್ ಲಸಿಕೆ ಅಭಿಯಾನವನ್ನು ಎಂದಿನಿಂದ ಪ್ರಾರಂಭಿಸಲಾಗಿದೆ ;

(ಆ) ಕೊರೋನಾ ನಿರೋಧಕ ಲಸಿಕೆಗಳನ್ನು ನೀಡುವಾಗ ಅನುಸರಿಸುತ್ತಿರುವ ಮಾರ್ಗಸೂಚಿಗಳೇನು; ಈ ನಿರೋಧಕ ಲಸಿಕೆಗಳನ್ನು ಪಡೆದವರಲ್ಲಿ ಸಂಭವಿಸುತ್ತಿರುವ ಅಡ್ಡಪರಿಣಾಮಗಳ ನಿವಾರಣೆಗೆ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿ ವೈದ್ಯರ ಕೊರತೆ ಬಗ್ಗೆ.

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೦ (೧೮೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವೈದ್ಯರ ಮತ್ತು ಜನರ ಸರಾಸರಿ ಪ್ರಮಾಣವೆಷ್ಟು ;

(ಆ) ವಿಶ್ವ ಆರೋಗ್ಯ ಸಂಸ್ಥೆಯ ಪ್ರಕಾರ ಸರಾಸರಿ ಎಷ್ಟು ಜನರಿಗೆ ಒಬ್ಬ ವೈದ್ಯರಿರಬೇಕು ;

(ಇ) ರಾಜ್ಯದಲ್ಲಿ ವೈದ್ಯರ ಸರಾಸರಿ ಪ್ರಮಾಣ ಕಡಿಮೆ ಇರಲು ಕಾರಣಗಳೇನು ;

(ಈ) ಈ ಅಸಮಾನ ಪ್ರಮಾಣವನ್ನು ಸರಿದೂಗಿಸಲು ಕೈಗೊಂಡ ಕ್ರಮಗಳೇನು ?

## ಕೋವಿಡ್–೧೯ ನಿಯಂತ್ರಣ ಸಂಬಂಧದ ಬಗ್ಗೆ

**ಶ್ರೀ ಸಿ.ಎಂ. ಇಬ್ರಾಹಿಂ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೧ (೧೮೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋವಿಡ್-೧೯ ನಿಯಂತ್ರಣಕ್ಕೆ ಸಂಬಂಧಪಟ್ಟಂತೆ ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ಇದುವರೆಗೂ ಬಿಡುಗಡೆಯಾಗಿರುವ ಅನುದಾನ ಮತ್ತು ಬಳಕೆಯಾದ ಅನುದಾನ ಎಷ್ಟು ;

(ಆ) ಕೋವಿಶೀಲ್ಡ್ (Covishield) ಕೋವ್ಯಾಕ್ಸಿನ್ (Covaxin) ಲಸಿಕೆಗಳ ತುರ್ತು ಬಳಕೆಗೆ ಅನುಮತಿ ನೀಡಲಾಗಿದ್ದು, ರಾಜ್ಯ ಯಾವ ವ್ಯಾಕ್ಸಿನ್ ಅನ್ನು ಯಾರ್ಯಾರಿಗೆ ನೀಡಲಾಗುತ್ತಿದೆ ಎಂಬ ಬಗ್ಗೆ ಮಾಹಿತಿ ಸಂಗ್ರಹಿಸಿ, ಲಸಿಕೆ ಪಡೆದವರಿಗೆ ಮಾಹಿತಿ ನೀಡಲಾಗುತ್ತಿದೆಯೇ ;

(ಇ) ಎರಡು ಕೋರ್ಸ್‌ಗಳಲ್ಲಿ ನೀಡಲಾಗುವ ಲಸಿಕೆಗಳಲ್ಲಿ ಮೊದಲು ಕೋವಿಶೀಲ್ಡ್ ಲಸಿಕೆಯನ್ನು ನೀಡಿದ ವ್ಯಕ್ತಿಗೆ ೨ನೇ ಕೋರ್ಸ್‌ನಲ್ಲಿ ಕೋವ್ಯಾಕ್ಸಿನ್ ಲಸಿಕೆಯನ್ನು ನೀಡಲಾಗುತ್ತಿದೆಯೇ ;

(ಈ) ಅನುಮತಿ ನೀಡಿದ ಲಸಿಕೆಗಳನ್ನು ಪಡೆದ ನಂತರ ಅಡ್ಡ ಪರಿಣಾಮಗಳು ಉಂಟಾಗಿರುವ ಪ್ರಕರಣಗಳೆಷ್ಟು; ಆ ರೀತಿ ಬಂದ ಪ್ರಕರಣಗಳಲ್ಲಿ ಸರ್ಕಾರವು ತಕ್ಷಣಕ್ಕೆ ತೆಗೆದುಕೊಳ್ಳುವ/ ತೆಗೆದುಕೊಂಡಿರುವ ಕ್ರಮವೇನು ?

## ಉದ್ಯಮಗಳು ಪಡೆದಿರುವ ಅನುದಾನದ ಬಗ್ಗೆ

**ಶ್ರೀ ಕಾಂತರಾಜ್ (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೯೨ (೨೦೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ವ್ಯಾಪ್ತಿಯಡಿ ಹಾಲಿ ಸ್ಥಾಪಿತವಾಗಿರುವ ಸರ್ಕಾರಿ ಹಾಗೂ ಖಾಸಗಿ ಸಂಸ್ಥೆ/ಉದ್ಯಮಗಳು ಯಾವುವು ; (ಉದ್ಯಮದ ಹೆಸರು, ಸ್ಥಾಪನೆಗೊಂಡ ವರ್ಷ, ಉದ್ಯಮದ ವಿಳಾಸ, ವಿವರದೊಂದಿಗೆ ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ೩ ಇಲಾಖೆಗಳಡಿ ಅನುದಾನ ಪಡೆದ ಸರ್ಕಾರಿ ಹಾಗೂ ಖಾಸಗಿ ಸಂಸ್ಥೆ/ಉದ್ಯಮಗಳು ಯಾವುವು ;ಇವುಗಳಲ್ಲಿ ಎಷ್ಟು ಸ್ಥಳೀಯ ಕನ್ನಡಿಗರಿಗೆ  ಕೆಲಸ ನೀಡಲಾಗಿರುತ್ತದೆ; ಪಡೆದ ಅನುದಾನ ಎಷ್ಟು ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಉದ್ಯಮಗಳು ಸಾಮಾಜಿಕ ಹೊಣೆಗಾರಿಕೆ ನಿಧಿಯಡಿ ಎಷ್ಟು ಅನುದಾನವನ್ನು ಮೀಸಲಿಡಲಾಗಿದೆ ಹಾಗೂ ಎಷ್ಟು ಹಣ ಖರ್ಚು ಮಾಡಲಾಗಿದೆ ? (ವಿವರವಾದ ಮಾಹಿತಿ ನೀಡುವುದು)

## ಅನುದಾನಿತ ಪದವಿಪೂರ್ವ ಕಾಲೇಜುಗಳ ಕಾರ್ಯಭಾರದ ಬಗ್ಗೆ

**ಶ್ರೀ ಕಾಂತರಾಜ್ (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೯೩ (೨೦೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ/ಅನುದಾನಿತ-ಅನುದಾನ ರಹಿತ ಪದವಿಪೂರ್ವ ಕಾಲೇಜುಗಳೆಷ್ಟು ; (ಜಿಲ್ಲಾವಾರು ವಿವರವಾದ ಮಾಹಿತಿ ಒದಗಿಸುವುದು)

(ಆ) ಕಾರ್ಯಭಾರ ಅಂದರೇನು; ಪದವಿಪೂರ್ವ ಉಪನ್ಯಾಸಕರಿಗೆ ಸರ್ಕಾರವು ಒಂದು ವಾರಕ್ಕೆ ಎಷ್ಟು ಗಂಟೆಗಳ ಕಾರ್ಯಭಾರವನ್ನು ನಿಗದಿಪಡಿಸಲಾಗಿರುತ್ತದೆ ; ಈ ರೀತಿ ಕಾರ್ಯಭಾರ ನಿಗಧಿಪಡಿಸಲು ಇರುವ ಮಾನದಂಡಗಳೇನು ;

(ಇ) ಪದವಿಪೂರ್ವ ಶಿಕ್ಷಣ ಇಲಾಖೆಯಲ್ಲಿ ಖಾಸಗಿ ಅನುದಾನಿತ ಪದವಿಪೂರ್ವ ಕಾಲೇಜುಗಳಲ್ಲಿ ದಿನಾಂಕ:೩೧.೧೨.೨೦೧೫ರ ವರೆಗೆ ನಿಧನ, ನಿವೃತ್ತಿ ಹಾಗೂ ರಾಜೀನಾಮೆಯಿಂದ ತೆರವಾದ ಬೋಧಕ ಹುದ್ದೆಗಳನ್ನು ತುಂಬಿಕೊಳ್ಳಲು ಅನುಮತಿ ನೀಡಿರುವುದು ನಿಜವೇ ;

(ಈ) ಹಾಗಿದ್ದಲ್ಲಿ, ದಿನಾಂಕ:೩೧.೧೨.೨೦೨೦ರ ಅಂತ್ಯಕ್ಕೆ ಖಾಸಗಿ ಅನುದಾನಿತ ಪದವಿಪೂರ್ವ ಕಾಲೇಜುಗಳಲ್ಲಿ ಕಾರ್ಯಭಾರದ ಕೊರತೆಯಿದ್ದು, ಈ ಕಾರ್ಯಭಾರವನ್ನು ಪಕ್ಕದ ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿನ ಕಾರ್ಯಭಾರಕ್ಕೆ ಹೊಂದಾಣಿಕೆ ಮಾಡಿರುವ ಪ್ರಕರಣಗಳೆಷ್ಟು ? (ವಿವರವಾಗಿ ಜಿಲ್ಲಾವಾರು ಸಂಪೂರ್ಣ ಕಾಲೇಜಿನ ವಿಳಾಸ ಹಾಗೂ ಹುದ್ದೆಯ ಪದನಾಮದೊಂದಿಗೆ ವಿವರವಾದ ಮಾಹಿತಿಯನ್ನು ನೀಡುವುದು)

## ರಾಜ್ಯದಲ್ಲಿನ ಸ್ಟಾರ್ಟಪ್ ಸಂಸ್ಥೆಗಳ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೪ (೧೮೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಹತ್ತು ವರ್ಷಗಳ ಅವಧಿಯಲ್ಲಿ ಸರ್ಕಾರದಿಂದ ಎಷ್ಟು ಸ್ಟಾರ್ಟಪ್ ಸಂಸ್ಥೆಗಳಿಗೆ ಸಹಾಯಧನ ಹಾಗೂ ಇನ್ನಿತರ ಸೌಲಭ್ಯಗಳನ್ನು ನೀಡಲಾಗಿದೆ ; (ವಿವರ ನೀಡುವುದು)

(ಆ) ಇಲ್ಲಿಯವರೆಗೆ ಕರ್ನಾಟಕ ರಾಜ್ಯ ನಿವಾಸಿಗಳ ಎಷ್ಟು ಸ್ಟಾರ್ಟಪ್ ಸಂಸ್ಥೆಗಳಿಗೆ ಸಹಾಯಧನ ನೀಡಲಾಗಿದೆ ;

(ಇ) ಸದರಿ ಸ್ಟಾರ್ಟಪ್ ಸಂಸ್ಥೆಗಳಿಂದ ಸ್ಥಳೀಯರಿಗೆ ಒದಗಿಸಲಾದ ಉದ್ಯೋಗಗಳ ಸಂಖ್ಯೆ ಎಷ್ಟು ;

(ಈ) ಎಲಿವೇಟೆಡ್ ೧೦೦ ಯೋಜನೆಯಡಿ ಕಳೆದ ೧೦ ವರ್ಷಗಳ ಅವಧಿಯಲ್ಲಿ ಸರ್ಕಾರದಿಂದ ನೀಡಿರುವ ಅನುದಾನವೆಷ್ಟು ?

## ಕೇಂದ್ರ ಸರ್ಕಾರದಿಂದ ಘೋಷಿತವಾದ "ರಾಷ್ಟ್ರೀಯ ಶಿಕ್ಷಣ ನೀತಿ" ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೫ (೧೭೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರ ಘೋಷಣೆ ಮಾಡಿರುವ ಶಿಕ್ಷಣಕ್ಕೆ ಸಂಬಂಧಿಸಿದ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ರಾಜ್ಯ ಸರ್ಕಾರದ ವತಿಯಿಂದ ಜಾರಿಗೆ ತರಲಾಗಿದೆಯೇ;

(ಆ) ದೇಶದ ಶಿಕ್ಷಣ ವ್ಯವಸ್ಥೆಯನ್ನು ಬದಲಿಸುವ ಈ ಯೋಜನೆಯನ್ನು ಸರ್ಕಾರ ಯಾವ ರೀತಿಯಲ್ಲಿ ಅನುಷ್ಠಾನಗೊಳಿಸಲು ಉದ್ದೇಶಿಸಿದೆ ;

(ಇ) ಸದರಿ ಯೋಜನೆಯು ಪ್ರಾಥಮಿಕ ಶಿಕ್ಷಣ ಮತ್ತು ಗ್ರಾಮೀಣ ಮತ್ತು ನಗರ ಭಾಗಗಳಲ್ಲಿ ವೃತ್ತಿಪರ ಶಿಕ್ಷಣಕ್ಕೆ ಅನುಕೂಲ

ಮಾಡಿಕೊಡಲಿದ್ದು; ಇದನ್ನು ಜಾರಿಗೆ ತರುವ ಬಗ್ಗೆ ಸರ್ಕಾರ ಯಾವ ರೀತಿ ರೂಪುರೇಷೆಗಳನ್ನು ಹಾಕಿಕೊಂಡಿದೆ ;

(ಈ) ಕೇಂದ್ರ ಸರ್ಕಾರದ ಹೊಸ ಶಿಕ್ಷಣ ನೀತಿಯಲ್ಲಿ ಮಾತೃ ಭಾಷೆಗೆ ಹೆಚ್ಚು ಮಹತ್ವ ಕೊಡಲು ನಿರ್ದೇಶಿಸಲಾಗಿದ್ದು, ಸರ್ಕಾರ ಇದನ್ನು ಯಾವ ರೀತಿಯಲ್ಲಿ ಅನುಷ್ಠಾನಗೊಳಿಸಲಿದೆ ?

## ರಾಜ್ಯದಲ್ಲಿನ ಕೋವಿಡ್–೧೯ ರೋಗಿಗಳ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೬ (೧೦೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೋವಿಡ್–೧೯ ವೈರಸ್ ಅವಾಂತರ ಹೆಚ್ಚಾಗಿದ್ದು ಜನರು ಭಯಭೀತರಾಗಿ ಕಾಲ ಕಳೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ಈ ರೋಗಕ್ಕೆ ಈವರೆಗೆ ಪೀಡಿತರಾದ ಜನರೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಬೆಳಗಾವಿ ಜಿಲ್ಲೆಯಲ್ಲಿ ಇಲ್ಲಿಯವರೆಗೆ ಈ ರೋಗದಿಂದ ಚಿಕಿತ್ಸೆ ಪಡೆದು ಗುಣಮುಖರಾದವರ ಸಂಖ್ಯೆ ಎಷ್ಟು ; ಹಾಗೂ ಮರಣ ಹೊಂದಿದವರ ಸಂಖ್ಯೆ ಎಷ್ಟು ;

(ಈ) ಈ ರೋಗಕ್ಕೆ ತುತ್ತಾದವರಿಗೆ ಕೊಡುವ ಚಿಕಿತ್ಸೆಯ ಪದ್ಧತಿಯ ಬಗ್ಗೆ ಮಾಹಿತಿ ಒದಗಿಸುವುದು ;

(ಉ) ಬೆಳಗಾವಿ ಜಿಲ್ಲೆಯ ಆಸ್ಪತ್ರೆಗಳಲ್ಲಿ ಈ ರೋಗದ ಚಿಕಿತ್ಸೆಗಾಗಿ ತೆಗೆದುಕೊಂಡ ಕ್ರಮಗಳೇನು ?

## ಶಾಲಾ ಮಕ್ಕಳಿಗೆ ಬೆಳಗಿನ ಉಪಹಾರ ನೀಡುವ ಯೋಜನೆ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೯೭ (೧೦೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಸರ್ಕಾರಿ ಮತ್ತು ಅನುದಾನಿತ ಶಾಲೆಗಳ ಮಕ್ಕಳಿಗೆ ಬೆಳಗಿನ ಉಪಹಾರ ನೀಡುವ ಯೋಜನೆ ಜಾರಿಯಲ್ಲಿದೆಯೇ ;

(ಆ) ಇದ್ದಲ್ಲಿ, ಎಷ್ಟು ಸರ್ಕಾರಿ ಮತ್ತು ಅನುದಾನಿತ ಶಾಲೆಗಳಿಗೆ ಈ ಸೌಲಭ್ಯವನ್ನು ಒದಗಿಸಲಾಗುತ್ತಿದೆ ;

(ಇ) ಸದರಿ ಯೋಜನೆಯನ್ನು ಖಾಸಗಿ ಶಾಲೆಗಳಿಗೂ ವಿಸ್ತರಿಸುವ ಉದ್ದೇಶ ಸರ್ಕಾರಕ್ಕಿದೆಯೇ ?

## ಅನುದಾನಿತ ಶಾಲಾ ಕಾಲೇಜುಗಳಲ್ಲಿ ೨೦೧೫ನೇ ಸಾಲಿನವರೆಗೆ ಖಾಲಿ ಇರುವ ಹುದ್ದೆ ಭರ್ತಿ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-**

೯೮ (೩೦೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅನುದಾನಿತ ಶಾಲಾ ಕಾಲೇಜುಗಳಲ್ಲಿ ೨೦೧೫ನೇ ಸಾಲಿನವರೆಗೆ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಅನುಮತಿಯಂತೆ ಶಿಕ್ಷಣ ಇಲಾಖೆಯಿಂದ ಆರ್ಥಿಕ ಇಲಾಖೆಗೆ ಅನುಮೋದನೆಗಾಗಿ ಸಲ್ಲಿಕೆಯಾಗಿರುವ ಪ್ರಸ್ತಾವನೆಗಳ ಸಂಖ್ಯೆ ಎಷ್ಟು; (ಪ್ರಾಥಮಿಕ, ಪ್ರೌಢ, ಪದವಿಪೂರ್ವ, ಪದವಿ ಕಾಲೇಜುಗಳ ವಿವರಗಳೊಡನೆ)

(ಆ) ಸದರಿ ಕಡತಗಳಿಗೆ ಆರ್ಥಿಕ ಇಲಾಖೆ ಕೋವಿಡ್-೧೯ರ ಆರ್ಥಿಕ ಮಿತವ್ಯಯದ ಅಡಿ ಅನುಮೋದನೆಗೆ ತಡೆಹಿಡಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದಲ್ಲಿ, ಸದರಿ ಮಿತವ್ಯಯವನ್ನು ಸಡಿಲಿಸಿ, ಶಿಕ್ಷಣ ಇಲಾಖೆಯಿಂದ ಬರುವ ಎಲ್ಲಾ ಪ್ರಸ್ತಾವನೆಗಳಿಗೂ ಯಾವ ಕಾಲಮಿತಿಯಲ್ಲಿ ಅನುಮೋದನೆ ನೀಡಲಾಗುವುದು ?

## ಮುಖ್ಯ ಶಿಕ್ಷಕರಿಗೆ ೨೦ ವರ್ಷಗಳ ಕಾಲಮಿತಿ ವೇತನ ಬಡ್ತಿ ನೀಡಿಕೆ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-**

೯೯ (೩೦೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರು ಮತ್ತು ಬೆಂಗಳೂರು ವಿಭಾಗದ ಮುಖ್ಯ ಶಿಕ್ಷಕರಾಗಿ ನೇಮಕಗೊಂಡು, ಒಂದೇ ಹುದ್ದೆಯಲ್ಲಿ ೨೦ ವರ್ಷಗಳಿಂದ ಕಾರ್ಯನಿರ್ವಹಿಸಿರುವ ಮುಖ್ಯ ಶಿಕ್ಷಕರಿಗೆ ೨೦ ವರ್ಷಗಳ ಕಾಲಮಿತಿ ವೇತನ ಬಡ್ತಿ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಾದರೆ, ಸದರಿ ವಿಳಂಬಕ್ಕೆ ಕಾರಣಗಳೇನು ; (ವಿವರ ನೀಡುವುದು)

(ಇ) ಯಾವ ಕಾಲಮಿತಿಯಲ್ಲಿ ಸದರಿ ಕಾಲಮಿತಿ ವೇತನ ಬಡ್ತಿಯನ್ನು ನೀಡಲಾಗುವುದು ?

## ಕ್ರೈಸ್ ಅಧೀನದ ವಸತಿ ಶಾಲೆಗಳ ಸಹ ಶಿಕ್ಷಕರುಗಳ ಜ್ಯೇಷ್ಠತಾ ಪಟ್ಟಿ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೧೦೦ (೧೧೩) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) "ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ" (KREIS–ಕ್ರೈಸ್)ವು ಇತ್ತೀಚೆಗೆ ಪ್ರಕಟಿಸಿದ ವಸತಿ ಶಾಲೆಗಳ ಸಹ ಶಿಕ್ಷಕರುಗಳ ಅಂತಿಮ ಜ್ಯೇಷ್ಠತಾ ಪಟ್ಟಿಗಳನ್ನು "ಕರ್ನಾಟಕ ಸರ್ಕಾರಿ ನೌಕರರ ೧೯೫೭ರ ಜ್ಯೇಷ್ಠತಾ ನಿಯಮಗಳ" ಅನುಸಾರವಾಗಿ ಎಂದು ನಡವಳಿಗಳಲ್ಲಿ ನಮೂದಿಸಲಾಗಿದೆಯೇ;

(ಆ) "ಕ್ರೈಸ್" ಸಂಸ್ಥೆಯು ಕರ್ನಾಟಕ ಸರ್ಕಾರಿ ನೌಕರರ ೧೯೫೭ರ ಜ್ಯೇಷ್ಠತಾ ನಿಯಮಗಳನುಸಾರ ಶಿಕ್ಷಣ ಇಲಾಖೆಯ ಪ್ರೌಢ ಶಾಲೆಗಳ ಸಹ ಶಿಕ್ಷಕರುಗಳ ಜ್ಯೇಷ್ಠತಾ ಪಟ್ಟಿಯ ಮಾದರಿಯಂತೆ ವಸತಿ ಶಾಲೆಗಳ ಸಹ ಶಿಕ್ಷಕರುಗಳ ಜ್ಯೇಷ್ಠತಾ ತಯಾರಿಸಿ ಪ್ರಕಟಿಸಿದೆಯೇ ?

## ಕ್ರೈಸ್ ಅಧೀನದ ವಸತಿ ಶಾಲೆಗಳಲ್ಲಿ ಖಾಲಿಯಿರುವ ಪ್ರಾಂಶುಪಾಲರ ಹುದ್ದೆಗಳನ್ನು ಬಡ್ತಿ ಮೂಲಕ ನೇಮಕ ಮಾಡುವ ಬಗ್ಗೆ

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೧೦೧ (೧೧೨) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) "ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ" (KREIS–ಕ್ರೈಸ್) ಅಧೀನದ ವಸತಿ ಶಾಲೆಗಳ ಸಹ ಶಿಕ್ಷಕರುಗಳಿಗೆ

ಶಿಕ್ಷಣ ಇಲಾಖೆಗಳ ಸಹ ಶಿಕ್ಷಕರುಗಳ ಮಾದರಿಯಂತೆ ಮಾನ್ಯ ಉಚ್ಚ ನ್ಯಾಯಾಲಯ, ಧಾರವಾಡ ಪೀಠದ ಆದೇಶಾನುಸಾರ ಪ್ರಾಂಶುಪಾಲರ ಹುದ್ದೆಗಳಿಗೆ ಬಡ್ತಿ ನೀಡಲು ಕ್ರಮ ಕೈಗೊಳ್ಳಲಾಗಿದೆಯೇ;

(ಆ) ಸದರಿ ವಸತಿ ಶಾಲೆಗಳಲ್ಲಿರುವ ಪ್ರಾಂಶುಪಾಲರ ಖಾಲಿಯಿರುವ ಹುದ್ದೆಗಳಿಗೆ ಸಹ ಶಿಕ್ಷಕರುಗಳನ್ನು ಕಳೆದ ೧೦ ವರ್ಷಗಳಿಂದ ಬಡ್ತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಡ್ತಿ ನೀಡಲು ವಿಳಂಬವಾಗಿರುತ್ತಿರುವುದಕ್ಕೆ ಕಾರಣಗಳೇನು;

(ಇ) ಯಾವ ಕಾಲಮಿತಿಯಲ್ಲಿ ಸಹ ಶಿಕ್ಷಕರುಗಳನ್ನು ಪ್ರಾಂಶುಪಾಲರ ಹುದ್ದೆಗಳಿಗೆ ಬಡ್ತಿ ನೀಡಲಾಗುವುದು ?

## ರಾಜ್ಯದಲ್ಲಿರುವ ಇಂಜಿನಿಯರಿಂಗ್ ಕಾಲೇಜುಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೨ (೧೦೦) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಇಂಜಿನಿಯರಿಂಗ್ ಕಾಲೇಜು ಮತ್ತು ಅನುದಾನಿತ ಕಾಲೇಜುಗಳು ಕಾರ್ಯನಿರ್ವಹಿಸುತ್ತಿದೆ; (ಸಂಪೂರ್ಣ ವಿವರ ನೀಡುವುದು)

(ಆ) ಪ್ರತಿ ಶೈಕ್ಷಣಿಕ ವರ್ಷದಲ್ಲಿ ಆಡಳಿತ ಮಂಡಳಿಗೆ ಎಷ್ಟು ಸಿ.ಇ.ಟಿ., ಕಾಮೇಡ್–ಕೆ ಸೀಟುಗಳನ್ನು ಹಂಚಲಾಗುತ್ತಿದೆ, ಕಳೆದ ೩

ವರ್ಷಗಳಲ್ಲಿ ಲಭ್ಯವಿದ್ದ ಸಿ.ಇ.ಟಿ., ಕಾಮೇಡ್-ಕೆ ವಿಭಾಗಕ್ಕೆ ಎಷ್ಟು ಸೀಟುಗಳನ್ನು ಭರ್ತಿ ಮಾಡಲಾಗಿದೆ; (ಸಂಪೂರ್ಣ ವಿವರ ನೀಡುವುದು)

(ಇ) ಕಳೆದ ೫ ವರ್ಷಗಳಲ್ಲಿ ಸಿ.ಇ.ಟಿ., ಕಾಮೇಡ್-ಕೆ ಅಡಿಯಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ಎಷ್ಟು ಭಾರಿ ಪ್ರವೇಶ ಶುಲ್ಕವನ್ನು ನವೀಕರಿಸಿದೆ ಹಾಗೂ ಎಷ್ಟು ಶುಲ್ಕವನ್ನು ಹೆಚ್ಚಿಸಲಾಗಿದೆ; ಹಾಗೂ ಸರ್ಕಾರ ಕೈಗೊಂಡ ಮಾನದಂಡಗಳೇನು; ಒಬ್ಬ ವಿದ್ಯಾರ್ಥಿಗೆ ಸರ್ಕಾರ ವ್ಯಯ ಮಾಡಿದ ಮೊತ್ತವೆಷ್ಟು; (ಸಂಪೂರ್ಣ ವಿವರ ನೀಡುವುದು)

(ಈ) ಸದರಿ ಇಂಜಿನಿಯರಿಂಗ್ ಕಾಲೇಜುಗಳು ಸಹಾಯಕ ಪ್ರಾಧ್ಯಾಪಕರು, ಸಹ ಪ್ರಾಧ್ಯಾಪಕರಿಗೆ ವಿಶ್ವವಿದ್ಯಾಲಯವು ಯಾವ ರೀತಿ ಶಿಕ್ಷಣ ತರಬೇತಿ ನಿಗಧಿಪಡಿಸಿರುತ್ತದೆ ? (ಸಂಪೂರ್ಣ ವಿವರ ನೀಡುವುದು)

## ಚಿಕೂನ್ ಗುನ್ಯ, ಡೆಂಗ್ಯು ಹಾಗೂ ಇತರೆ ಸಾಂಕ್ರಾಮಿಕ ಖಾಯಿಲೆ ಹೆಚ್ಚುತ್ತಿರುವ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೦೩ (೧೦೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಆರೋಗ್ಯ ಇಲಾಖೆಯು ಕೊರೋನಾ ನಿಯಂತ್ರಣದ ಬಗ್ಗೆ ಮಾತ್ರ ಲಕ್ಷ್ಯ ವಹಿಸುತ್ತಿದ್ದು, ಚಿಕೂನ್ ಗುನ್ಯ, ಡೆಂಗ್ಯು ಹಾಗೂ ಇತರೆ ಸಾಂಕ್ರಾಮಿಕ ಖಾಯಿಲೆ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ರೀತಿ ಹರಡುತ್ತಿರುವ ಸಾಂಕ್ರಾಮಿಕ ಖಾಯಿಲೆಗಳನ್ನು ನಿಯಂತ್ರಿಸಲು ಸರ್ಕಾರವು ಯಾವ ಕ್ರಮ ಕೈಗೊಂಡಿದೆ ? (ವಿವರ ನೀಡುವುದು)

## ಅನಧಿಕೃತ ಹೋಂ ಸ್ಟೇಗಳು ನಿರ್ಮಾಣವಾಗುತ್ತಿರುವ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೪ (೧೮೬) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿಳಿಗಿರಿರಂಗನಬೆಟ್ಟ ಮೀಸಲು ಅರಣ್ಯ ಪ್ರದೇಶದಲ್ಲಿ ಅನಧಿಕೃತ ಹೋಂ ಸ್ಟೇಗಳು ನಿರ್ಮಾಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಇದನ್ನು ತೆರವುಗೊಳಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ;

(ಆ) ಈ ಅನಧಿಕೃತ ಹೋಂ ಸ್ಟೇಗಳ ನಿರ್ಮಾಣದಲ್ಲಿ ಅಧಿಕಾರಿಗಳು ಶಾಮೀಲಾಗಿರುವುದು ನಿಜವೇ; ಇವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ;

(ಇ) ಇದೇ ರೀತಿ ಹಲವಾರು ಜಿಲ್ಲೆಗಳಲ್ಲಿ ಇರುವ ಅನಧಿಕೃತ ಹೋಂ ಸ್ಟೇಗಳನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡ ಕ್ರಮವೇನು ? (ವಿವರ ನೀಡುವುದು)

## ಕರ್ನಾಟಕ ಶಿಕ್ಷಣ ಆಯೋಗ ರಚನೆಗೆ ಸರ್ಕಾರ ಕೈಗೊಂಡ ಕ್ರಮಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೫ (೧೬೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಷ್ಟ್ರೀಯ ಶಿಕ್ಷಣ ನೀತಿ ಅನುಷ್ಠಾನಕ್ಕಾಗಿ ರಾಜ್ಯದಲ್ಲಿಯೂ ಕರ್ನಾಟಕ ಶಿಕ್ಷಣ ಆಯೋಗ ರಚನೆ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

(ಆ) ಆರ್ಥಿಕವಾಗಿ ಹಿಂದುಳಿದ ಮಕ್ಕಳಿಗಾಗಿ ಮತ್ತು ವಿಶೇಷ ಸಾಮರ್ಥ್ಯವುಳ್ಳವರಿಗೆ ಅನುದಾನ ಸೇರಿದಂತೆ ಹಾಗೂ ಇತರೆ ಶೈಕ್ಷಣಿಕ ಕಾರ್ಯಕ್ಕೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ಈ ಕಾರ್ಯಕ್ರಮಕ್ಕೆ ಪ್ರಸಕ್ತ ಸಾಲಿನಲ್ಲಿ ಎಷ್ಟು ಅನುದಾನ ಮೀಸಲಿಡಲಾಗಿದೆ ಮತ್ತು ವೆಚ್ಚ ಮಾಡಲಾಗಿದೆ ? (ಜಿಲ್ಲಾವಾರು ಮಾಹಿತಿ ಒದಗಿಸುವುದು)

## ಎಸ್.ಸಿ.ಪಿ/ಟಿ.ಎಸ್.ಪಿ., ಯ ಕಾಮಗಾರಿಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೬ (೧೦೧) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪ್ರಸಕ್ತ ಸಾಲಿನಲ್ಲಿ ಎಸ್.ಸಿ.ಪಿ/ಟಿ.ಎಸ್.ಪಿ. ಗೆ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ ; (ವಿವರ ನೀಡುವುದು)

(ಆ) ಬಿಡುಗಡೆಯಾದ ಹಣವು ಸರಿಯಾದ ರೀತಿಯಲ್ಲಿ ಬಳಕೆಯಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಬಿಡುಗಡೆಯಾದ ಹಣದಲ್ಲಿ ಎಷ್ಟು ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; (ಸಂಪೂರ್ಣ ವಿವರ ನೀಡುವುದು) ಹಾಗೂ ಕಾಮಗಾರಿಗಳು ಯಾವ ಯಾವ ಹಂತದಲ್ಲಿದೆ ; ಮತ್ತು ಮುಕ್ತಾಯವಾಗಿರುವ ಕಾಮಗಾರಿಗಳ ವಿವರಗಳನ್ನು ಸಂಪೂರ್ಣವಾಗಿ ನೀಡುವುದು ;

(ಈ) ಎಸ್.ಸಿ.ಪಿ/ಟಿ.ಎಸ್.ಪಿ.ಗೆ ಅನುದಾನ ಬಿಡುಗಡೆಗೊಂಡು ಇನ್ನು ಪ್ರಾರಂಭವಾಗದೇ ಇರುವ ಕಾಮಗಾರಿಗಳ ವಿವರ ಹಾಗೂ ಪ್ರಾರಂಭ ಮಾಡಲು ಇರುವ ಅರ್ಹತೆಗಳೇನು ; ಇವುಗಳನ್ನು ಪ್ರಾರಂಭ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ತಿಳಿಸುವುದು)

## ಅನುದಾನಿತ ಶಾಲೆಗಳ ನೌಕರರಿಗೆ ಕಾಲ್ಪನಿಕ ವೇತನ ಬಡ್ತಿ ನೀಡುವ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :–**

೧೦೭ (೧೮೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಅನುದಾನಿತ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಕಾಲ್ಪನಿಕ ವೇತನ ಬಡ್ತಿ ಪಡೆಯಲು ಅರ್ಹರಾಗಿರುವ ಸಿಬ್ಬಂದಿ ವರ್ಗದವರೆಷ್ಟು ; ಹಾಗೂ ಇದಕ್ಕೆ ಹಣವೆಷ್ಟು ;

(ಆ) ಕಾಲ್ಪನಿಕ ವೇತನ ಬಡ್ತಿ ನೀಡಲು ಶ್ರೀ ಬಸವರಾಜಹೊರಟ್ಟಿಯವರ ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದ ಸಮಿತಿಯು ಸರ್ಕಾರಕ್ಕೆ ವರದಿ ನೀಡಲಾಗಿದೆಯೇ ; ಸರ್ಕಾರವು ವರದಿಯನ್ನು ಅಂಗೀಕರಿಸಿರುವುದೇ ; (ವಿವರ ನೀಡುವುದು)

(ಇ) ಕಾಲ್ಪನಿಕ ವೇತನ ಬಡ್ತಿ ನೀಡುವ ಬಗ್ಗೆ ಸರ್ಕಾರವು ನಿರ್ಧಾರ ಕೈಗೊಂಡಿದೆಯೇ ;

(ಈ) ಯಾವ ಕಾಲಮಿತಿಯಲ್ಲಿ ಕಾಲ್ಪನಿಕ ವೇತನ ಬಡ್ತಿಯನ್ನು ನೀಡಲಾಗುತ್ತದೆ ? (ವಿವರ ನೀಡುವುದು)

## ಖಾಸಗಿ ಶಾಲೆಗಳಲ್ಲಿ ಆರ್.ಟಿ.ಇ. ಮೂಲಕ ವಿದ್ಯಾರ್ಥಿಗಳ ಪ್ರವೇಶದ ಬಗ್ಗೆ

**ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮ ನಿರ್ದೇಶನ ಹೊಂದಿದವರು) :–**

೧೦೮ (೧೦೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಖಾಸಗಿ ಶಾಲೆಗಳಲ್ಲಿ ಆರ್.ಟಿ.ಇ. ಮೂಲಕ ವಿದ್ಯಾರ್ಥಿಗಳಿಗೆ ಪ್ರವೇಶ ಅವಕಾಶ ನೀಡಲಾಗಿದೆಯೇ ;

(ಆ) ಎಷ್ಟು ಖಾಸಗಿ ಶಾಲೆಗಳಲ್ಲಿ ಮಕ್ಕಳಿಗೆ ಪ್ರವೇಶ ಅವಕಾಶ ನೀಡಲಾಗಿದೆ ; (ವಿವರ ನೀಡುವುದು)

(ಇ) ಸರ್ಕಾರದಿಂದ ಖಾಸಗಿ ಶಾಲೆಗಳಿಗೆ ಆರ್.ಟಿ.ಇ. ವತಿಯಿಂದ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳಿಗೆ ಹಣ ಭರಿಸಲಾಗಿದಯೇ? (ವಿವರ ಒದಗಿಸುವುದು)

## ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಕ್ಕರೆ ಕಾರ್ಖಾನೆಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮ ನಿರ್ದೇಶನ ಹೊಂದಿದವರು) :–**

೧೦೯ (೧೦೩) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ಸಕ್ಕರೆ ಕಾರ್ಖಾನೆಗಳೆಷ್ಟು ; ಇದರಲ್ಲಿ ಸರ್ಕಾರಿ, ಖಾಸಗಿ ಮಾಲೀಕತ್ವದ ಕಾರ್ಖಾನೆಗಳ ವಿವರ ನೀಡುವುದು ;

(ಆ) ಸಕ್ಕರೆ ಕಾರ್ಖಾನೆಗಳಿಂದ ಮಾಲಸಿಸ್ ಹಾಗೂ ವಿದ್ಯುತ್ ಎಷ್ಟು ಪ್ರಮಾಣದಲ್ಲಿ ಉತ್ಪಾದಿಸಲಾಗುತ್ತಿದೆ ; (ವಿವರ ನೀಡುವುದು)

(ಇ) ಸಕ್ಕರೆ ಕಾರ್ಖಾನೆಗಳಿಂದ ಬರುತ್ತಿರುವ ಆದಾಯ ಎಷ್ಟು ? (ವಿವರ ನೀಡುವುದು)

## ಖಾಸಗಿ ವಿದ್ಯಾಸಂಸ್ಥೆಗಳು ಅಗ್ನಿ ಶಾಮಕ ಹಾಗೂ ಕಟ್ಟಡ ಸುಸ್ಥಿತಿ ಬಗ್ಗೆ

**ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮ ನಿರ್ದೇಶನ ಹೊಂದಿದವರು) :–**

೧೧೦ (೧೦೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಖಾಸಗಿ ವಿದ್ಯಾ ಸಂಸ್ಥೆಗಳು ಅಗ್ನಿಶಾಮಕ ಹಾಗೂ ಕಟ್ಟಡ ಸುಸ್ಥಿತಿ ಧೃಢೀಕರಣ ಪತ್ರವನ್ನು ಪಡೆಯಲು ಇಚ್ಚೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಧೃಢೀಕರಣ ಪತ್ರವು ಖಾಸಗಿ ವಿದ್ಯಾ ಸಂಸ್ಥೆಗಳಿಗೆ ಮಾತ್ರ ಅನ್ವಯಿಸುತ್ತದೆಯೇ ; ಅಥವಾ ಸರ್ಕಾರಿ ವಿದ್ಯಾಸಂಸ್ಥೆಗೂ ಅನ್ವಯಿಸುತ್ತದೆಯೇ ? (ಸಂಪೂರ್ಣ ವಿವರ ಒದಗಿಸುವುದು)

## ಸಾಮಾಜಿಕ ಅರಣ್ಯ ವತಿಯಿಂದ ಸಸಿ ನೆಡುವ ಬಗ್ಗೆ

**ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮ ನಿರ್ದೇಶನ ಹೊಂದಿದವರು) :–**

೧೧೧ (೧೦೪) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಜಿಲ್ಲೆಯಲ್ಲಿ ಸಾಮಾಜಿಕ ಅರಣ್ಯ ವತಿಯಿಂದ ಯಾವ ಯಾವ ಪ್ರದೇಶಗಳಲ್ಲಿ ಸಸಿ ನೆಡುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ;

(ಆ) ಕಳೆದ ೩ ವರ್ಷಗಳಲ್ಲಿ ಇತರೆ ಯಾವ ಯಾವ ಯೋಜನೆಯಡಿ ರೂಪುಗೊಂಡಿರುವ ಯೋಜನೆಗಳೆಷ್ಟು ? (ವಿವರ ಒದಗಿಸುವುದು)

## ಸಾರ್ವಜನಿಕ ಗ್ರಂಥಾಲಯಗಳಿಗೆ ಪ್ರತಿ ವರ್ಷ ಪುಸ್ತಕ ಖರೀದಿಗೆ ಸರ್ಕಾರ ನೀಡುತ್ತಿರುವ ಅನುದಾನ

**ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೧೨ (೮೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸಾರ್ವಜನಿಕ ಗ್ರಂಥಾಲಯಗಳಿಗೆ ಪ್ರತಿ ವರ್ಷ ಪುಸ್ತಕ ಖರೀದಿಗೆ ಸರ್ಕಾರ ನೀಡುತ್ತಿರುವ ಅನುದಾನ ಎಷ್ಟು;

(ಆ) ಗ್ರಂಥಾಲಯ ಡಿಜಿಟಲೀಕರಣ ಮತ್ತು ಇ-ಪುಸ್ತಕಗಳ ಖರೀದಿಗೆ ಮೀಸಲಿಟ್ಟಿರುವ ಅನುದಾನ ಎಷ್ಟು ;

(ಇ) ರಾಜ್ಯದಲ್ಲಿ ಶಿಥಿಲಗೊಂಡಿರುವ ಗ್ರಂಥಾಲಯಗಳ ಕಟ್ಟಡಗಳ ಸಂಖ್ಯೆ ಎಷ್ಟು ; ಇವುಗಳ ದುರಸ್ಥಿಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಈ) ಗ್ರಂಥಾಲಯಗಳಿಗೆ ಇಲಾಖೆಯಿಂದ ಪ್ರತಿವರ್ಷ ಖರೀದಿಸುವ ಪುಸ್ತಕಗಳಾವುವು ? (ಸಂಪೂರ್ಣ ವಿವರ ನೀಡುವುದು)

## ರಾಷ್ಟ್ರೀಯ ಹಸಿರು ನ್ಯಾಯಾಧೀಕರಣದ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೧೩ (೧೨೫) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಷ್ಟ್ರೀಯ ಹಸಿರು ನ್ಯಾಯಾಧಿಕರಣ ಪೀಠವು ಕೆರೆಯಂಗಳದ ಸುತ್ತಮುತ್ತ ಮತ್ತು ರಾಜಕಾಲುವೆಯ ಬಳಿ ಕಟ್ಟಡ ಇನ್ನಿತರ ಕಾಮಗಾರಿ ನಿರ್ಮಾಣ ಮಾಡುವುದಕ್ಕೆ ನಿರ್ಬಂಧ ವಿಧಿಸಿ (ಬಫರ್ ಝೋನ್) ಆದೇಶ ಹೊರಡಿಸಿರುವುದು ನಿಜವೆ ;

(ಆ) ಹಾಗಿದ್ದಲ್ಲಿ, ಆದೇಶ ನೀಡಿದ್ದು ಯಾವಾಗ ; (ಆದೇಶದ ಪೂರ್ಣ ಮಾಹಿತಿ ನೀಡುವುದು)

(ಇ) ಆದೇಶವನ್ನು ಪಾಲನೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಈ ಕುರಿತು ಹೊರಡಿಸಿರುವ ಆದೇಶದ ಪ್ರತಿ ಒದಗಿಸುವುದು)

(ಈ) ಬಫರ್ ಝೋನ್ ವ್ಯಾಪ್ತಿಯಲ್ಲಿ ಮನೆ, ನಿವೇಶನ ಖರೀದಿ ಮಾಡಿರುವವರಿಗೆ ಎನ್.ಜಿ.ಟಿ. ಆದೇಶದಿಂದ ತುಂಬ ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅವರ ಹಿತವನ್ನು ಕಾಯಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ? (ಮಾಹಿತಿ ನೀಡುವುದು)

## ಅರಣ್ಯ ಇಲಾಖೆಯ ಜೇಷ್ಠತಾ ಪಟ್ಟಿ ಕುರಿತು

**ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೪ (೧೨೩) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅರಣ್ಯ ಇಲಾಖೆಯ ನೌಕರರ ಜೇಷ್ಠತಾ ಪಟ್ಟಿಯು ನ್ಯೂನತೆಯನ್ನು ಒಳಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸರ್ಕಾರದ ಸಮಿತಿಯ ವರದಿ ಮತ್ತು ಆದೇಶ ಪಾಲನೆಯಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈಗಾಗಲೇ ವೃಂದ ಮುಖ್ಯಸ್ಥರ ವಿರುದ್ಧ ಕ್ರಮ ಕೈಗೊಳ್ಳದಿರಲು ಕಾರಣವೇನು ; (ಮಾಹಿತಿ ನೀಡುವುದು)

(ಇ) ಕ್ರಮ ಜರುಗಿಸಿದ್ದರೆ ಯಾರ ಮೇಲೆ ಜರುಗಿಸಲಾಗಿದೆ ? (ವಿವರ ನೀಡುವುದು)

## ರಾಜ್ಯದಲ್ಲಿನ ಕಳೆದ ೩ ವರ್ಷಗಳ ಗಂಗಾ ಕಲ್ಯಾಣ ಯೋಜನೆ ಕುರಿತು

**ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೫ (೧೨೨) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಿಂದ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಕೊರೆಸಲಾದ ಕೊಳವೆ ಬಾವಿಗಳೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕೊರೆಸಲಾದ ಕೊಳವೆ ಬಾವಿಗಳಲ್ಲಿ ವಿಫಲವಾದ ಹಾಗೂ ಸಫಲವಾದ ಕೊಳವೆ ಬಾವಿಗಳೆಷ್ಟು ;

(ಇ) ಈ ಯೋಜನೆಯಲ್ಲಿ ಕೊರೆಸಿದ ಕೊಳವೆ ಬಾವಿಗಳಲ್ಲಿ ಎಷ್ಟು ಕೊಳವೆ ಬಾವಿಗಳಿಗೆ ಮೋಟಾರು ಜೋಡಿಸಿ ವಿದ್ಯುಚ್ಛಕ್ತಿ ಒದಗಿಸಲಾಗಿದೆ? (ಸಂಪೂರ್ಣ ವಿವರ ನೀಡುವುದು)

## ಪದವಿ ವ್ಯಾಸಂಗಕ್ಕೆ ದಾಖಲಾತಿ ಕುರಿತು

**ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೬ (೧೨೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಸಕ್ತ ಸಾಲಿನಲ್ಲಿ ಪದವಿ ವ್ಯಾಸಂಗಕ್ಕೆ ಸಂಬಂಧಿಸಿದಂತೆ ಕಾಲೇಜುಗಳಲ್ಲಿ ಅಂತಿದ ದಿನಾಂಕದ ನಂತರ ವಿದ್ಯಾರ್ಥಿಗಳಿಗೆ ದಾಖಲಾತಿ ಮಾಡಿಕೊಳ್ಳಲು ನಿರಾಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ದಾಖಲಾತಿ ಕುರಿತಂತೆ ಅಂತಿಮ ದಿನಾಂಕವನ್ನು ನಿಗಧಿಗೊಳಿಸಿದ್ದ ಬಗ್ಗೆ ವಿದ್ಯಾರ್ಥಿಗಳಿಗೆ ಮಾಹಿತಿ ಇಲ್ಲದೇ ವಿಳಂಬವಾಗಿರುವುದರಿಂದ ಅವರ ಭವಿಷ್ಯದ ವಿದ್ಯಾಭ್ಯಾಸ ಒಂದು ವರ್ಷ ವಿನಾಕಾರಣ ಹಾಳಾಗುತ್ತಿರುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ದಾಖಲಾತಿ ವಂಚಿತ ವಿದ್ಯಾರ್ಥಿಗಳಿಗೆ ಪುನಃ ಅವಕಾಶ ಕಲ್ಪಿಸಲು ದಾಖಲಾತಿ ದಿನಾಂಕವನ್ನು ವಿಸ್ತರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಈ) ಕೋವಿಡ್ ಕಾರಣದಿಂದಾಗಿ ಜನವರಿ ೩೧, ೨೦೨೧ರವರೆಗೆ ದಾಖಲಾತಿಗೆ ಅವಕಾಶ ಕಲ್ಪಿಸಿಕೊಟ್ಟು ವಿದ್ಯಾರ್ಥಿಗಳಿಗೆ ಭವ್ಯ ಭವಿಷ್ಯ ನಿರ್ಮಾಣ ಮಾಡುವಲ್ಲಿ ಅನುಕೂಲ ಮಾಡಿಕೊಡಲಾಗುವುದೇ ? (ಮಾಹಿತಿ ನೀಡುವುದು)

## ರಾಜ್ಯದ ತಾಲ್ಲೂಕು ಆಸ್ಪತ್ರೆಗಳಲ್ಲಿನ ವೆಂಟಿಲೇಟರ್ ತೀವ್ರ ನಿಗಾ ಘಟಕ ಕುರಿತು

**ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೭ (೧೧೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಎಷ್ಟು ತಾಲ್ಲೂಕು ಆಸ್ಪತ್ರೆಗಳಲ್ಲಿ ವೆಂಟಿಲೇಟರ್‌ಗಳೊಂದಿಗೆ ತೀವ್ರ ನಿಗಾ ಘಟಕಗಳನ್ನು ಸ್ಥಾಪಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ೨೦೧೫ರಲ್ಲಿ ಐಸಿಯು ಸ್ಥಾಪನೆಗೆ ಎಷ್ಟು ಆಸ್ಪತ್ರೆಗಳನ್ನು ಗುರುತಿಸಲಾಗಿತ್ತು ; ಎಷ್ಟು ಜಿಲ್ಲಾಸ್ಪತ್ರೆಗಳಲ್ಲಿ ಐಸಿಯು ಸ್ಥಾಪಿಸಲಾಗಿದೆ; ಯಾವ ಯಾವ ವೈದ್ಯಕೀಯ ಉಪಕರಣಗಳನ್ನು

ಒದಗಿಸಲಾಗಿದೆ ; ಜಿಲ್ಲಾ ಆಸ್ಪತ್ರೆಗಳಲ್ಲಿ ಐಸಿಯು ಎಂದಿನಿಂದ ಕಾರ್ಯನಿರ್ವಹಿಸಲು ಪ್ರಾರಂಭ ಮಾಡಿವೆ ; (ಆಸ್ಪತ್ರೆವಾರು ವಿವರ ನೀಡುವುದು)

(ಇ) ಜಿಲ್ಲಾ ಆಸ್ಪತ್ರೆಗಳಲ್ಲಿ ಐಸಿಯು ಸ್ಥಾಪಿಸಲು ನಿಗಧಿಪಡಿಸಿದ ಮೊತ್ತವೆಷ್ಟು; ವೆಚ್ಚ ಮಾಡಿದ ಮೊತ್ತವೆಷ್ಟು ? (ಆಸ್ಪತ್ರೆವಾರು ವಿವರ ನೀಡುವುದು)

## ಬೋಧಕೇತರ ಸಿಬ್ಬಂದಿ/ಅಧಿಕಾರಿಗಳ ವೃಂದ ಮತ್ತು ನೇಮಕಾತಿ ಹಾಗೂ ಬಡ್ತಿ ಕುರಿತು

**ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೧೮ (೧೨೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕೇತರ ಸಿಬ್ಬಂದಿ/ಅಧಿಕಾರಿಗಳ ವೃಂದ ಮತ್ತು ನೇಮಕಾತಿ ಹಾಗೂ ಬಡ್ತಿ ನಿಯಮಗಳು ತಿದ್ದುಪಡಿಯಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಹಾಲಿ ಇರುವ ವೃಂದ ಮತ್ತು ನೇಮಕಾತಿ ಹಾಗೂ ಬಡ್ತಿ ನಿಯಮಗಳು ಯಾವ ದಿನಾಂಕದಿಂದ ಜಾರಿಯಲ್ಲಿವೆ ; ನಿಯಮ (ಆದೇಶ)ಗಳ ಪ್ರತಿಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು ;

(ಇ) ಬೋಧಕ ಸಿಬ್ಬಂದಿ/ಅಧಿಕಾರಿಗಳ ವೃಂದ ಮತ್ತು ನೇಮಕಾತಿ ಹಾಗೂ ಬಡ್ತಿ ನಿಯಮಗಳು ಹಾಲಿ ಯಾವ ದಿನಾಂಕದಿಂದ ಜಾರಿಯಲ್ಲಿವೆ ; ಈ ಹಿಂದೆ ಜಾರಿಯಲ್ಲಿದ್ದ ಮತ್ತು ಹಾಲಿ ಚಾಲ್ತಿಯಲ್ಲಿರುವ ಆದೇಶಗಳ ಪ್ರತಿಗಳನ್ನು ನೀಡುವುದು ;

(ಈ) ಹಾಲಿ ಇರುವ ಬೋಧಕೇತರ ಸಿಬ್ಬಂದಿ/ಅಧಿಕಾರಿಗಳ ವೃಂದ ಮತ್ತು ನೇಮಕಾತಿ ಹಾಗೂ ಬಡ್ತಿ ನಿಯಮಗಳ ತಿದ್ದುಪಡಿ ಕುರಿತು ಸರ್ಕಾರ ಅಗತ್ಯ ಕ್ರಮಕೈಗೊಳ್ಳುವುದೇ; ಕೈಗೊಂಡಿದ್ದಲ್ಲಿ, ಯಾವ ರೀತಿ ಕ್ರಮವಹಿಸಲಾಗುತ್ತಿದೆ ; (ಪೂರ್ಣ ಮಾಹಿತಿ ನೀಡುವುದು)

(ಉ) ವೃಂದ ಮತ್ತು ನೇಮಕಾತಿ ಹಾಗೂ ಬಡ್ತಿ ನಿಯಮಗಳ ತಿದ್ದುಪಡಿ ಕುರಿತು ಸರ್ಕಾರಕ್ಕಿರುವ ತೊಂದರೆಗಳೇನು ? (ಪೂರ್ಣ ಮಾಹಿತಿ ನೀಡುವುದು)

## ರಾಜ್ಯದ ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿನ ಹಾಸ್ಟೆಲ್‌ಗಳ ಸ್ಥಿತಿಗತಿ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೧೧೯ (೧೭೯) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಒಟ್ಟು ಎಷ್ಟು ವಿದ್ಯಾರ್ಥಿ ವಸತಿ ನಿಲಯಗಳು (ಹಾಸ್ಟೆಲ್‌ಗಳು) ಅಸ್ಥಿತ್ವದಲ್ಲಿವೆ; (ಜಿಲ್ಲಾವಾರು/ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ವಸತಿ ನಿಲಯಗಳಲ್ಲಿ ಮೂಲಭೂತ ಸೌಕರ್ಯಗಳಾದ ಶೌಚಾಲಯ, ಶುದ್ಧ ಕುಡಿಯುವ ನೀರು, ಬೆಡ್‌ಗಳ ಕೊರತೆ ಮತ್ತು ಶುಚಿಯಾದ ಕೋಣೆಗಳ ವ್ಯವಸ್ಥೆ ಇಲ್ಲದೇ ಇರುವ ಕುರಿತು ಒಟ್ಟು ಎಷ್ಟು ದೂರುಗಳು ಸಲ್ಲಿಕೆಯಾಗಿವೆ; ಮತ್ತು ಎಷ್ಟು ದೂರುಗಳಿಗೆ ಸರ್ಕಾರದಿಂದ ಸೂಕ್ತ ಕ್ರಮ ಜರುಗಿಸಲಾಗಿದೆ;

(ಇ) ಈ ವಸತಿ ನಿಲಯಗಳಲ್ಲಿರುವ ಪ್ರತಿ ವಿದ್ಯಾರ್ಥಿಗೆ ಎಷ್ಟು ಪ್ರಮಾಣದ ಪೌಷ್ಟಿಕಾಂಶಗಳ ಆಹಾರವನ್ನು ನೀಡಲು ನಿಯಮ ರೂಪಿಸಲಾಗಿದೆ; ದೈನಂದಿನವಾಗಿ ಈ ನಿಯಮಗಳ ಪಾಲನೆ ಪರೀಶಿಲಿಸಲು ಯಾವುದಾದರೂ ವ್ಯವಸ್ಥೆ ಜಾರಿಯಲ್ಲಿದೆಯೇ; (ವಿವರ ನೀಡುವುದು)

(ಈ) ಸದರಿ ಹಲವು ವಸತಿ ನಿಲಯಗಳಲ್ಲಿ ಸೂಕ್ತ ಗ್ರಂಥಾಲಯಗಳು ಇಲ್ಲದೇ ಇರುವುದು, ಮತ್ತು ಇರುವ ಗ್ರಂಥಾಲಯಗಳ ಸಮರ್ಪಕ ನಿರ್ವಹಣೆ ಆಗದೇ ಇರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು ? (ವಿವರ ನೀಡುವುದು)

## ರಾಜ್ಯದಲ್ಲಿರುವ ಅರಣ್ಯ ಪ್ರದೇಶದ ಸಮೀಕ್ಷೆ ಮತ್ತು ಗಡಿ ಗುರುತಿಸುವ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೧೨೦ (೧೮೦) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಅರಣ್ಯ ಪ್ರದೇಶದ ಸಮೀಕ್ಷೆ ಮತ್ತು ಗಡಿ ಪುನರ್ ಗುರುತಿಸುವ ಕಾರ್ಯವನ್ನು ನಡೆಸಲಾಗಿದೆಯೇ; ನಡೆಸಿದ್ದಲ್ಲಿ, ಯಾವ ಯಾವ ವರ್ಷಗಳಲ್ಲಿ ನಡೆಸಲಾಗಿದೆ; (ವಿವರ ನೀಡುವುದು)

(ಆ) ಅರಣ್ಯ ಪ್ರದೇಶದ ಮಾಹಿತಿಯನ್ನು ಸಮರ್ಪಕವಾಗಿ ನಿಗಾ ಇಡಲು ಮತ್ತು ರಕ್ಷಿಸಲು ಭೌಗೋಳಿಕ ಮಾಹಿತಿ ವ್ಯವಸ್ಥೆ(ಜಿಐಎಸ್) ಅಥವಾ ಇನ್ನಿತರೆ ಆಧುನಿಕ ತಂತ್ರಜ್ಞಾನವನ್ನು ರಾಜ್ಯ ಸರ್ಕಾರದಿಂದ ಉಪಯೋಗಿಸಲಾಗುತ್ತಿದೆಯೇ ; (ವಿವರ ನೀಡುವುದು)

(ಇ) ಅರಣ್ಯ ಪ್ರದೇಶಗಳಲ್ಲಿ ಅತಿಕ್ರಮಣಗಳನ್ನು ಸಂಪೂರ್ಣವಾಗಿ ತಡೆಗಟ್ಟಲು, ಒತ್ತುವರಿ ಸಮಸ್ಯೆ ಇರುವ ಪ್ರದೇಶಗಳಲ್ಲಿ ಗುಂಡಿ ತೋಡುವ ಮತ್ತು ಬೇಲಿಗಳನ್ನು ಹಾಕುವ ಕೆಲಸಗಳನ್ನು ಸರ್ಕಾರದಿಂದ ಮಾಡಲಾಗಿದೆಯೇ; ಅಥವಾ ಮಾಡಲು ಸರ್ಕಾರ ಚಿಂತನೆ ನಡೆಸಿದೆಯೇ; (ವಿವರ ನೀಡುವುದು)

(ಈ) ಸಂರಕ್ಷಿತ ಅರಣ್ಯ ಪ್ರದೇಶಗಳಲ್ಲಿ (Reserved Forest) ಕಾಡ್ಗಿಚ್ಚು ಹರಡದಂತೆ ತಡೆಯಲು ಸರ್ಕಾರದಿಂದ ಯಾವ ಯಾವ ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸಲಾಗುತ್ತಿದೆ; (ವಿವರ ನೀಡುವುದು)

(ಉ) ಇತ್ತೀಚಿಗೆ ಅರಣ್ಯ ಪ್ರದೇಶದಿಂದ ಕಾಡು ಪ್ರಾಣಿಗಳು ಆಹಾರಕ್ಕಾಗಿ ಮತ್ತು ಇನ್ನಿತರೆ ಕಾರಣಗಳಿಂದ ನಗರ/ಪಟ್ಟಣದ ವಸತಿ ಪ್ರದೇಶಗಳಿಗೆ ಬರುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು ? (ವಿವರ ನೀಡುವುದು)

## ಪ್ರಾಥಮಿಕ ಶಾಲಾ ಶಿಕ್ಷಕರಿಂದ ಪ್ರೌಢಶಾಲಾ ಸಹ ಶಿಕ್ಷಕರ ಗ್ರೇಡ್-೨ ಹುದ್ದೆಗೆ ಮುಂಬಡ್ತಿ ಕುರಿತು

**ಶ್ರೀ ಶಶೀಲ್ ಜಿ ನಮೋಶಿ (ಶಿಕ್ಷಕರ ಕ್ಷೇತ್ರ) :-**

೧೨೧ (೧೬೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಬಿ.ಎ./ ಬಿ.ಎಸ್ಸಿ.,/ಬಿ.ಎಡ್., ಪದವೀಧರ ಶಿಕ್ಷಕರಿಗೆ ಪ್ರೌಢ ಶಾಲಾ ಸಹ ಶಿಕ್ಷಕರ ಗ್ರೇಡ್-೨ ವೃಂದಕ್ಕೆ ೫೦% ಅನುಪಾತದಂತೆ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಮುಂಬಡ್ತಿ ನೀಡಲಾಗಿದೆಯೇ;

(ಆ) ನೀಡಿದ್ದರೆ, ಜಿಲ್ಲಾವಾರು ೫೦% ನೇರ ನೇಮಕ ೫೦% ಮುಂಬಡ್ತಿ ಆಧ'ರಿಸಿ ದಿನಾಂಕ:೦೧-೦೧-೨೦೨೧ಕ್ಕೆ ಇದ್ದಂತೆ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಕಲಬುರಗಿ ವಿಶ್ವವಿದ್ಯಾಲಯದ ಮಾಹಿತಿ ಕುರಿತು

**ಶ್ರೀ ಶಶೀಲ್ ಜಿ ನಮೋಶಿ (ಶಿಕ್ಷಕರ ಕ್ಷೇತ್ರ) :-**

೧೨೨ (೧೬೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಲಬುರಗಿ ವಿಶ್ವವಿದ್ಯಾಲಯದಲ್ಲಿ ಮಂಜೂರಾಗಿರುವ ಬೋಧಕ ಹಾಗೂ ಬೋಧಕೇತರ ಹುದ್ದೆಗಳು ಎಷ್ಟು;

(ಆ) ಪ್ರಸ್ತುತ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು;

(ಇ) ಖಾಲಿ ಇರುವ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು;

(ಈ) ಖಾಲಿ ಇರುವ ಬೋಧಕ/ಬೋಧಕೇತರ ಹುದ್ದೆಗಳ ಕಾರಣದಿಂದ ವಿಶ್ವವಿದ್ಯಾಲಯದ ಶೈಕ್ಷಣಿಕ ಗುಣಮಟ್ಟ ಕುಸಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? (ವಿವರಣೆ ನೀಡುವುದು)

## GPT (೬ರಿಂದ ೮ನೇ ತರಗತಿ) ಶಿಕ್ಷಕರಾಗಿ ಮುಂಬಡ್ತಿ ಕುರಿತು

**ಶ್ರೀ ಶಶೀಲ್ ಜಿ ನಮೋಶಿ (ಶಿಕ್ಷಕರ ಕ್ಷೇತ್ರ) :-**

೧೨೩ (೧೬೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:-

ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ (೧-೫) ವೃಂದದಲ್ಲಿ ಸೇವೆ ಸಲ್ಲಿಸುತ್ತಿರುವ ೮೦,೦೦೦ಕ್ಕೂ ಅಧಿಕ ಪದವೀಧರ ಶಿಕ್ಷಕರಿಗೆ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರು (೬ರಿಂದ ೮ನೇ ತರಗತಿ) ಆಗಿ ಪದೋನ್ನತಿ ನೀಡಲು ಸಿ & ಆರ್ ದಿನಾಂಕ:೦೭-೦೮-೨೦೧೭ನ್ನು ತಿದ್ದುಪಡಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಅರಣ್ಯ ಹಕ್ಕು ಕಾಯ್ದೆಯಡಿ ಬುಡಕಟ್ಟು ಸಮೂದಾಯದವರ ಜಮೀನು ಮಂಜೂರಾತಿ ವಿವರ ಬಗ್ಗೆ

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೧೨೪ (೧೭೧) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಅರಣ್ಯ ಹಕ್ಕು ಕಾಯ್ದೆಯಡಿ ಬುಡಕಟ್ಟು ಸಮೂದಾಯದ ಜಮೀನು ಮಂಜೂರಾತಿಗೆ ಸಲ್ಲಿಸಿದ ಒಟ್ಟು ಅರ್ಜಿಗಳು ಹಾಗೂ ಮಂಜೂರಾದ ಅರ್ಜಿಗಳು ಎಷ್ಟು;

(ಆ) ಬಾಕಿ ಉಳಿದಿರುವ ಅರ್ಜಿಗಳು ಮಂಜೂರಾಗದೆ ಇರಲು ಕಾರಣ ಹಾಗೂ ಇದನ್ನು ಪೂರ್ಣಗೊಳಿಸಲು ಬೇಕಾಗುವ ಸಮಯ ಎಷ್ಟು ;

(ಇ) ಹೊಸದಾಗಿ ಅರ್ಜಿ ಸಲ್ಲಿಸಲು ಇರುವ ಕಾಲಾವಕಾಶ ಎಷ್ಟು ?

## ವಿವಿಧ ಯೋಜನೆಗಳಿಗಾಗಿ ಬುಡಕಟ್ಟು ಕುಟುಂಬಗಳನ್ನು ಅರಣ್ಯ ಪ್ರದೇಶಗಳಿಂದ ಸ್ಥಳಾಂತಸಿದ ಬಗ್ಗೆ

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೧೨೫ (೧೭೨) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸರಕಾರದ ವಿವಿಧ ಯೋಜನೆಗಳಿಗಾಗಿ ಬುಡಕಟ್ಟು ಕುಟುಂಬಗಳನ್ನು ಅರಣ್ಯ ಪ್ರದೇಶಗಳಿಂದ ಸ್ಥಳಾಂತರಿಸಿದ ಒಟ್ಟು ಕುಟುಂಬಗಳ ಸಂಖ್ಯೆ ಎಷ್ಟು;

(ಆ) ಸ್ಥಳಾಂತರಿತಗೊಂಡ ಕುಟುಂಬಗಳಲ್ಲಿ ಪೂರ್ಣ ಪ್ರಮಾಣದ ಪುನರ್ ವಸತಿ ಪಡೆದುಕೊಂಡ ಕುಟುಂಬಗಳು ಎಷ್ಟು;

(ಇ) ಬಾಕಿ ಉಳಿದಿರುವ ಕುಟುಂಬಗಳಿಗೆ ವಸತಿ ಕಲ್ಪಿಸಲು ಬೇಕಾಗುವ ಸಮಯ ಎಷ್ಟು ?

## ವಿಶ್ವವಿದ್ಯಾಲಯಗಳಲ್ಲಿನ ಖಾಲಿ ಹುದ್ದೆಗಳ ಭರ್ತಿ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :-**

೧೨೬ (೧೩೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು;

(ಆ) ಈ ವಿಶ್ವವಿದ್ಯಾಲಯಗಳಲ್ಲಿ ಮಂಜೂರಾದ ಒಟ್ಟು ಹುದ್ದೆಗಳೆಷ್ಟು; (ವಿವರ ನೀಡುವುದು)

(ಇ) ಇದರಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು; (ವಿವರ ನೀಡುವುದು)

(ಈ) ಖಾಲಿ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು ?

## ಅತಿಥಿ ಉಪನ್ಯಾಸಕರುಗಳಿಗೆ ನೇಮಕಾತಿ ಆದೇಶವನ್ನು ನೀಡುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೧೨೭ (೧೩೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕೋವಿಡ್ ಕಾರಣದಿಂದ ಸ್ಥಗಿತವಾಗಿದ್ದ ಪ್ರಥಮ ದರ್ಜೆ ಕಾಲೇಜುಗಳು ಯಾವಾಗ ಆರಂಭಗೊಳ್ಳುತ್ತವೆ;

(ಆ) ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲಿ ಅತಿಥಿ ಉಪನ್ಯಾಸಕರುಗಳನ್ನು ನೇಮಕಾತಿ ಮಾಡಲಾಗಿದೆಯೇ;

(ಇ) ಇಲ್ಲವಾದಲ್ಲಿ, ಇವರಿಗೆ ಯಾವಾಗ ನೇಮಕಾತಿ ಮಾಡಲಾಗುವುದು ?

## ಬಸವರಾಜ ಹೊರಟ್ಟಿ ರವರ ಸಮಿತಿ ವರದಿ ಜಾರಿ ಮಾಡುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೧೨೮ (೧೩೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿಕ್ಷಕರು/ಉಪನ್ಯಾಸಕರ 'ಕಾಲ್ಪನಿಕ ವೇತನ ಬಡ್ತಿ' (ಅನುದಾನಿತ–ಶಾಲಾ–ಕಾಲೇಜುಗಳಲ್ಲಿ) ಬಗ್ಗೆ ಬಸವರಾಜ ಹೊರಟ್ಟಿರವರ ನೇತೃತ್ವದಲ್ಲಿ ಸಮಿತಿಯನ್ನು ಯಾವಾಗ ರಚಿಸಲಾಗಿದೆ;

(ಆ) ಸದರಿ ಸಮಿತಿಯು ಯಾವಾಗ ವರದಿಯನ್ನು ಸಲ್ಲಿಸಿದೆ; ವರದಿಯು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಈ ಸಮಿತಿಯ ವರದಿಯ ಜಾರಿ ಕುರಿತು ಸರ್ಕಾರದ ನಿಲುವೇನು; ಈ ವರದಿಯನ್ನು ಯಾವಾಗ ಜಾರಿಗೆ ತರಲಾಗುವುದು ?

## ೧೯೯೫ರ ನಂತರದ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೧೨೯ (೧೩೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೧೯೯೫ರ ನಂತರ ಪ್ರಾರಂಭವಾದ ಶಾಲಾ–ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಆ) ಕಳೆದ ೨೫ ವರ್ಷ ಈ ಶಾಲಾ–ಕಾಲೇಜುಗಳಲ್ಲಿನ ಸಿಬ್ಬಂದಿಗಳು ಕಡಿಮೆ ಸಂಬಳಕ್ಕೆ ಸೇವೆ ಸಲ್ಲಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಇವರಿಗೆ ನ್ಯಾಯ ದೊರಕಿಸುವ ನಿಟ್ಟಿನಲ್ಲಿ ೧೯೯೫ರ ನಂತರದ ಶಾಲಾ–ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದಲ್ಲಿ ೨೦೧೩–೧೪ರಲ್ಲಿನ ಅಧ್ಯಾಪಕರ ನೇಮಕಾತಿ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೧೩೦ (೧೩೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದಲ್ಲಿ ೨೦೧೩–೧೪ನೇ ಸಾಲಿನಲ್ಲಿ ಎಷ್ಟು ಜನ ಅಧ್ಯಾಪಕರನ್ನು ನೇಮಕಾತಿ ಮಾಡಲಾಗಿದೆ; (ವಿವರ ನೀಡುವುದು)

(ಆ) ಈ ನೇಮಕಾತಿಯಲ್ಲಿ ಮುದ್ದೇನಹಳ್ಳಿ ಸ್ನಾತಕೋತ್ತರ ಕೇಂದ್ರದ ಎಂ.ಬಿ.ಎ. ವಿಭಾಗಕ್ಕೆ ಸಹ–ಪ್ರಾಧ್ಯಾಪಕರಾಗಿ ನೇಮಕಾತಿಗೊಂಡು ನಂತರ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಪ್ರಾದೇಶಿಕ ಕಛೇರಿ, ಬೆಂಗಳೂರು ಇಲ್ಲಿಗೆ ಎರವಲು ಸೇವೆಯಲ್ಲಿ ಪ್ರಭಾರ ಪ್ರಾದೇಶಿಕ ನಿರ್ದೇಶಕರಾಗಿ ಸೇವೆ ಸಲ್ಲಿಸುತ್ತಿರುವವರು ಯಾರು; (ವಿವರ ನೀಡುವುದು)

(ಇ) ಅವರು ನೇಮಕಗೊಂಡ ಸಂದರ್ಭದಲ್ಲಿ ಅವರು ನೀಡಿದ ಅನುಭವ ಪತ್ರ ಹಾಗೂ ಪದವಿ ಪತ್ರಗಳ ಪ್ರತಿಗಳನ್ನು ನೀಡುವುದು ?

## ರಾಜ್ಯದ ಬುಡಕಟ್ಟು ಜನರಿಗೆ ಸೂಕ್ತ ಸೌಲಭ್ಯಗಳನ್ನು ಒದಗಿಸುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೧ (೧೧೬) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಬುಡಕಟ್ಟು ಜನರ ಹಾಡಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಕೊಡಗು ಜಿಲ್ಲೆಯಲ್ಲಿರುವ ಹಾಡಿಗಳ ಸಂಖ್ಯೆ ಎಷ್ಟು ; (ಅವರುಗಳ ಹೆಸರಿನೊಂದಿಗೆ ಅಲ್ಲಿನ ಜನಸಂಖ್ಯೆಯ ವಿವರಗಳನ್ನು ನೀಡುವುದು)

(ಇ) ಈ ಹಾಡಿಗಳಿಗೆ ಒದಗಿಸಿರುವ ಮೂಲಭೂತ ಸೌಲಭ್ಯಗಳಾವುವು? (ವಿವರ ನೀಡುವುದು)

# ರಾಜ್ಯದ ಅರಣ್ಯದಂಚಿನ ಖಾಸಗಿ ಭೂಮಿಗಳನ್ನು ಮಾರುಕಟ್ಟೆ ದರದಲ್ಲಿ ಖರೀದಿಸುವ ಬಗ್ಗೆ

**ಶ್ರೀ ಸುನಿಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೩೨ (೧೪೯) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಅರಣ್ಯ ಪ್ರದೇಶದ ಅಂಚಿನಲ್ಲಿರುವ ರೈತರು/ ಖಾಸಗಿಯವರು ಅಲ್ಲಿ ಬೆಳೆಗಳನ್ನು ಬೆಳೆಯಲು ಸಾಧ್ಯವಾಗದೆ ತಮ್ಮ ಜಮೀನುಗಳನ್ನು ಅರಣ್ಯ ಇಲಾಖೆಗೆ ಮಾರಾಟ ಮಾಡಲು ತಯಾರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇಂತಹ ಖಾಸಗಿಯವರಿಂದ ಜಮೀನುಗಳನ್ನು ಕೊಳ್ಳಲು ಸರ್ಕಾರದ ಕ್ರಮಗಳೇನು; (ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಇಂತಹ ಭೂಮಿಗಳನ್ನು ಕೊಂಡುಕೊಂಡಿದ್ದಲ್ಲಿ ಅದರ ವಿಸ್ತೀರ್ಣ, ಎಕರೆಗೆ ನೀಡಲಾದ ದರಗಳ ಮಾಹಿತಿ ನೀಡುವುದು;

(ಇ) ಕೊಡಗು ಜಿಲ್ಲೆಯಲ್ಲಿ ಇಂತಹ ಪ್ರಕರಣಗಳು ಯಾವುದಾದರೂ ಇವೆಯೇ; ಇದ್ದಲ್ಲಿ ಅವುಗಳ ವಿವರಗಳನ್ನು ನೀಡುವುದು; ಹಾಗೂ ಈ ಪ್ರಕರಣಗಳಲ್ಲಿ ಇಲ್ಲಿಯವರೆಗೆ ಆಗಿರುವ ಪ್ರಗತಿಯ ಪೂರ್ಣ ವಿವರಗಳನ್ನು ನೀಡುವುದು;

(ಈ) ಕಳೆದ ಮೂರು ವರ್ಷಗಳಲ್ಲಿ ಇಂತಹ ಪ್ರಕರಣಗಳಿಗೆ ಸರ್ಕಾರವು ನೀಡಲಾಗಿರುವ ಅನುದಾನವೆಷ್ಟು ? (ಪೂರ್ಣ ವಿವರ ನೀಡುವುದು)

## ಜನಸಂಖ್ಯೆ ಹೆಚ್ಚಿರುವ ಪ್ರದೇಶಗಳಲ್ಲಿ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀ ಸುನಿಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೩ (೧೪೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಸಮುದಾಯ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸಲು ಇರುವ ಮಾನದಂಡಗಳೇನು; (ಮಾಹಿತಿ ನೀಡುವುದು)

(ಇ) ಒಂದು ಲಕ್ಷಕ್ಕಿಂತ ಹೆಚ್ಚಿನ ಜನಸಂಖ್ಯೆ ಇರುವ ಪ್ರದೇಶಗಳಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಲು ಸರ್ಕಾರದ ಕ್ರಮಗಳೇನು; (ಮಾಹಿತಿ ನೀಡುವುದು) ?

## ಖಾಸಗಿ ಶಾಲೆ ನಡೆಸಲು ಅನುಮತಿ ಕೋರಿ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೪ (೧೧೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಜಿಲ್ಲೆಯಲ್ಲಿ ಕಳೆದ ೦೨ ವರ್ಷದಿಂದ ಖಾಸಗಿ ಶಾಲೆ ನಡೆಸಲು ಅನುಮತಿ ಕೋರಿ ಸ್ವೀಕೃತವಾದ ಅರ್ಜಿಗಳೆಷ್ಟು ; ಅವುಗಳಲ್ಲಿ ಎಷ್ಟು ಖಾಸಗಿ ಶಾಲೆ ನಡೆಸಲು ಅನುಮತಿ ನೀಡಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಖಾಸಗಿ ಶಾಲೆ ನಡೆಸಲು ಅನುಮತಿ ನೀಡಲು ಅನುಸರಿಸುವ ಮಾನದಂಡಗಳೇನು ;

(ಇ) ಹೆಚ್ಚುವರಿ ಶುಲ್ಕ ವಸೂಲಿ, ವಿದ್ಯಾರ್ಥಿ ವೇತನ ನೀಡದಿರುವ ಇನ್ನಿತರೆ ವಿಷಯಗಳಿಗೆ ಸಂಬಂಧಿಸಿದಂತೆ ಖಾಸಗಿ ಶಾಲೆಗಳ ವಿರುದ್ಧ ಸ್ವೀಕೃತವಾದ ದೂರುಗಳೆಷ್ಟು ; ಅವುಗಳಿಗೆ ಕೈಗೊಂಡ ಪರಿಹಾರಗಳೇನು ? (ತಾಲ್ಲೂಕುವಾರು, ಶಾಲಾವಾರು ಮಾಹಿತಿ ನೀಡುವುದು)

## ಭೂ ಒಡೆತನ ಯೋಜನೆಯಡಿ ಡಾ: ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಸಾಲ ಸೌಲಭ್ಯ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೫ (೧೧೧) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಜಿಲ್ಲೆಯಲ್ಲಿ ಕಳೆದ ೦೧ ವರ್ಷದ ಭೂ ಒಡೆತನಗಳಲ್ಲಿ ಯೋಜನೆಯಡಿ ಡಾ: ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಸಾಲ ಸೌಲಭ್ಯ ಕೋರಿ ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು ; (ಕಲಬುರಗಿ ಜಿಲ್ಲೆಯ ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಪೈಕಿ ಎಷ್ಟು ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿರುತ್ತದೆ; (ಕಲಬುರಗಿ ಜಿಲ್ಲೆಯ ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಈ ಯೋಜನೆಯಡಿ ಆಯ್ಕೆಯಾದ ಫಲಾನುಭವಿಗಳಿಗೆ ವಿಧಿಸಿದ ಷರತ್ತುಗಳನ್ನು ಉಲ್ಲಂಘನೆ ಮಾಡಿರುವವರ ವಿರುದ್ಧ ದಾಖಲಾದ ಪ್ರಕರಣಗಳೆಷ್ಟು ; ಮತ್ತು ಸದರಿಯವರ ವಿರುದ್ಧ ಕೈಗೊಂಡ ಕ್ರಮಗಳೇನು ?

## ಗ್ರಾಮ ಪಂಚಾಯತಿ ಮತ್ತು ಪ್ರಮುಖ ಪಟ್ಟಣ ಕೇಂದ್ರಗಳಲ್ಲಿ ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ತೆರೆಯುವ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮ ನಿರ್ದೇಶನ ಹೊಂದಿದವರು):-**

೧೩೬ (೯೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೯-೨೦ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಮುಖ್ಯಮಂತ್ರಿಗಳು ಘೋಷಿಸಿದಂತೆ, ೧೦೦೦ ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ರಾಜ್ಯದ ಹೋಬಳಿ ಕೇಂದ್ರದಲ್ಲಿ ಸ್ಥಾಪಿಸಲಾಗಿದೆಯೇ; ಹಾಗಿದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು;

(ಆ) ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ಶಾಲಾ ಪ್ರವೇಶವನ್ನು ಶಿಶುವಿಹಾರದಿಂದ (Lower Kindergarten) ಪ್ರಾರಂಭಿಸಿ, ೧೨ನೇ ತರಗತಿಯುವರೆಗೆ ಶಾಲೆಗಳನ್ನು ನಡೆಸಲು ತೆರೆಯಲಾಗಿದೆಯೇ ; (ವಿವರ ನೀಡುವುದು)

(ಇ) ಸರ್ಕಾರ ಘೋಷಿಸಿದಂತೆ, ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ಕನ್ನಡ ಮತ್ತು ಇಂಗ್ಲೀಷ್ ಮಾಧ್ಯಮಗಳಲ್ಲಿ ವಿದ್ಯಾರ್ಥಿಗಳಿಗೆ ಶಿಕ್ಷಣವನ್ನು ಬೋಧಿಸಲಾಗುತ್ತಿದೆಯೇ; (ವಿವರ ನೀಡುವುದು)

(ಈ) ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಹೋಬಳಿ ಮಟ್ಟದಲ್ಲಿ ಪ್ರಾರಂಭಿಸಿರುವುದರಿಂದ, ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಪ್ರವೇಶ ಹೆಚ್ಚಳವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಹಾಗಿದ್ದಲ್ಲಿ, ರಾಜ್ಯ ಸರ್ಕಾರ ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಗ್ರಾಮ ಪಂಚಾಯತ್ ಕೇಂದ್ರಗಳಲ್ಲಿ ಮತ್ತು ಇತರೆ ಪ್ರಮುಖ ಪಟ್ಟಣಗಳಲ್ಲಿ ತೆರೆಯಲು ಹೊಂದಿರುವ ಯೋಜನೆಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

# ಸಮಾಜದ ಕೆಳವರ್ಗದ ಸಮುದಾಯಗಳಿಗೆ ಉನ್ನತ ಶಿಕ್ಷಣದ ಲಭ್ಯತೆ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮ ನಿರ್ದೇಶನ ಹೊಂದಿದವರು):–**

೧೩೭ (೯೨) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಖಾಸಗಿ ಶಿಕ್ಷಣ ಸಂಸ್ಥೆಗಳು ಸಮಾಜದ ಕೆಲವೇ ವರ್ಗಗಳ ಮತ್ತು ಸಮುದಾಯಗಳ ಹಿಡಿತದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸಮಾಜದ ಕೆಳವರ್ಗದ ಸಮುದಾಯಗಳಿಗೆ ಉನ್ನತ ಶಿಕ್ಷಣ ದೊರಕಬೇಕೆಂದರೆ ಕ್ಯಾಪಿಟೇಷನ್ ನಿರ್ಮೂಲನೆ ಹಾಗೂ ಈ ಸಮುದಾಯದ ಕೈಗೆ ಎಟುಕುವ ಬೋಧನಾ ಶುಲ್ಕ ದೊರೆತರೆ, ಈ ಸಮುದಾಯುಗಳು ಉನ್ನತ ಶಿಕ್ಷಣ ಪಡೆಯುಲು ಸಹಕಾರಿಯಾಗುವುದು ಎನ್ನುವುದು ನಿಜವಲ್ಲವೇ;

(ಇ) ಹಾಗಿದ್ದರೆ, ರಾಜ್ಯ ಸರ್ಕಾರ ರಾಜ್ಯ ಶಿಕ್ಷಣ ಹಣಕಾಸು ಸಂಸ್ಥೆಯೊಂದನ್ನು ಸ್ಥಾಪಿಸಿ, ಶಿಕ್ಷಣ ತಜ್ಞರು, ಸಮಾಜ ಸುಧಾರಕರು ಮತ್ತು ಸೇವಾ ಸಂಸ್ಥೆಗಳು ಹಾಗೂ ಇತರರು ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸಲು ಮತ್ತು ಉನ್ನತ ಶಿಕ್ಷಣ ಪಡೆಯಬಯುಸುವ ವಿದ್ಯಾರ್ಥಿಗಳಿಗೆ ಸರಳ ಬಡ್ಡಿ ದರದಲ್ಲಿ ಮತ್ತು ಸಾಲ ನೀಡುವಲ್ಲಿ ಕ್ಲಿಷ್ಟಕರ ನಿಬಂಧನೆಗಳು ಇಲ್ಲದೆ ಮಂಜೂರು ಮಾಡುವ ಸಂಸ್ಥೆಯೊಂದನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ; ಇಲ್ಲದಿದ್ದಲ್ಲಿ, ಇಂತಹ ರಾಜ್ಯ ಶಿಕ್ಷಣ ಹಣಕಾಸು ಸಂಸ್ಥೆಯನ್ನು ಸ್ಥಾಪಿಸಲು ರಾಜ್ಯ ಸರ್ಕಾರ ಮುಂದಾಗುವುದೇ ? (ಮಾಹಿತಿ ನೀಡುವುದು)

## ಅರಣ್ಯ ನಿಧಿ ಬಳಕೆ ಮತ್ತು ಯೋಜನಾ ಪ್ರಾಧಿಕಾರದಿಂದ ಪಡೆದ ಅನುದಾನದ ಸದ್ಬಳಕೆ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮ ನಿರ್ದೇಶನ ಹೊಂದಿದವರು):–**

೧೩೮ (೯೧) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರಿದೂಗಿಸುವ ಅರಣ್ಯ ನಿಧಿ ಬಳಕೆ ಮತ್ತು ಯೋಜನಾ ಪ್ರಾಧಿಕಾರ (Compensatory Afforestation Farm Management and Planning Authority - CAMPA) ಅಡಿಯಲ್ಲಿ ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರದಿಂದ ಕಳೆದ ೩ ವರ್ಷಗಳಲ್ಲಿ ಪಡೆದಿರುವ ಅನುದಾನವೆಷ್ಟು ; ಈ ಅನುದಾನವನ್ನು ಯಾವ ರೀತಿಯಲ್ಲಿ ಸದ್ಬಳಕೆ ಮಾಡಿಕೊಳ್ಳಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ರಾಜ್ಯದಲ್ಲಿ ಈ ಅನುದಾನದಲ್ಲಿ ಅರಣ್ಯೀಕರಣಗೊಳಿಸಲು ಜಿಲ್ಲಾವಾರು ಸ್ವಾಧೀನ ಪಡಿಸಿಕೊಂಡಿರುವ ಜಮೀನು ಎಷ್ಟು ಮತ್ತು ಖರ್ಚು ಮಾಡಿರುವ ಅನುದಾನವೆಷ್ಟು ? (ವಿವರ ನೀಡುವುದು)

## ತ್ಯಾಜ್ಯ ಮತ್ತು ಬ್ಯಾಟರಿಗಳನ್ನು ಸುಡುವಿಕೆಯಿಂದ ಆಗುತ್ತಿರುವ ಪರಿಸರ ಮಾಲಿನ್ಯ ಕುರಿತು

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮ ನಿರ್ದೇಶನ ಹೊಂದಿದವರು):–**

೧೩೯ (೯೭) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಕೆಲವೊಂದು ಕೈಗಾರಿಕೆಗಳು ತ್ಯಾಜ್ಯ ಮತ್ತು ಬ್ಯಾಟರಿಗಳನ್ನು ಸುಡುವ ಮೂಲಕ ಕೆಲವೊಂದು ಲೋಹಗಳನ್ನು

ಹೊರತೆಗೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಮತ್ತು ಇಂತಹ ಕೃತ್ಯಗಳಿಂದ ಪರಿಸರ ಮಾಲಿನ್ಯವಾಗುತ್ತಿರುವುದಲ್ಲದೆ, ಜನರಲ್ಲಿ ಮಾರಣಾಂತಿಕ ಕಾಯಿಲೆಯಾದ ಶ್ವಾಸಕೋಶದ ಕ್ಯಾನ್ಸರ್ ಹೆಚ್ಚಾಗುತ್ತಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಇಂತಹ ಕೃತ್ಯಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಪ್ರತಿವರ್ಷ ಉತ್ಪನ್ನವಾಗುವ e-waste ಪ್ರಮಾಣ ಎಷ್ಟು ; ಈ e-waste ನಲ್ಲಿ ಎಷ್ಟು ಪ್ರಮಾಣದಷ್ಟನ್ನು ಮರುಬಳಕೆ ಮಾಡಲಾಗುತ್ತಿದೆ ? (ಜಿಲ್ಲಾವಾರು ಪೂರ್ಣ ಮಾಹಿತಿ ನೀಡುವುದು)

## ಕೊಡಗು ಜಿಲ್ಲೆಯಲ್ಲಿ ಗಿರಿಜನ ಹಾಡಿಗಳಿಗೆ ಸೌಲಭ್ಯ ಕಲ್ಪಿಸುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೦ (೧೨೯) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿನ ಕಾಡಿನಂಚಿನ ಗ್ರಾಮಗಳು ಹಾಗೂ ಹಾಡಿಗಳಲ್ಲಿ ವಾಸವಾಗಿರುವ ಗಿರಿಜನರಿಗೆ ಇದುವರೆವಿಗೂ ಕನಿಷ್ಠ ಮೂಲಭೂತ ಸೌಲಭ್ಯಗಳು ಸಿಕ್ಕದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸರ್ಕಾರ ಇದುವರೆಗೂ ಈ ಗಿರಿಜನರಿಗೆ ಕನಿಷ್ಠ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸದೇ ಇರಲು ಕಾರಣಗಳೇನು;

(ಇ) ಯಾವ ಕಾಲಮಿತಿಯೊಳಗೆ, ಗಿರಿಜನರು ವಾಸವಾಗಿರುವ ಜಿಲ್ಲೆಯಲ್ಲಿನ ಕಾಡಿನಂಚಿನ ಗ್ರಾಮಗಳು ಹಾಗೂ ಹಾಡಿಗಳಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗುವುದು ?

## ಕೊಡಗು ಜಿಲ್ಲೆಯಲ್ಲಿ ಕಾಡಾನೆ ಹಾವಳಿ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೧ (೧೨೮) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ಕಾಡಾನೆ ದಾಳಿ ಪ್ರಕರಣಗಳು ನಿರಂತರವಾಗಿ ವರದಿಯಾಗುತ್ತಿದ್ದು, ನಗರ ಹಾಗೂ ಪಟ್ಟಣ ಪ್ರದೇಶಗಳಿಗೂ ಕಾಡಾನೆಗಳು ದಾಂಗುಡಿ ಇಟ್ಟು ದಾಳಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ಕಾಡಾನೆ ದಾಳಿ ತಪ್ಪಿಸಲು ಜಿಲ್ಲೆಯಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಕಳೆದ ಮೂರು ವರ್ಷಗಳಲ್ಲಿ ಕಾಡಾನೆ ದಾಳಿ ತಪ್ಪಿಸುವ ಸಲುವಾಗಿ ವಿನಿಯೋಗಿಸಿರುವ ಅನುದಾನವೆಷ್ಟು? (ಕೈಗೊಂಡಿರುವ ಕಾಮಗಾರಿಗಳ ಸಂಪೂರ್ಣ ವಿವರ ನೀಡುವುದು)

## ಕೊಡಗು ಜಿಲ್ಲೆಯಲ್ಲಿ ವನ್ಯಜೀವಿ–ಮಾನವ ಸಂಘರ್ಷ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೨ (೧೨೭) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ದಿನದಿಂದ ದಿನಕ್ಕೆ ಹುಲಿ, ಚಿರತೆ ಕಾಡುಹಂದಿ ಸೇರಿದಂತೆ ವನ್ಯಜೀವಿಗಳ ಉಪಟಳ ಹೆಚ್ಚುತ್ತಲೇ ಇದ್ದು, ರೈತರಿಗೆ ಹಾಗೂ ಸಾರ್ವಜನಿಕರಿಗೆ ಸಾಕಷ್ಟು ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ವನ್ಯಜೀವಿ–ಮಾನವ ಸಂಘರ್ಷ ತಪ್ಪಿಸಲು ಜಿಲ್ಲೆಯಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಈ ರೀತಿ ವನ್ಯಜೀವಿಗಳ ಉಪಟಳ ಸತತವಾಗಿ ಹೆಚ್ಚುತ್ತಲೇ ಇರುವುದಕ್ಕೆ ಸರ್ಕಾರ ಗುರುತಿಸಿರುವ ವೈಜ್ಞಾನಿಕ ಕಾರಣಗಳೇನು;

(ಈ) ಈ ರೀತಿ ಗುರುತಿಸಿರುವ ವೈಜ್ಞಾನಿಕ ಕಾರಣಗಳನ್ನು ಗಮನದಲ್ಲಿ ಇಟ್ಟುಕೊಂಡು ಸರ್ಕಾರ ರೂಪಿಸಿರುವ ಶಾಶ್ವತ ಪರಿಹಾರ ಕ್ರಮಗಳೇನು ?

## ಕೋವಿಡ್ ಸಂಕಷ್ಟದ ಪರಿಸ್ಥಿತಿಯಲ್ಲೂ ಸಂಪೂರ್ಣ ಫೀ ಪಾವತಿಸುವಂತೆ ಖಾಸಗಿ ಶಿಕ್ಷಣ ಸಂಸ್ಥೆಗಳು ಒತ್ತಾಯಿಸುತ್ತಿರುವ ಕುರಿತು.

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೩ (೧೨೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳು ೨೦೨೦–೨೧ನೇ ಶೈಕ್ಷಣಿಕ ವರ್ಷಕ್ಕೆ ಸಂಬಂಧಿಸಿದಂತೆ, ವಿದ್ಯಾರ್ಥಿಗಳ ಸಂಪೂರ್ಣ ಫೀ ಪಾವತಿಸಲೇಬೇಕು ಎಂದು ಕೋವಿಡ್ ಸಂಕಷ್ಟದ ಪರಿಸ್ಥಿತಿಯಲ್ಲೂ ಪೋಷಕರಿಗೆ ಒತ್ತಾಯಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸದರಿ ಶಿಕ್ಷಣ ಸಂಸ್ಥೆಗಳು ಆನ್‌ಲೈನ್ ತರಗತಿಗಳನ್ನು ನಡೆಸಿರುವುದನ್ನು ಬಿಟ್ಟರೆ, ಈ ಹಿಂದಿನ ವರ್ಷಗಳಲ್ಲಿ ಒದಗಿಸಿದ ಬಹುತೇಕ ಸೌಲಭ್ಯಗಳನ್ನು ವಿದ್ಯಾರ್ಥಿಗಳಿಗೆ ನೀಡಿರುವುದಿಲ್ಲ ಎಂಬ ಮಾಹಿತಿ ಸರ್ಕಾರದ ಗಮನದಲ್ಲಿದೆಯೇ;

(ಇ) ಇದ್ದಲ್ಲಿ, ಈ ರೀತಿ ಅವೈಜ್ಞಾನಿಕವಾಗಿ ವಿದ್ಯಾರ್ಥಿಗಳ ಪೂರ್ಣ ಫೀ ಪಾವತಿಸಲೇಬೇಕು ಎಂದು ಪಟ್ಟು ಹಿಡಿದಿರುವ ಖಾಸಗಿ ಶಿಕ್ಷಣ ಸಂಸ್ಥೆಗಳ ಮೇಲೆ ಸರ್ಕಾರ ಇದುವರೆಗೆ ಏನು ಕ್ರಮ ಕೈಗೊಂಡಿದೆ;

(ಈ) ಕೋವಿಡ್ ಸಂಕಷ್ಟದ ಪರಿಸ್ಥಿತಿಯಲ್ಲೂ ವಿದ್ಯಾರ್ಥಿಗಳ ಪೂರ್ಣ ಫೀ ಪಾವತಿಸಲೇಬೇಕು ಎಂಬ ಖಾಸಗಿ ಶಿಕ್ಷಣ ಸಂಸ್ಥೆಗಳ ನಿಲುವಿಗೆ ಸರ್ಕಾರದ ಸ್ಪಷ್ಟ ನಿಲುವೇನು ?

## ಸಮಾಜ ಕಲ್ಯಾಣ ಇಲಾಖೆಯಿಂದ ವಿದ್ಯಾರ್ಥಿನಿಲಯಗಳನ್ನು ತೆರೆಯದಿರುವ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :-**

೧೪೪ (೧೫೬) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ನಡೆಸುತ್ತಿರುವ ವಿದ್ಯಾರ್ಥಿನಿಲಯಗಳನ್ನು ಕೋವಿಡ್-೧೯ ಹಿನ್ನೆಲೆಯಲ್ಲಿ ಇನ್ನೂ ತೆರೆಯದಿರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಪೂರ್ಣ ಸುರಕ್ಷೆಯೊಂದಿಗೆ ವಿದ್ಯಾರ್ಥಿನಿಲಯಗಳನ್ನು ತೆರೆಯಲು ಕ್ರಮ ಕೈಗೊಳ್ಳಲಾಗುವುದೇ ?

## ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಯನ್ನು ತೊರೆದಿರುವ ಮಕ್ಕಳ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–**

೧೪೫ (೧೫೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೋವಿಡ್–೧೯ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣವನ್ನು ತೊರೆದಿರುವ ಮಕ್ಕಳ ಸಂಖ್ಯೆ ಎಷ್ಟು;

(ಆ) ಶಿಕ್ಷಣವನ್ನು ಅರ್ಧಕ್ಕೆ ಮೊಟಕುಗೊಳಿಸಿರುವ ಮಕ್ಕಳನ್ನು ಪುನಃ ಶಾಲೆಗಳಿಗೆ ಕರೆತರುವಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದ ವಿಶ್ವವಿದ್ಯಾನಿಲಯಗಳಲ್ಲಿ ಕೃತಿಚೌರ್ಯವನ್ನು ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–**

೧೪೬ (೧೫೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ ಕೃತಿಚೌರ್ಯಕ್ಕೆ ಸಂಬಂಧಿಸಿದಂತೆ ಇರುವ ಪ್ರಕರಣಗಳೆಷ್ಟು; ಯಾರ ಮೇಲೆ ಯಾವ ಯಾವ ಆಪಾದನೆಗಳಿವೆ;

(ಆ) ತನಿಖೆಯ ಹಂತದಲ್ಲಿರುವ ಪ್ರಕರಣಗಳೆಷ್ಟು; ಎಷ್ಟು ಪ್ರಕರಣಗಳಲ್ಲಿ ಕೃತಿಚೌರ್ಯ ಸಾಬೀತಾಗಿದೆ; ಕೈಗೊಂಡ ಕ್ರಮಗಳೇನು ?

## ಕಾರ್ಮಿಕ ಕಲ್ಯಾಣದ ಯೋಜನೆ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೪೭ (೧೭೭) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರ್ಮಿಕ ಕಲ್ಯಾಣಕ್ಕಾಗಿ ಸರ್ಕಾರವು ರೂಪಿಸಿರುವ ಯೋಜನೆ/ ಕಾರ್ಯಕ್ರಮಗಳು ಯಾವುವು; (ಮಾಹಿತಿ ನೀಡುವುದು)

(ಆ) ಇದುವರೆಗೂ ಯಾವ ಯಾವ ರೀತಿಯ ಕಾರ್ಮಿಕರನ್ನು ಗುರುತಿಸಲಾಗಿದೆ; ಈ ರೀತಿಯ ಎಷ್ಟು ಜನ ಕಾರ್ಮಿಕರಿದ್ದಾರೆ; (ಸಂಘಟಿತ ಮತ್ತು ಅಸಂಘಟಿತ ಪ್ರತ್ಯೇಕವಾಗಿ ವಿವರ ನೀಡುವುದು)

(ಇ) ಈ ರೀತಿ ಗುರುತಿಸಲಾದ ಕಾರ್ಮಿಕರಿಗೆ ಸರ್ಕಾರವು ರೂಪಿಸಿರುವ ಯೋಜನೆ/ ಕಾರ್ಯಕ್ರಮಗಳನ್ನು ಸಕಾಲದಲ್ಲಿ ಅನುಷ್ಠಾನಗೊಳಿಸಲು) ಅನುಸರಿಸುತ್ತಿರುವ ಕ್ರಮಗಳೇನು; (ವಿವರ ನೀಡುವುದು)

(ಈ) ಇಲಾಖಾ ವತಿಯಿಂದ ಈ ತಹಲ್‌ವರೆಗೂ ನೋಂದಣಿ ಮಾಡಿಕೊಂಡಿರುವ ಸಂಘಟಿತ ಮತ್ತು ಅಸಂಘಟಿತ ಕಾರ್ಮಿಕರ ಸಂಖ್ಯೆ ಎಷ್ಟು ;

(ಉ) ಇಂತಹ ಕಾರ್ಮಿಕರಿಗೆ ಸರ್ಕಾರದ ವತಿಯಿಂದ ನೀಡಲಾಗುತ್ತಿರುವ ಸೌಲಭ್ಯಗಳ ವಿವರಗಳನ್ನು ನೀಡುವುದು; (ಕಟ್ಟಡ ಕಾರ್ಮಿಕರನ್ನು ಒಳಗೊಂಡಂತೆ)

(ಊ) ಕಳೆದ ೩ ವರ್ಷಗಳಲ್ಲಿ ಇಲಾಖೆಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು; ಇದನ್ನು ಯಾವ ಯಾವ ಉದ್ದೇಶಗಳಿಗೆ ಬಳಕೆ ಮಾಡಲಾಗಿದೆ ? (ಉದ್ದೇಶವಾರು ವಿವರ ನೀಡುವುದು)

## ವಾಣಿಜ್ಯ ಶಾಸ್ತ್ರ ಬೋಧನೆ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೪೮ (೧೭೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಪದವಿಪೂರ್ವ ಶಿಕ್ಷಣ ಇಲಾಖೆಯಿಂದ ವಾಣಿಜ್ಯ ಶಾಸ್ತ್ರ ಸಂಯೋಜನೆಯನ್ನು ಮಂಜೂರು ಮಾಡಿ, ಈ ಸಂಯೋಜನೆಗೆ ಬೋಧನೆ ಮಾಡುವ ವಾಣಿಜ್ಯ ಶಾಸ್ತ್ರ ಉಪನ್ಯಾಸಕರ ಹುದ್ದೆ ಮಂಜೂರು ಮಾಡಲಾಗಿದೆಯೇ;

(ಆ) ವಾಣಿಜ್ಯ ಶಾಸ್ತ್ರ ಹುದ್ದೆ ಮಂಜೂರು ಮಾಡದೇ ಇದ್ದಲ್ಲಿ, ವಾಣಿಜ್ಯ ಶಾಸ್ತ್ರ ಪಠ್ಯವನ್ನು ಬೋಧಿಸುವ ವ್ಯವಸ್ಥೆಯನ್ನು ಪದವಿಪೂರ್ವ ಶಿಕ್ಷಣ ಇಲಾಖೆಯು ಮಾಡಿದೆಯೇ;

(ಇ) ವಾಣಿಜ್ಯ ಶಾಸ್ತ್ರ ಹುದ್ದೆಗಳು ಮಂಜೂರು ಮಾಡದೇ ಬೋಧನೆ ಮಾಡಲು ಅತಿಥಿ ಉಪನ್ಯಾಸಕರ ನೇಮಕಾತಿಗೆ ಸರ್ಕಾರ ಚಿಂತನೆ ನಡೆಸಿದೆಯೇ ? (ಮಾಹಿತಿ ನೀಡುವುದು)

## ಉಪನ್ಯಾಸಕರ ಹುದ್ದೆಗೆ ಬಡ್ತಿ ನೀಡುವ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೪೯ (೧೬೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಪ್ರೌಢಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹ ಶಿಕ್ಷಕರಿಗೆ ಉಪನ್ಯಾಸಕರ ಹುದ್ದೆಗೆ ಬಡ್ತಿ ನೀಡುವ ಪ್ರಕ್ರಿಯೆ ಚಾಲನೆಯಲ್ಲಿ ಇದೆಯೇ;

(ಆ) ಬಹಳಷ್ಟು ವರ್ಷಗಳಿಂದ ಉಪನ್ಯಾಸಕರ ಹುದ್ದೆಗೆ ಅರ್ಹತೆ ಹೊಂದಿದ್ದರೂ ಬಹಳಷ್ಟು ಪ್ರಾಥಮಿಕ ಶಾಲಾ ಸಹ ಶಿಕ್ಷಕರ ಉಪನ್ಯಾಸಕರ ಹುದ್ದೆಯ ಬಡ್ತಿಯಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದರೆ, ಸರ್ಕಾರವು ಈ ಬಗ್ಗೆ ಕೈಗೊಂಡಿರುವ ಕ್ರಮ ಏನು;

(ಈ) ಯಾವ ಕಾಲಮಿತಿಯೊಳಗೆ ಸಹ ಶಿಕ್ಷಕರಿಗೆ ಉಪನ್ಯಾಸಕರ ಹುದ್ದೆಗೆ ಬಡ್ತಿ ನೀಡುವ ಪ್ರಕ್ರಿಯೆ ಪೂರ್ಣಗೊಳಿಸಲಾಗುವುದು ? (ಮಾಹಿತಿ ನೀಡುವುದು)

## ಕೌಶಲ್ಯಾಭಿವೃದ್ದಿ ಯೋಜನೆಗಳ ಬಗ್ಗೆ

**ಡಾ॥ ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೫೦ (೧೭೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೌಶಲ್ಯಾಭಿವೃದ್ಧಿ ಇಲಾಖೆಯು ಜಾರಿಗೊಳಿಸುತ್ತಿರುವ ಯೋಜನೆ/ ಕಾರ್ಯಕ್ರಮಗಳು ಯಾವುವು; ಫಲಾಪೇಕ್ಷಿಗಳ ಆಯ್ಕೆಗೆ ಅನುಸರಿಸುತ್ತಿರುವ ಮಾನದಂಡಗಳು ಯಾವುವು; (ಸಂಪೂರ್ಣ ವಿವರ ನೀಡುವುದು)

(ಆ) ಈ ಯೋಜನೆ/ಕಾರ್ಯಕ್ರಮಗಳಿಂದ ಉದ್ಯೋಗ ಸೃಷ್ಟಿಗೆ ಅವಕಾಶ ಒದಗಿಸಲಾಗಿದೆಯೇ; (ಸಂಪೂರ್ಣ ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಇಲಾಖಾ ವತಿಯಿಂದ ಕೈಗೊಂಡಿರುವ

ಯೋಜನೆ/ಕಾರ್ಯಕ್ರಮಗಳು ಯಾವುವು; ಬಿಡುಗಡೆಯಾದ ಮತ್ತು ಬಳಕೆ ಮಾಡಲಾದ ಅನುದಾನ ಎಷ್ಟು; (ಯೋಜನಾ/ ಕಾರ್ಯಕ್ರಮವಾರು ವಿವರ ನೀಡುವುದು)

(ಈ) ಈ ಯೋಜನೆ/ಕಾರ್ಯಕ್ರಮಗಳನ್ನು ಸದುಪಯೋಗಪಡಸಿಕೊಂಡ ಫಲಾನುಭವಿಗಳ ಸಂಖ್ಯೆ ಎಷ್ಟು ? (ವಿವರಗಳನ್ನು ನೀಡುವುದು)

(ಉ) ಇಂತಹ ಕಾರ್ಮಿಕರಿಗೆ ಸರ್ಕಾರದ ವತಿಯಿಂದ ನೀಡಲಾಗುತ್ತಿರುವ ಸೌಲಭ್ಯಗಳ ವಿವರಗಳನ್ನು ನೀಡುವುದು ; (ಕಟ್ಟಡ ಕಾರ್ಮಿಕರನ್ನು ಒಳಗೊಂಡಂತೆ)

(ಊ) ಕಳೆದ ೩ ವರ್ಷಗಳಲ್ಲಿ ಇಲಾಖೆಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು ; ಇದನ್ನು ಯಾವ ಯಾವ ಉದ್ದೇಶಗಳಿಗೆ ಬಳಕೆ ಮಾಡಲಾಗಿದೆ ? (ಉದ್ದೇಶವಾರು ವಿವರ ನೀಡುವುದು)

## ವಿದ್ಯಾರ್ಥಿನಿಯರಲ್ಲಿ ಉನ್ನತ ಶಿಕ್ಷಣ ಉತ್ತೇಜಿಸುವ ಬಗ್ಗೆ

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೧ (೧೩೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿದ್ಯಾರ್ಥಿನಿಯರಲ್ಲಿ ಉನ್ನತ ಶಿಕ್ಷಣವನ್ನು ಉತ್ತೇಜಿಸಲು ಎಲ್ಲಾ ವಿದ್ಯಾರ್ಥಿನಿಯರಿಗೆ ಬೋಧನಾ ಶುಲ್ಕ ಮತ್ತು ಪ್ರಯೋಗಾಲಯ ಶುಲ್ಕದಿಂದ ವಿನಾಯಿತಿ ನೀಡಲಾಗಿದೆಯೇ; ಕಳೆದ ೫ ವರ್ಷಗಳಲ್ಲಿ ಈ ಕುರಿತು ಎಷ್ಟು ಮೊತ್ತವನ್ನು ಅನುದಾನಿತ ಕಾಲೇಜುಗಳಿಗೆ ಬಿಡುಗಡೆ ಮಾಡಲಾಗಿದೆ;

(ಆ) ವಿದ್ಯಾರ್ಥಿನಿಯರಿಗೆ ಬೋಧನಾ ಶುಲ್ಕ ಮತ್ತು ಪ್ರಯೋಗಾಲಯ ಶುಲ್ಕದಿಂದ ವಿನಾಯಿತಿ ನೀಡಿದ ಬಳಿಕವು ೬೫,೧೨೦ ಕ್ಕೂ ಹೆಚ್ಚು ವಿದ್ಯಾರ್ಥಿನಿಯರಿಂದ ರೂ. ೪೪.೯೩ ಕೋಟಿ ಹಣ ಸಂಗ್ರಹಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಉಚಿತ ಶಿಕ್ಷಣ ಎಂದ ಬಳಿಕವೂ ವಿದ್ಯಾರ್ಥಿನಿಯರಿಂದ ಬೋಧನಾ ಶುಲ್ಕ ಮತ್ತು ಪ್ರಯೋಗಾಲಯ ಶುಲ್ಕ ಸಂಗ್ರಹಿಸಿದ ಅನುದಾನಿತ ಕಾಲೇಜುಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ;

(ಈ) ಸರ್ಕಾರವು ಹೆಣ್ಣು ಮಕ್ಕಳ ಉನ್ನತ ಶಿಕ್ಷಣಕ್ಕೆ ನೀಡುತ್ತಿರುವ ಪ್ರೋತ್ಸಾಹವು ಅಧಿಕಾರಿಗಳ ನಿರ್ಲಕ್ಷದಿಂದ ರಾಜ್ಯದ ಹೆಚ್ಚು ಮಕ್ಕಳಿಗೆ ತಲುಪದಿರುವ ಕುರಿತು ಸರ್ಕಾರದ ನಿಲುವೇನು; ಈ ಸೌಲಭ್ಯಗಳು ಹೆಣ್ಣು ಮಕ್ಕಳಿಗೆ ತಲುಪುವಂತಾಗಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ವೈದ್ಯಕೀಯ ಶಿಕ್ಷಣ ಪ್ರವೇಶಾತಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೨ (೧೩೫) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೨೦–೨೧ ನೇ ಶೈಕ್ಷಣಿಕ ವರ್ಷದಲ್ಲಿ ವೈದ್ಯಕೀಯ ಪ್ರವೇಶಕ್ಕಾಗಿ ನಡೆಸಲಾದ ಸಂದರ್ಶನಕ್ಕೆ ಹಾಜರಾಗಿರುವ ಎಷ್ಟು ವಿದ್ಯಾರ್ಥಿಗಳಿಗೆ ವೈದ್ಯಕೀಯ ಶಿಕ್ಷಣಕ್ಕಾಗಿ ಪ್ರವೇಶಾವಕಾಶ ದೊರೆಯಲಿಲ್ಲ; ಇದರಲ್ಲಿ ರಾಜ್ಯದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;

(ಆ) ಸಂದರ್ಶನಕ್ಕೆ ಹಾಜರಾಗಿರುವ ಅನ್ಯ ರಾಜ್ಯಗಳ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಅದರಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ವೈದ್ಯಕೀಯ ಪ್ರವೇಶಾವಕಾಶ ದೊರೆತಿದೆ;

(ಇ) ೨೦೨೦-೨೧ ನೇ ಶೈಕ್ಷಣಿಕ ವರ್ಷದಲ್ಲಿ ವೈದ್ಯಕೀಯ ಪ್ರವೇಶಕ್ಕಾಗಿ ನಡೆಸಲಾದ ಸಂದರ್ಶನಕ್ಕೆ ಹಾಜರಾಗಿರುವ ಒಟ್ಟು ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಇದರಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ವೈದ್ಯಕೀಯ ಕಾಲೇಜುಗಳಲ್ಲಿ ಪ್ರವೇಶಾತಿ ದೊರೆತಿದೆ;

(ಈ) ೨೦೨೦-೨೧ ನೇ ಶೈಕ್ಷಣಿಕ ವರ್ಷದಲ್ಲಿ ವೈದ್ಯಕೀಯ ಪ್ರವೇಶಕ್ಕಾಗಿ ನಡೆಸಲಾದ ಸಂದರ್ಶನಕ್ಕೆ ಹಾಜರಾಗಿ ಪ್ರವೇಶಾತಿಗೆ ಅವಕಾಶ ಸಿಗದಿರುವ ವಿದ್ಯಾರ್ಥಿಗಳಿದ್ದರೂ ವೈದ್ಯಕೀಯ ಕಾಲೇಜುಗಳಲ್ಲಿ ಸೀಟುಗಳು ಉಳಿಯಲು ಕಾರಣವೇನು; ಮೊದಲನೇ ಸುತ್ತಿನಲ್ಲಿ ಉಳಿದಿರುವ ಸೀಟುಗಳು ಎಷ್ಟು ? (ಕಾಲೇಜುವಾರು ಮಾಹಿತಿ ನೀಡುವುದು)

## ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೋಗಿಗಳ ಚಿಕಿತ್ಸೆ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೫೩ (೧೩೬) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ೫ ವರ್ಷಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೋಗಿಗಳಿಗೆ ಉಚಿತ ಚಿಕಿತ್ಸೆ ನೀಡಲು ಬಳಕೆ ಮಾಡಿದ ಮೊತ್ತವೆಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವೈದ್ಯಕೀಯ ವಿದ್ಯಾರ್ಥಿಗಳಿಗೆ ಯಾವ ಯಾವ ಸೌಲಭ್ಯಗಳನ್ನು ನೀಡಲಾಗುತ್ತದೆ ?

## ತಳಿ ಸಂವರ್ಧನೆ ಯೋಜನೆಯ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೫೪ (೧೩೮) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ೫ ವರ್ಷಗಳಲ್ಲಿ ತಳಿ ಸಂವರ್ಧನೆ ಯೋಜನೆಯ ಅನ್ವಯ ಎಷ್ಟು ಪ್ರಾಣಿಗಳ ತಳಿ ಸಂವರ್ಧನೆ ನಡೆಸಲಾಗಿದೆ; ಇದಕ್ಕಾದ ವೆಚ್ಚವೆಷ್ಟು;

(ಆ) ಮೃಗಾಲಯದ ನಿರ್ವಹಣೆಯನ್ನು ಖಾಸಗಿ ಸಂಸ್ಥೆಗಳಿಗೆ ನೀಡುವ ಪ್ರಸ್ತಾವ ಸರ್ಕಾರದ ಮುಂದಿದೆಯೇ; ಇದುವರೆಗೆ ಎಷ್ಟು ಖಾಸಗಿ ಸಂಸ್ಥೆಗಳು ಮೃಗಾಲಯದ ನಿರ್ವಹಣೆ ನಡೆಸುತ್ತಿವೆ; ಅವು ಯಾವುವು;

(ಇ) ಬನ್ನೇರುಘಟ್ಟ ಜೈವಿಕ ಉದ್ಯಾನವನದ ಕರಡಿ ರಕ್ಷಣಾ ಕೇಂದ್ರವನ್ನು ಯಾರು ನಿರ್ವಹಿಸುತ್ತಿದ್ದಾರೆ; ಸರ್ಕಾರೇತರ ಸಂಸ್ಥೆಗೆ ನಿರ್ವಹಣೆಗೆ ನೀಡಿದ್ದಲ್ಲಿ, ಯಾವ ಆಧಾರದ ಮೇಲೆ ನೀಡಲಾಗಿದೆ; ಈ ಸಂಸ್ಥೆಯು ಸರ್ಕಾರಕ್ಕೆ ಎಷ್ಟು ಮೊತ್ತವನ್ನು ಪಾವತಿಸುತ್ತಿದೆ; ಸರ್ಕಾರವೇ ನಿರ್ವಹಣಾ ವೆಚ್ಚವನ್ನು ಭರಿಸುವುದಾದಲ್ಲಿ ಖಾಸಗಿ ಸಂಸ್ಥೆಗೆ ನಿರ್ವಹಣೆಗೆ ನೀಡಲು ಕಾರಣವೇನು ?

## ಕಟ್ಟಡ ಕಾರ್ಮಿಕರ ಕಲ್ಯಾಣ ನಿಧಿಯ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೫೫ (೧೩೯) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೪-೧೫ ರಿಂದ ೨೦೧೮-೧೯ ರವರೆಗೆ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ಲಭ್ಯವಿದ್ದ ಮೊತ್ತವೆಷ್ಟು; (ವರ್ಷವಾರು ವಿವರ ನೀಡುವುದು)

(ಆ) ಈ ಅವಧಿಯಲ್ಲಿ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ಲಭ್ಯವಿದ್ದ ಮೊತ್ತದಲ್ಲಿ ಎಷ್ಟು ಮೊತ್ತವನ್ನು ಕಲ್ಯಾಣ ಯೋಜನೆಗಳಿಗೆ ಬಳಸಿಕೊಳ್ಳಲಾಗಿತ್ತು; ಯಾವ ಯಾವ ಯೋಜನೆಗಳಿಗೆ ಎಷ್ಟು ಮೊತ್ತ ಬಳಸಿಕೊಳ್ಳಲಾಗಿತ್ತು; (ಫಲಾನುಭವಿಗಳ ಹೆಸರಿನೊಂದಿಗೆ ಮಾಹಿತಿ ನೀಡುವುದು)

(ಇ) ೨೦೧೪-೧೫ ರಿಂದ ೨೦೧೮-೧೯ರವರೆಗೆ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ರೂ.೨೩೫೮.೯೪ ಕೋಟಿಗಳ ಅಸಮರ್ಪಕ ನಿರ್ವಹಣೆಯಿಂದಾಗಿ ಅನಗತ್ಯ ವೆಚ್ಚವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಯಾರ ಮೇಲೆ ಕ್ರಮ ಕೈಗೊಳ್ಳಲಾಗಿದೆ ?

## ಹುಣಸೂರು ಪಟ್ಟಣದ ಲಕ್ಷ್ಮಣತೀರ್ಥ ನದಿಯನ್ನು ಸ್ವಚ್ಛತೆಗೊಳಿಸುವ ಬಗ್ಗೆ.

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫೬ (೮೮) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹುಣಸೂರು ಪಟ್ಟಣದ ಮಧ್ಯೆ ಹರಿಯುವ ಲಕ್ಷ್ಮಣತೀರ್ಥ ನದಿಯು ಕಲುಷಿತವಾಗಿದ್ದು, ಈ ನದಿಯನ್ನು ಮಾಲಿನ್ಯ ಮತ್ತು ಕಲುಷಿತ ಮುಕ್ತವಾಗಿಸಲು ಯೋಜನೆಯನ್ನು ರೂಪಿಸಲಾಗಿದೆಯೇ; ಯೋಜನೆಯ ವಿವರಗಳನ್ನು ಒದಗಿಸುವುದು;

(ಆ) ಈ ಯೋಜನೆಯ ಬಗ್ಗೆ ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ; ಕೇಂದ್ರ ಸರ್ಕಾರದಿಂದ ಈ ಯೋಜನೆಗೆ ನೆರವು ದೊರಕಲಿದೆಯೇ; ಈ ಯೋಜನೆಯನ್ನು ಜಾರಿಗೊಳಿಸುವ ಮೂಲಕ ಹುಣಸೂರು ಪಟ್ಟಣದ ಮಧ್ಯೆ ಹರಿಯುವ ಈ ನದಿಯನ್ನು ಮಾಲಿನ್ಯ ಮುಕ್ತವಾಗಿಸಿ ಸ್ವಚ್ಛತೆಯನ್ನು ಕಾಪಾಡಲು ಕ್ರಮ ಜರುಗಿಸಲಾಗುವುದೇ ?

## ಹೆಗ್ಗಡದೇವನ ಕೋಟೆ ಮತ್ತು ನಂಜನಗೂಡು ತಾಲ್ಲೂಕಿನಲ್ಲಿ ಆನೆಗಳ ಕಾಟದಿಂದ ಬೆಳೆನಾಶವಾಗಿರುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೭ (೬೬) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೆಗ್ಗಡದೇವನ ಕೋಟೆ ತಾಲ್ಲೂಕು, ನುಗು ಜಲಾಶಯದ ಹಿನ್ನೀರಿನಲ್ಲಿರುವ ಹಳೆಹೆಗ್ಗುಡಿಲು ಪುನರ್ ವಸತಿ ಗ್ರಾಮ ಹಾಗೂ ಸುತ್ತಮುತ್ತಲ ಗ್ರಾಮಗಳಲ್ಲಿ ಸತತವಾಗಿ ಕಾಡಾನೆಗಳು ಹಾಗೂ ಕಾಡುಹಂದಿಗಳಿಂದ, ಬೆಳೆ ನಾಶವಾಗಿ ರೈತರಿಗೆ ಬಹಳ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಭಾಗದ ಎಷ್ಟು ಗ್ರಾಮಗಳಲ್ಲಿ ಎಷ್ಟು ಬಾರಿ ಆನೆ ಹಾಗೂ ವನ್ಯಜೀವಿಗಳ ದಾಳಿ ಆಗಿದೆ; ಎಷ್ಟು ರೈತರ ಬೆಳೆ ನಾಶವಾಗಿದೆ; ರೈತರಿಗೆ ಒದಗಿಸಲಾದ ಪರಿಹಾರ ಎಷ್ಟು; (ವಿವರ ಒದಗಿಸುವುದು)

(ಆ) ಈ ಭಾಗದಲ್ಲಿ ಆನೆ ದಾಳಿ ತಡೆಗಟ್ಟಲು ನಿರ್ಮಿಸಿರುವ ಟ್ರೆಂಚ್(ಕಂದಕ)ಗಳಲ್ಲಿ ಹೂಳು ತುಂಬಿರುವುದು ಹಾಗೂ

ಅಳವಡಿಸಿರುವ ಸೋಲಾರ್ ಬೇಲಿ ಕಾರ್ಯನಿರ್ವಹಣೆ ಮಾಡದಿರುವುದರಿಂದ ಆನೆಗಳು ಸತತವಾಗಿ ಜಮೀನುಗಳ ಮೇಲೆ ದಾಳಿ ಮಾಡಿ ಬೆಳೆ ನಾಶ ಮಾಡುತ್ತಿರುವುದರಿಂದ ಕಂದಕ ಮತ್ತು ಸೋಲಾರ್ ಬೇಲಿಯನ್ನು ಸೂಕ್ತವಾಗಿ ನಿರ್ವಹಿಸುವ ಮೂಲಕ ಆನೆ ದಾಳಿಯನ್ನು ತಡೆಗಟ್ಟಲು ಕ್ರಮ ತೆಗೆದು ಕೊಳ್ಳಲಾಗುವುದೇ;

(ಇ) ನಂಜನಗೂಡು ತಾಲ್ಲೂಕು, ಕಸುವಿನಹಳ್ಳಿ, ವಾಕನಪುರ, ದೇಪಗೌಡನಪುರ, ಮಲ್ಲಹಳ್ಳಿ, ಕೆಲ್ಲೂರುಪುರ, ಸಿದ್ಧಯ್ಯನಹುಂಡಿ, ಮುಂತಾದ ಗ್ರಾಮಗಳಲ್ಲಿ ಕಾಡಾನೆಗಳ ರೈತರ ಜಮೀನುಗಳಲ್ಲಿ ಬೆಳೆದಿರುವ ಬೆಳೆಯನ್ನು ನಾಶಪಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಭಾಗದ ಎಷ್ಟು ಗ್ರಾಮಗಳಲ್ಲಿ ಎಷ್ಟು ಬಾರಿ ಆನೆ ಹಾಗೂ ವನ್ಯಜೀವಿಗಳ ದಾಳಿ ಆಗಿದೆ, ಹಾಗೂ ರೈತರ ಬೆಳೆ ನಾಶವಾಗಿದೆ, ರೈತರಿಗೆ ಒದಗಿಸಲಾದ ಪರಿಹಾರ ಎಷ್ಟು ? (ವಿವರ ಒದಗಿಸುವುದು)

## ಮಂಡ್ಯ ಜಿಲ್ಲೆಯಲ್ಲಿ ಗ್ರಂಥಾಲಯಗಳ ಸಂಖ್ಯೆಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫೮ (೧೫೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಡ್ಯ ಜಿಲ್ಲೆಯಲ್ಲಿ ಇರುವ ಸರ್ಕಾರಿ ಗ್ರಂಥಾಲಯಗಳ ಸಂಖ್ಯೆ ಎಷ್ಟು; (ಖಾಲಿ ಇರುವ ಹುದ್ದೆಗಳ ವಿವರವನ್ನು ಗ್ರಂಥಾಲಯವಾರು ವಿವರ ನೀಡುವುದು)

(ಆ) ಸದರಿ ಗ್ರಂಥಾಲಯಗಳಿಗೆ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು; ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗಿದೆ; ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲ ಮಿತಿಯೊಳಗೆ ಭರ್ತಿ ಮಾಡಲಾಗುವುದು;

(ಇ) ಹಾಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ನೀಡುತ್ತಿರುವ ವೇತನ ಎಷ್ಟು ? (ವಿವರ ನೀಡುವುದು)

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0–125/400 ಪ್ರತಿಗಳು/27–01–2021